ಸಂಪುಟ: 22, ಸಂಚಿಕೆ: 150, ಪುಟಗಳು: 8, ಸೋಮವಾರ, 10 ಮಾರ್ಚ್ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3




ಸುಭಾಷಿತ

ಅಧಿಕಾರ ಹೆಚ್ಚಿದಷ್ಟು ದುರುಪಯೋಗದ ಅಪಾಯ ಹೆಚ್ಚು.

। ಚಾಣಾಕ್ಯ

## ಪಂಚಾಂಗ

(ಸೋಮವಾರ 10, ಮಾರ್ಚ್-2025)

- ಶ್ರೀ ಕ್ರೋಧಿ ನಾಮ ಸಂವತ್ಸರ
- ಉತ್ತರಾಯಣ, ಶಿಶಿರ ಋತು
- ಪಾಲ್ಗುಣ ಮಾಸ, ಶುಕ್ಲ ಪಕ್ಷ
- ತಿಥಿ: ಏಕಾದಶಿ
- ನಕ್ಷತ್ರ: ಪುಷ್ಯ
- ರಾಹುಕಾಲ: 8:04 ರಿಂದ 9:34
- ಗುಳಿಕಕಾಲ: 2:04 ರಿಂದ 3:34
- ಯಮಗಂಡಕಾಲ: 11:04 ರಿಂದ 12:34

## ಸಂಕ್ಷಿಪ್ತ ಸುದ್ದಿ

### ತೆಲಂಗಾಣ ಸುರಂಗ ಕುಸಿತ



**ಹೈದರಬಾದ್:** ತೆಲಂಗಾಣದ ನಾಗರ್ ಕರ್ನೂಲ್ ಜಿಲ್ಲೆಯ ಶ್ರೀಶೈಲಂ ಎಡದಂಡೆ ಕಾಲುವೆಯ ನಿರ್ಮಾಣ ಹಂತದಲ್ಲಿದ್ದ ಸುರಂಗದ ಮೇಲ್ಛಾವಣಿ ಕುಸಿತ ಪ್ರಕರಣಕ್ಕೆ ಸಂಬಂಧಿಸಿದಂತೆ 16 ದಿನಗಳ ಬಳಿಕ ಓರ್ವ ಕಾರ್ಮಿಕನ ಶವ ಪತ್ತೆಯಾಗಿದ್ದು, ಇನ್ನೂ 7 ಕಾರ್ಮಿಕರನ್ನು ಪತ್ತೆಹಚ್ಚಬೇಕಿದೆ. ಮೃತ ಕಾರ್ಮಿಕನನ್ನು ಗುರುಪ್ರೀತ್ ಸಿಂಗ್ ಎಂದು ಗುರುತಿಸಲಾಗಿದ್ದು, ಮೃತದೇಹ ಯಂತ್ರದೊಳಗೆ ಸಿಲುಕಿಕೊಂಡಾಗ ಪತ್ತೆಯಾಗಿದೆ. ತೆಲಂಗಾಣ ಸಿಎಂ ಎ.ರೇವಂತ್ ರೆಡ್ಡಿ ಹಾಗೂ ನೀರಾವರಿ ಸಚಿವ ಎನ್ ಉತ್ತಮ್ ಕುಮಾರ್ ಸಂತಾಪ ಸೂಚಿಸಿದ್ದು, ಮೃತರ ಕುಟುಂಬಸ್ಥರಿಗೆ 25 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ.

» **16 ದಿನಗಳ ಬಳಿಕ ಓರ್ವ ಕಾರ್ಮಿಕನ ಶವ ಪತ್ತೆ**

ಪುಟ 2

### ವಿದೇಶಿ ಮಹಿಳೆ, ಹೋಮ್ ಸ್ಟೇ ಮಾಲೀಕೆ ಮೇಲೆ ಅತ್ಯಾಚಾರ ಕೇಸ್ ಮತ್ತೊಬ್ಬ ಆರೋಪಿ ಬಂಧನ



**ಕೊಪ್ಪಳ:** ಇಸ್ರೇಲ್‌ನ ಮಹಿಳೆ, ಹೋಮ್‌ಸ್ಟೇ ಮಾಲೀಕೆ ಮೇಲೆ ಸಾಮೂಹಿಕ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂರನೇ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಗಂಗಾವತಿಯ ಸಾಯಿ ನಗರದ ನಿವಾಸಿ ಶರಣಬಸವ (27) ಬಂಧಿತ ಆರೋಪಿ. ಕೊಪ್ಪಳ ಜಿಲ್ಲೆಯ ಗಂಗಾವತಿ ಗ್ರಾಮೀಣ ಠಾಣೆ ಪೊಲೀಸರು ಆರೋಪಿಯನ್ನು ಅರೆಸ್ಟ್ ಮಾಡಿದ್ದಾರೆ. ಗಾರೆ ಕೆಲಸ ಮಾಡಿಕೊಂಡಿದ್ದ ಶರಣಬಸವ ಘಟನೆ ನಂತರ ತಲೆಮರೆಸಿಕೊಂಡಿದ್ದ. ಆರೋಪಿ ತಮಿಳುನಾಡಿನ ಚೆನ್ನೈನಲ್ಲಿದ್ದ. ನಿನ್ನೆಯೇ ಆರೋಪಿಯನ್ನು ವಶಕ್ಕೆ ಪಡೆಯುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಪುಟ 2

## ಯಡಿಯೂರಪ್ಪ ಒಬ್ಬ ಬ್ಲಾಕ್‌ಮೇಲರ್! ಬಿಜೆಪಿ ಶಾಸಕನಿಂದ ಗಂಭೀರ ಆರೋಪ



**ದಾವಣಗೆರೆ:** ರಾಜ್ಯ ಬಿಜೆಪಿಯಲ್ಲಿ ಬಣ ಬಡಿದಾಟ ತಾರಕಕ್ಕೇರಿದ್ದು, ಬಿಜೆಪಿಯ ಹಿರಿಯ ನಾಯಕ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧವೇ ಸ್ವಪಕ್ಷದ ಶಾಸಕರೊಬ್ಬರು ಗಂಭೀರ ಆರೋಪ ಮಾಡಿದ್ದಾರೆ. ಯಡಿಯೂರಪ್ಪ ಒಬ್ಬ ಬ್ಲ್ಯಾಕ್‌ಮೇಲ್ ರಾಜಕಾರಣಿ ಎಂದು ಹರಿಹರದ ಬಿಜೆಪಿ ಶಾಸಕ ಬಿ.ಪಿ. ಹರೀಶ್ ಹರಿಹಾಯ್ದಿದ್ದಾರೆ.

ನಿನ್ನೆ ಸಂಜೆ ದಾವಣಗೆರೆಯಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಯಡಿಯೂರಪ್ಪ ಅವರು ರಾಷ್ಟ್ರೀಯ ನಾಯಕರನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಹರೀಶ್ ಆರೋಪಿಸಿದ್ದಾರೆ.

ಯಡಿಯೂರಪ್ಪ ಯಾವಾಗಲೂ ರಾಷ್ಟ್ರೀಯ ನಾಯಕರನ್ನು ಬ್ಲ್ಯಾಕ್‌ಮೇಲ್ ಮಾಡುತ್ತಲೇ ಬಂದಿದ್ದಾರೆ. ರಾಷ್ಟ್ರೀಯ ನಾಯಕರು ನಮ್ಮ ಜೊತೆಯಿಲ್ಲ ಅನ್ನೋ ಭಾವನೆ ಅವರಿಗೆ ಬಂದಿದೆ. ಹಾಗಾಗಿ ಅವರು ರಾಷ್ಟ್ರೀಯ ನಾಯಕರನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಹರೀಶ್ ದಾವಣಗೆರೆಯಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಪುಟ 2

## ಮುಸ್ಲಿಂ ಯುವಕನನ್ನು ಮದುವೆ ಆಗಿದ್ದೀನಿ, ಮನೆಗೆ ಬರಲ್ಲ ಎಂದ ಯುವತಿ ಪೊಲೀಸ್ ಠಾಣೆಯಲ್ಲೇ ಕುಸಿದು ಬಿದ್ದ ತಾಯಿ!

**ಬೆಳಗಾವಿ:** ಪ್ರೀತಿಸಿದ ಹಿಂದೂ ಯುವತಿ ಹಾಗೂ ಮುಸ್ಲಿಂ ಯುವಕ ಪ್ರೀತಿಸಿ ಮನೆಬಿಟ್ಟು ಹೋಗಿದ್ದರು. ಆದರೆ ಹುಡುಗಿ ಮನೆಯವರು ಹುಡುಗನ ವಿರುದ್ಧ ಕಿಡ್ನ್ಯಾಪ್ ಕೇಸ್ ದಾಖಲಿಸಿದ್ದ ಘಟನೆ ಬೆಳಗಾವಿಯಲ್ಲಿ ನಡೆದಿತ್ತು. ಇದೀಗ ಈ ಪ್ರಕರಣಕ್ಕೆ ಟ್ವಿಸ್ಟ್ ಸಿಕ್ಕಿದೆ.

ಪುಟ 2



## ಛತ್ತೀಸ್‌ಗಢ ಮಾಜಿ ಸಿಎಂ ಭೂಪೇಶ್ ಬಘೇಲ್ ಮನೆಗೆ ಇಡಿ ದಾಳಿ

**ರಾಯ್‌ಪುರ:** ಛತ್ತೀಸ್‌ಗಢದ ಮಾಜಿ ಮುಖ್ಯಮಂತ್ರಿ, ಭೂಪೇಶ್ ಬಘೇಲ್ ಮತ್ತು ಅವರ ಪುತ್ರ ಚೈತನ್ಯ ಬಘೇಲ್ ಅವರಿಗೆ ಸಂಬಂಧಿಸಿದ ಹಲವಾರು ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ ಸೋಮವಾರ ದಾಳಿ ನಡೆಸಿದೆ. ಮದ್ಯ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಈ ದಾಳಿ ನಡೆದಿದೆ. ಭಿಲಾಯಿಯಲ್ಲಿರುವ ಚೈತನ್ಯ ಬಘೇಲ್ ನಿವಾಸ ಮತ್ತು ರಾಜ್ಯದ ಇತರ ಕಡೆಗಳಲ್ಲಿ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ದಾಳಿ ನಡೆಸಲಾಯಿತು.

» **ಮದ್ಯ ಹಗರಣ**

ಈ ವಿಚಾರವಾಗಿ ಭೂಪೇಶ್ ಬಘೇಲ್ ಅಧಿಕೃತ ಟ್ವಿಟರ್ ಖಾತೆಯಲ್ಲಿ ಸಂದೇಶ ಪ್ರಕಟಿಸಲಾಗಿದ್ದು, ಪರೋಕ್ಷವಾಗಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಲಾಗಿದೆ.

''ಏಳು ವರ್ಷಗಳಿಂದ ಅಸ್ತಿತ್ವದಲ್ಲಿದ್ದ ಸುಳ್ಳು ಪ್ರಕರಣವನ್ನು ನ್ಯಾಯಾಲಯ ವಜಾಗೊಳಿಸಿದೆ. ಹೀಗಿರುವಾಗ, ಇಡಿ ಅಧಿಕಾರಿಗಳು ಮಾಜಿ ಮುಖ್ಯಮಂತ್ರಿ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಭೂಪೇಶ್ ಬಘೇಲ್ ಅವರ ಭಿಲಾಯಿ ನಿವಾಸಕ್ಕೆ ಇಂದು ಬೆಳಿಗ್ಗೆ ಪ್ರವೇಶಿಸಿದ್ದಾರೆ. ಈ ಪಿತೂರಿಯ ಮೂಲಕ ಯಾರಾದರೂ ಪಂಜಾಬ್‌ನಲ್ಲಿ ಕಾಂಗ್ರೆಸ್ ಅನ್ನು ತಡೆಯಲು ಪ್ರಯತ್ನಿಸುತ್ತಿದ್ದರೆ, ಅದು ತಪ್ಪು ತಿಳುವಳಿಕೆ'' ಎಂದು ಟ್ವೀಟ್ ನಲ್ಲಿ ಉಲ್ಲೇಖಿಸಲಾಗಿದೆ.

ಛತ್ತೀಸ್‌ಗಢ ಮದ್ಯ ಹಗರಣದಿಂದ ರಾಜ್ಯ ಖಜಾನೆಗೆ ಭಾರಿ ನಷ್ಟ ಉಂಟಾಗಿದೆ. ಸುಮಾರು 2,100 ಕೋಟಿ ರೂ.ಗಳಿಗೂ ಹೆಚ್ಚು ಹಣ ನಷ್ಟವಾಗಿದೆ ಎಂದು ಜಾರಿ ನಿರ್ದೇಶನಾಲಯ ಹೇಳಿಕೊಂಡಿದೆ.

ಪುಟ 2



## ಬಿಬಿಎಂಪಿ ಯಡವಟ್ಟು ಕರಗ ಸಂಭ್ರಮಕ್ಕೆ ಅಡ್ಡಿ!



**ಬೆಂಗಳೂರು:** ಬೆಂಗಳೂರು ಇತಿಹಾಸದಲ್ಲಿ ಕರಗಕ್ಕೆ ತನ್ನದೇ ಆದ ಮಹತ್ವ ಇದೆ. ಪ್ರತಿ ವರ್ಷ ಕೂಡ ಕರಗ ಸಂಭ್ರಮಕ್ಕೆ ಯಾವುದೇ ಧಕ್ಕೆಯಾಗದಂತೆ ಸಾಂಪ್ರದಾಯಿಕ ಆಚರಣೆ ಮಾಡಲಾಗುತ್ತಿದೆ. ಆದರೆ ಈ ಬಾರಿಯ ಬಿಬಿಎಂಪಿ ಯಡವಟ್ಟಿನಿಂದ ಕರಗ ಇತಿಹಾಸದ ಕೆಲ ಸಂಪ್ರದಾಯವನ್ನ ಮುರಿಯುವ ಸ್ಥಿತಿ ಎದುರಾಗಿದೆ. ಕರಗ ಸಮಿತಿ ಟೆನ್ಷನ್ ಹೆಚ್ಚು ಮಾಡಿದೆ.

ಬೆಂಗಳೂರು ಕರಗ ನಗರದಲ್ಲಿ ಮಾತ್ರವಲ್ಲದೇ ಬೇರೆ ರಾಜ್ಯಗಳಲ್ಲೂ ತನ್ನದೇ ಭಕ್ತರು, ಪ್ರಸಿದ್ಧಿಯನ್ನ ಹೊಂದಿದೆ. ಪ್ರತಿ ವರ್ಷ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಸಾಂಪ್ರದಾಯಿಕವಾಗಿ ಅದ್ದೂರಿಯಾಗಿ ನೆರವೇರುತ್ತಾ ಬರುತ್ತಲೇ ಇದೆ. ಆದರೆ ಈ ಬಾರಿ ವಿಶ್ವವಿಖ್ಯಾತ ಕರಗಕ್ಕೆ ಬಿಬಿಎಂಪಿಯೇ ಅಡಚಣೆ ಮಾಡಿದಂತಿದೆ. ನೂರಾರು ವರ್ಷಗಳಿಂದ ನಡೆದು ಬಂದಿರುವ ಕೆಲವೊಂದು ಸಂಪ್ರದಾಯಗಳನ್ನ ಬದಲಾವಣೆ ಮಾಡಬೇಕಾದ ಗೊಂದಲಕ್ಕೆ ಕರಗ ಸಮಿತಿ ಸಿಲುಕಿದೆ.

ಎಸ್.ಪಿ ರೋಡ್, ಧರ್ಮರಾಯಸ್ವಾಮಿ ದೇವಸ್ಥಾನದ ಬಳಿ ಕಳೆದ ಮೂರು ತಿಂಗಳಿನಿಂದ ಒಳಚರಂಡಿ, ರಸ್ತೆ ಕಾಮಗಾರಿ ಆರಂಭಿಸಿದ ಬಿಬಿಎಂಪಿ ಇನ್ನೂ ಕೂಡ 10% ನಷ್ಟು ಕಾಮಗಾರಿಯನ್ನು ಪೂರ್ಣಗೊಳಿಸಿಲ್ಲ. ಕರಗ ಆರಂಭವಾಗೋಕೆ ಕೇವಲ 25 ದಿನ ಮಾತ್ರ ಬಾಕಿ ಇದೆ. ಹೀಗಿರುವಾಗ 3 ತಿಂಗಳಲ್ಲಿ ಮುಗಿಯದ ಕೆಲಸ 25 ದಿನದಲ್ಲಿ ಆಗೋಕೆ ಸಾಧ್ಯನಾ ಎನ್ನುವ ಪ್ರಶ್ನೆ ಮೂಡಿದೆ.

ಕರಗ ಶಕ್ತ್ಯೋತ್ಸವ ದಿನ ರಥೋತ್ಸವ, ಕರಗ ಶಕ್ತ್ಯೋತ್ಸವ ಕೂಡ ಇದೇ ಮಾರ್ಗದಲ್ಲಿ ಸಾಗಬೇಕು. ಆದರೆ ಇಡೀ ರಸ್ತೆಯನ್ನ ಸಂಪೂರ್ಣ ಅಗೆದು ಕಾಮಗಾರಿ ಶುರು ಮಾಡಿರುವ ಕಾರಣ ಸಾಗಿಹೋಗೋದು ಸಾಧ್ಯವೇ ಇಲ್ಲ. ಇದರಿಂದ ಬೇರೆ ಮಾರ್ಗಗಳಲ್ಲಿ ಸಾಗಬೇಕಾದರೆ, ಇತಿಹಾಸವನ್ನ ಮುರಿದಂತಾಗಲಿದೆ. ಇದೇ ದಾರಿಯಲ್ಲಿ ಹೋಗುವುದು ಅಸಾಧ್ಯ. ಹೀಗಾಗಿ, ಮುಂದ್ಹೇಗೆ ಎನ್ನುವ ಚಿಂತೆ ಸಮಿತಿಗೆ.

ಲಕ್ಷಾಂತರ ಜನ ಸಂಭ್ರಮದಲ್ಲಿ ಸೇರುವ ಕಾರಣ ಸಾಕಷ್ಟು ಅಪಾಯಗಳು ಈ ಮಾರ್ಗದಲ್ಲಿವೆ. ಅನೇಕ ಕಡೆ ರಸ್ತೆಯುದ್ದಕ್ಕೂ ದೊಡ್ಡ ದೊಡ್ಡ ಗುಂಡಿಗಳನ್ನ ಅಗೆದಿರುವ ಕಾರಣ ಬರುವವರು ಕತ್ತಲೆಯಲ್ಲಿ ಕೊಂಚ ಯಾಮಾರಿದರೂ ಅಪಾಯದ ಸಾಧ್ಯತೆ ಇದೆ.

## ದರ ಏರಿಕೆ ಜೊತೆಗೆ ಹೆಚ್ಚುವರಿ ಹಾಲು ಕಡಿತ?



**ಬೆಂಗಳೂರು:** ಹಾಲಿನ ದರ ಏರಿಕೆ ಭೀತಿ ನಡುವೆ, ಸಾಮಾನ್ಯ ಜನರಿಗೆ ಮತ್ತೊಂದು ಶಾಕ್ ಎದುರಾಗುವ ಸಾಧ್ಯತೆ ಇದೆ. ಇಷ್ಟು ದಿನ ಪ್ರತಿ ಲೀಟರ್, ಅರ್ಧ ಲೀಟರ್ ಹಾಲಿನ ಪ್ಯಾಕೆಟ್‌ನಲ್ಲಿ ಬರುತ್ತಿದ್ದ ಹೆಚ್ಚುವರಿ ಹಾಲಿಗೂ ಶೀಘ್ರದಲ್ಲೇ ಕತ್ತರಿ ಹಾಕುವ ಸಾಧ್ಯತೆ ಇದೆ.

ರಾಜ್ಯದ ಜನತೆಗೆ ಸದ್ಯದಲ್ಲೇ ಹಾಲಿನ ಏರಿಕೆ ದರ ಶಾಕ್ ಎದುರಾಗುವ ಬಗ್ಗೆ ಸರ್ಕಾರವೇ ಸುಳಿವು ನೀಡಿದೆ. ಈ ಮಧ್ಯೆ ಕಳೆದ ಐದಾರು ತಿಂಗಳಿನಿಂದ ಪ್ರತಿ ಲೀಟರ್ ಹಾಲಿನ ಪ್ಯಾಕೆಟ್‌ನಲ್ಲೂ ಹೆಚ್ಚುವರಿಯಾಗಿ ನೀಡುತ್ತಿದ್ದ ಹಾಲನ್ನೂ ಕೂಡ ಕಡಿತ ಮಾಡುವ ನಿಟ್ಟಿನಲ್ಲಿ ಕೆಎಂಎಫ್ ಚಿಂತನೆ ಮಾಡಿದ್ದು, ಇದರ ಜೊತೆಗೆ ಸದ್ಯ ಹೆಚ್ಚುವರಿ ಹಾಲಿಗೆ ನೀಡುತ್ತಿರುವ ಹಣಕ್ಕೆ ಹೆಚ್ಚುವರಿ ದರ ಏರಿಕೆ ಮಾಡಿ,

ಪುಟ 2

## ಮಹಿಳೆಯರನ್ನು ಬಲವಂತವಾಗಿ ಮತಾಂತರ ಮಾಡಿದ್ರೆ ನೇಣು ಶಿಕ್ಷೆ ಕಾಯ್ದೆ ತರ್ತೀವಿ



**ಭೋಪಾಲ್:** ಮಹಿಳೆಯರ ಬಲವಂತದ ಧಾರ್ಮಿಕ ಮತಾಂತರಕ್ಕೆ ಮರಣದಂಡನೆ ವಿಧಿಸಲು ನಮ್ಮ ಸರ್ಕಾರ ಕಾನೂನಿಗೆ ತಿದ್ದುಪಡಿ ತರಲಿದೆ ಎಂದು ಮಧ್ಯಪ್ರದೇಶ ಸಿಎಂ ಮೋಹನ್ ಯಾದವ್ ತಿಳಿಸಿದ್ದಾರೆ.

ಬಲವಂತದ ಮತಾಂತರ ವಿಚಾರದಲ್ಲಿ ಬಿಜೆಪಿ ಸರ್ಕಾರ ಸಹಿಷ್ಣು ಆಗಲ್ಲ. ಅಪ್ರಾಪ್ತೆಯರ ಮೇಲಿನ ಅತ್ಯಾಚಾರಕ್ಕೆ ಶಿಕ್ಷೆಯಂತೆಯೇ, ಹುಡುಗಿಯರ ಧಾರ್ಮಿಕ ಮತಾಂತರಕ್ಕೂ ಮರಣದಂಡನೆ ವಿಧಿಸುವ ನಿಬಂಧನೆಯನ್ನು ನಮ್ಮ ಸರ್ಕಾರ ಪರಿಚಯಿಸಲಿದೆ ಎಂದು ಸಿಎಂ ಹೇಳಿದ್ದಾರೆ.

ಮುಗ್ಧ ಹೆಣ್ಣುಮಕ್ಕಳ ಮೇಲೆ ಅತ್ಯಾಚಾರ ಮಾಡುವವರ ವಿರುದ್ಧ ಸರ್ಕಾರ ತುಂಬಾ ಕಟ್ಟುನಿಟ್ಟಾಗಿದೆ. ಈ ನಿಟ್ಟಿನಲ್ಲಿ ಮರಣದಂಡನೆಗೆ ಅವಕಾಶ ಕಲ್ಪಿಸಲಾಗುವುದು. ಇದರ ಜೊತೆಗೆ, ಮಧ್ಯಪ್ರದೇಶದ ಧಾರ್ಮಿಕ ಸ್ವಾತಂತ್ರ್ಯ ಕಾಯ್ದೆಯಲ್ಲಿ ಧಾರ್ಮಿಕ ಮತಾಂತರಕ್ಕೆ ಮರಣದಂಡನೆ ವಿಧಿಸುವ ಅವಕಾಶವನ್ನು ಸಹ ಪರಿಚಯಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಪುಟ 2

## 14 ವರ್ಷದ ಬಾಲಕಿ ಅಳುತ್ತಾ ಕಿರುಚಾಡಿದ್ರೂ ಬಿಡದ ಪಾಪಿಗಳು!

**ತಮಿಳುನಾಡು:** ನಾವು 21ನೇ ಶತಮಾನದಲ್ಲಿ ವಾಸಿಸುತ್ತಿದ್ದರೂ ಮೌಢ್ಯ, ಕಂದಾಚಾರಗಳು ಸೇರಿದಂತೆ ವಿವಿಧ ಕಾರಣಗಳಿಂದಾಗಿ ಬಾಲ್ಯ ವಿವಾಹಗಳಿಗೆ ಕಡಿವಾಣ ಹಾಕಲು ಸಾಧ್ಯವಾಗುತ್ತಿಲ್ಲ.

ಪುಟ 2



## ಜಲ್ಲಿಕಟ್ಟು ಸ್ಪರ್ಧೆ ವೇಳೆ ಗೂಳಿಗಳ ದಾಳಿ 30ಕ್ಕೂ ಅಧಿಕ ಮಂದಿಗೆ ಗಂಭೀರ ಗಾಯ



**ಹೊಸೂರು:** ಪ್ರತಿ ವರ್ಷದಂತೆ ಈ ಬಾರಿಯೂ ಆಯೋಜನೆ ಮಾಡಿದ್ದ ಜಲ್ಲಿಕಟ್ಟು ಸ್ಪರ್ಧೆ ವೇಳೆ ಭಾರೀ ಅವಘಡ ಸಂಭವಿಸಿದೆ. ಗೂಳಿಗಳು ಜಲ್ಲಿಕಟ್ಟು ಸ್ಪರ್ಧೆ ವೇಳೆ ಏಕಾಏಕಿ ದಾಳಿ ಮಾಡಿದ್ದು, ಇದರಿಂದ 30ಕ್ಕೂ ಅಧಿಕ ಮಂದಿಗೆ ಗಂಭೀರ ಗಾಯಗಳಾಗಿವೆ. ಹಬ್ಬದ ಸಂಭ್ರಮದಲ್ಲಿದ್ದವರು ಈಗ ಆಸ್ಪತ್ರೆಯಲ್ಲಿ ನರಳಾಡುವ ಪರಿಸ್ಥಿತಿ ಬಂದಿದೆ. ಹೊಸೂರು ಬಳಿಯ ಮಲ್ಲಿಕಾರ್ಜುನ ದುರ್ಗಂ ಗ್ರಾಮದ ಬಳಿ ಈ ಘಟನೆ ನಡೆದಿದೆ.

ರಾಜ್ಯದ ಗಡಿಗೆ ಹೊಂದಿಕೊಂಡಿರುವ ತಮಿಳುನಾಡಿನ ಹೊಸೂರಿನಲ್ಲಿ ಜಲ್ಲಿಕಟ್ಟು ಸ್ಪರ್ಧೆ ಆಯೋಜನೆ ಮಾಡಲಾಗಿತ್ತು. ಪ್ರತಿ ವರ್ಷದಂತೆ ಈ ಬಾರಿಯೂ ಜಲ್ಲಿಕಟ್ಟು ಸ್ಪರ್ಧೆ ನಡೆಯುತ್ತಿತ್ತು. ಈ ಸ್ಪರ್ಧೆಯಲ್ಲಿ ಸುಮಾರು 500ಕ್ಕೂ ಅಧಿಕ ರಾಸುಗಳು ಭಾಗಿಯಾಗಿದ್ದವು.

ಒಂದು ಕಡೆ ಸಿಂಗಾರಗೊಂಡು ಮಿರಿ ಮಿರಿ ಮಿಂಚುವ ತಡಿಕೆಗಳ ಜೊತೆ ರಾಸುಗಳು ಆರ್ಭಟಿಸುತ್ತಿದ್ದವು. ಇನ್ನೊಂದು ಕಡೆ ನುಗ್ಗಿ ಬರುವ ರಾಸುಗಳನ್ನು ಹಿಡಿಯಲು ಯುವಕರ ದಂಡು ಸಜ್ಜಾಗಿತ್ತು. ದೈತ್ಯ ಗೂಳಿಗಳನ್ನು ಚಾಣಾಕ್ಷತನದಲ್ಲಿ ಅಡ್ಡಗಟ್ಟುವ ಯುವಕರು, ತಡಿಕೆಯಲ್ಲಿ ಕಟ್ಟಿರುವ ಲಕ್ಷ ಲಕ್ಷ ಬಹುಮಾನದ ಹಣಕ್ಕಾಗಿ ರಾಸುಗಳೊಂದಿಗೆ ಸೆಣಸಾಟ ನಡೆಸುತ್ತಿದ್ದರು. ಆದರೂ ಗೂಳಿಗಳ ದಾಳಿಯಿಂದ ಹಲವರಿಗೆ ಗಂಭೀರ ಗಾಯಗಳಾಗಿವೆ.

ತಮಿಳುನಾಡಿನ ಹೊಸೂರಿನಲ್ಲಿ ಆಯೋಜಿಸಿದ್ದ ಈ ಜಲ್ಲಿಕಟ್ಟು ಸ್ಪರ್ಧೆಗೆ ಕರ್ನಾಟಕ, ಆಂಧ್ರ ಪ್ರದೇಶ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಿಂದ ರಾಸುಗಳು ಆಗಮಿಸಿತ್ತು. ಯುವಕರ ದಂಡು ಕೂಡ ಗೂಳಿಗಳ ಜೊತೆ ಸೆಣಸಾಡುವುದಕ್ಕೆ ಸಿದ್ದರಾಗಿದ್ದರು. ಆದರೂ ಕೂಡ ಗೂಳಿ ದಾಳಿಯಿಂದ ಈ ಅವಘಡ ಸಂಭವಿಸಿದೆ.

ಈ ರೀತಿ ಅಪಾಯಕಾರಿ ಕ್ರೀಡೆ ಜಲ್ಲಿಕಟ್ಟು ಸ್ಪರ್ಧೆ ರಾಜ್ಯದಲ್ಲಿ ಬ್ಯಾನ್ ಆಗಿದೆ. ಆದರೂ ತಮಿಳುನಾಡಿನಲ್ಲಿ ಮಾತ್ರ ಈ ಜಲ್ಲಿಕಟ್ಟು ಸ್ಪರ್ಧೆಯನ್ನ ಸಾಹಸ ಕ್ರೀಡೆಯಾಗಿ ನಡೆಸುತ್ತಾರೆ. ಸರ್ಕಾರ ಕೂಡ ಇದಕ್ಕೆ ಅವಕಾಶ ನೀಡಿದೆ. ಪ್ರತಿ ವರ್ಷ ಈ ಜಲ್ಲಿಕಟ್ಟು ಕ್ರೀಡೆ ನಡೆಯುತ್ತಲೇ ಇರುತ್ತೆ. ಈ ಕ್ರೀಡೆ ನೋಡಲು ಸಾವಿರಾರು ಮಂದಿ ಇಲ್ಲಿ ಸೇರುತ್ತಾರೆ.

ಜಲ್ಲಿಕಟ್ಟು ಎಂಬುದು ಪೊಂಗಲ್ ಆಚರಣೆಯ ಭಾಗವಾಗಿ ತಮಿಳುನಾಡಿನಲ್ಲಿ ಹೆಚ್ಚಾಗಿ ಆಚರಿಸುತ್ತಾರೆ.

ಪುಟ 2

## ಕೊಪ್ಪಳ ಅತ್ಯಾಚಾರ ಪ್ರಕರಣದಿಂದ ಹಂಪಿ ಪ್ರವಾಸೋದ್ಯಮಕ್ಕೆ ತೀವ್ರ ಹೊಡೆತ ಪ್ರವಾಸಿಗರ ಸಂಖ್ಯೆ ಭಾರಿ ಇಳಿಕೆ



**ಹೊಸಪೇಟೆ:** ಕೊಪ್ಪಳ ಜಿಲ್ಲೆಯ ಸಾಣಾಪುರ ಗ್ರಾಮದಲ್ಲಿ ಇಸ್ರೇಲಿ ಪ್ರಜೆ ಹಾಗೂ ಹೋಮ್ ಸ್ಟೇ ಮಾಲಕಿ ಮೇಲೆ ನಡೆದ ಹಲ್ಲೆ ಮತ್ತು ಅತ್ಯಾಚಾರ ಪ್ರಕರಣದ ನಂತರ ಹಂಪಿಗೆ ಬರುವ ಪ್ರವಾಸಿಗರ ಸಂಖ್ಯೆಯಲ್ಲಿ ಗಣನೀಯ ಕುಸಿತವಾಗಿರುವುದಾಗಿ ವರದಿಯಾಗಿದೆ. ಹೋಂಸ್ಟೇಗಳು ಮತ್ತು ಹೋಟೆಲ್‌ಗಳಲ್ಲಿ ಕೊಠಡಿಗಳನ್ನು ಕಾಯ್ದಿರಿಸಿದ್ದ ಅನೇಕ ಪ್ರವಾಸಿಗರು ಅವುಗಳನ್ನು ರದ್ದುಗೊಳಿಸಿದ್ದಾರೆ. ಕೊಪ್ಪಳದ ಸಾಣಾಪುರ ಘಟನೆಯು ಅಂತರರಾಷ್ಟ್ರೀಯ ಮಟ್ಟದಲ್ಲಿ ಸುದ್ದಿ ಮಾಡಿದೆ. ಹತ್ಯೆಯಾದವರಲ್ಲಿ ಇಸ್ರೇಲಿ ಪ್ರಜೆ ಇದ್ದುದರಿಂದ, ಇದೀಗ ಇತರ ದೇಶಗಳ ರಾಯಭಾರ ಕಚೇರಿಗಳು ತಮ್ಮ ದೇಶದ ಪ್ರಜೆಗಳ ಸುರಕ್ಷತೆಗೆ ಕ್ರಮ ಕೈಗೊಳ್ಳಲಾರಂಭಿಸಿವೆ. ಹಲವಾರು ರಾಯಭಾರ ಕಚೇರಿಗಳು ತಮ್ಮ ತಮ್ಮ ದೇಶಗಳ ಪ್ರವಾಸಿಗರ ಸ್ಥಿತಿಯನ್ನು ತಿಳಿದುಕೊಳ್ಳಲು ಮುಖ್ಯಮಂತ್ರಿಗಳ ಕಚೇರಿ ಮತ್ತು ಕೊಪ್ಪಳ ಆಡಳಿತದೊಂದಿಗೆ ಸಂಪರ್ಕದಲ್ಲಿವೆ.

ಹಂಪಿ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳು ಇಸ್ರೇಲ್‌ನಿಂದ ಬರುವ ವಿದೇಶಿ ಪ್ರವಾಸಿಗರ ಪೈಕಿ ಸುಮಾರು ಶೇ 60 ಜನರನ್ನು ಆಕರ್ಷಿಸುತ್ತವೆ ಎನ್ನಲಾಗಿದೆ. ಹೀಗಾಗಿ, ಸಾಣಾಪುರ ಘಟನೆಯು

ಪುಟ 2

# ಐಶ್ವರ್ಯಗೌಡ ವಂಚನೆ ಕೇಸ್ ಟ್ವಿಸ್ಟ್: ವಿನಯ್ ಕುಲಕರ್ಣಿ ಕಾರು ಚಾಲಕನ ವಿಚಾರಣೆ

**ಬೆಂಗಳೂರು:** ಐಶ್ವರ್ಯ ಗೌಡ ಚಿನ್ನ ವಂಚನೆ ಕೇಸ್‌ಗೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ವಿನಯ್ ಕುಲಕರ್ಣಿ ಕಾರು ಚಾಲಕನನ್ನು ವಿಚಾರಣೆಗೆ ಒಳಪಡಿಸಲಾಗಿದೆ.



ಎಸಿಪಿ ಭರತ್ ರೆಡ್ಡಿ ಅವರು ಚಾಲಕ ವಿರೇಶ್ ದಳವಾಯಿಯನ್ನು ವಿಚಾರಣೆ ಮಾಡಿದ್ದಾರೆ. ಐಶ್ವರ್ಯ ಗೌಡಗೆ ಸೇರಿದ ಕಾರು ವಿನಯ್ ಕುಲಕರ್ಣಿ ಮನೆಯಲ್ಲಿ ಪತ್ತೆಯಾಗಿತ್ತು. ಈ ಹಿನ್ನೆಲೆಯಲ್ಲಿ ಚಾಲಕನನ್ನು ಪೊಲೀಸರು ವಿಚಾರಣೆಗೆ ಕರೆದಿದ್ದರು. ವಿಚಾರಣೆ ವೇಳೆ ಬೆನ್ಜ್ ಕಾರಿನ ಬಗ್ಗೆ ಮಾಹಿತಿ ಲಭ್ಯವಾಗಿದೆ.

ವಿನಯ್ ಕುಲಕರ್ಣಿಗೆ ಐಶ್ವರ್ಯ ಗೌಡ ಪರಿಚಯವಿತ್ತು. ಮಹಾರಾಷ್ಟ್ರಕ್ಕೆ ಹೋಗುವಾಗ ವಿನಯ್ ಕುಲಕರ್ಣಿ ಮನೆಗೆ ಐಶ್ವರ್ಯ ಗೌಡ ಬಂದಿದ್ದರು. ವಾಪಸ್ ಹೋಗುವಾಗ ಕಾರು ಬಿಟ್ಟು ವಿಮಾನದಲ್ಲಿ ಹೋಗಿದ್ದರು. ಹಾಗಾಗಿ, ಬೆನ್ಜ್ ಕಾರು ವಿನಯ್ ಕುಲಕರ್ಣಿ ಮನೆ ಬಳಿಯೇ ಇತ್ತು ಅನ್ನೋದು ವಿಚಾರಣೆ ವೇಳೆ ಬೆಳಕಿಗೆ ಬಂದಿದೆ.

ವಂಚನೆ ಪ್ರಕರಣದ ತನಿಖೆ ಬಹುತೇಕ ಕೊನೆಯ ಹಂತಕ್ಕೆ ಬಂದಿದೆ. ಕೆಲವೇ ದಿನಗಳಲ್ಲಿ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲು ಅಧಿಕಾರಿಗಳು ಸಿದ್ಧತೆ ಮಾಡಿಕೊಂಡಿದ್ದಾರೆ.

# ದಿಗಂತ್ ಪತ್ತೆಗೆ ಆಗ್ರಹಿಸಿ ಪ್ರತಿಭಟಿಸಿದ್ದ ಭಜರಂಗದಳ ಮುಖಂಡನಿಗೆ ಕೊಲೆ ಬೆದರಿಕೆ

**ಮಂಗಳೂರು:** ನಿಗೂಢವಾಗಿ ನಾಪತ್ತೆಯಾಗಿದ್ದ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಫರಂಗಿಪೇಟೆ ಕಿದೆಬೆಟ್ಟು ನಿವಾಸಿ, ವಿದ್ಯಾರ್ಥಿ ದಿಗಂತ್ ಪತ್ತೆಗೆ ಆಗ್ರಹಿಸಿ ಪ್ರತಿಭಟಿಸಿದ್ದ ಭಜರಂಗದಳ ಮುಖಂಡ ಭರತ್ ಕುಮ್ಡೇಲ್ ಅವರಿಗೆ ಸಾಮಾಜಿಕ ತಾಣಗಳ ಮೂಲಕ ಕೊಲೆ ಬೆದರಿಕೆ ಹಾಕಲಾಗಿದೆ. BEARY_ROYAL_NAWAB, ಬ್ಯಾರಿ ಟ್ರೋಲರ್, ಮಂಗಳೂರು ಕಿಂಗ್ ಎಂಬ ಹೆಸರಿನ ಪೇಜ್ ಗಳ ಮುಖಾಂತರ ಕೊಲೆ ಬೆದರಿಕೆ ಹಾಕಲಾಗಿದೆ.



ದಿಗಂತ್ ಪತ್ತೆಗಾಗಿ ಮಾರ್ಚ್ 1ರಂದು ಭಜರಂಗದಳ ಮುಖಂಡ ಭರತ್ ನೇತೃತ್ವದಲ್ಲಿ ಫರಂಗೀಪೇಟೆ ಬಂದ್ ನಡೆಸಲಾಗಿತ್ತು. ದಿಗಂತ್ ನಾಪತ್ತೆ ಹಿಂದೆ ಅನ್ಯಮತೀಯರ ಹಾಗೂ ಗಾಂಜಾ ಗ್ಯಾಂಗ್ ಕೈವಾಡ ಎಂದು ಪ್ರತಿಭಟನೆ ವೇಳೆ ಭರತ್ ಕುಮ್ಡೇಲು ಆರೋಪಿಸಿದ್ದರು.

ಇದೀಗ, ವಿದ್ಯಾರ್ಥಿ ದಿಗಂತ್ ಪತ್ತೆಯಾದ ಬೆನ್ನಲ್ಲೇ ಸಾಮಾಜಿ ಜಾಲತಾಣದಲ್ಲಿ ಕಿಡಿಗೇಡಿಗಳು ಭರತ್ ಕುಮ್ಡೇಲುಗೆ ಬೆದರಿಕೆ ಹಾಕಿದ್ದಾರೆ. ''ಭರತ್ ಕುಮ್ಡೇಲು ರಕ್ತ ಈ ಭೂಮಿಗೆ ಹರಿಸದೆ ನಮಗೆ ಸಮಾಧಾನವಿಲ್ಲ. ಶಾಂತಿಯುತವಾದ ಪರಂಗಿಪೇಟೆಯಲ್ಲಿ ಕೋಮುಗಲಭೆ ನಡೆಸಲು ಸಂಘ ಪರಿವಾರದ ಅಜಂಡವಿತ್ತು. ಅದು ನಡೆಯಲಿಲ್ಲ, ಮುಸ್ಲಿಂ ಸಮುದಾಯವನ್ನು ಟಾರ್ಗೆಟ್ ಮಾಡಿ ಕೋಮು ಬಣ್ಣ ಬಳಿಯಲು ನೋಡಿದರು. ಆದರೆ, ಪೊಲೀಸ್ ಇಲಾಖೆಯ ಕಠಿಣ ಶ್ರಮದಿಂದ ಚಾನ್ಸ್ ಸಿಕ್ಕಿಲ್ಲ. ದಿಗಂತ್ ಪತ್ತೆಹಚ್ಚಿದ ಪೊಲೀಸ್ ಇಲಾಖೆಗೆ ಅಭಿನಂದನೆಗಳು. ದಿಗಂತ್ ಅಪರಣ ಪ್ರಕರಣವನ್ನು ಭರತ್ ಕುಮ್ಡೇಲು ಮುಸಲ್ಮಾನರ ತಲೆಗೆ ಕಟ್ಟುವ ಹುನ್ನಾರವಿತ್ತು.''

''ಇವನು ಇನ್ನು ಎಲ್ಲಿಯಾದರೂ ಮುಸಲ್ಮಾನರ ಹೆಸರು ಎತ್ತಿದರೆ ಅದೇ ಪ್ರತಿಭಟನೆಗೆ ದಾಳಿ ಮಾಡುತ್ತೇವೆ. ಮತ್ತೆ ಇಲ್ಲಿ ಕೋಮು ಗಲಭೆ ಉಂಟಾದರೆ ನಾವು ಜವಾಬ್ದಾರರಲ್ಲ ಎಚ್ಚರಿಕೆ, ಇವನ ಬಗ್ಗೆ ಕ್ರಮ ತೆಗಿದುಕೊಳ್ಳಿ. ನಮ್ಮ ಸಹೋದರ ಶಾಹಿದ್ ಅಶ್ರಫ್ ಕಲಾಯಿಯನ್ನು ಮರೆತಿಲ್ಲ, ಪ್ರತಿರೋಧ ಅಪರಾಧವಲ್ಲ'' ಎಂದು ಪೋಸ್ಟ್ ಹಾಕಲಾಗಿದೆ. ಭರತ್ ಕುಮ್ಡೇಲು 2017ರಲ್ಲಿ ನಡೆದ ಎಸ್ ಡಿಪಿಐ ಮುಖಂಡ ಅಶ್ರಫ್ ಕಲಾಯಿ ಹತ್ಯೆ ಆರೋಪಿಯಾಗಿದ್ದಾರೆ.

# 'ಕೈ' ಸಮಾವೇಶದಲ್ಲಿ ಮೃತಪಟ್ಟ ಕಾರ್ಯಕರ್ತನಿಗೆ 5 ಲಕ್ಷ ಪರಿಹಾರ



**ಹಾವೇರಿ:** ಕಾಂಗ್ರೆಸ್ ಪಕ್ಷ ಬೆಳಗಾವಿಯಲ್ಲಿ ಆಯೋಜನೆ ಮಾಡಿದ್ದ ಗಾಂಧಿ ಭಾರತ ಸಮಾವೇಶದಲ್ಲಿ ಭಾಗಿಯಾಗಿ ಮೃತಪಟ್ಟ ಕಾಂಗ್ರೆಸ್ ಕಾರ್ಯಕರ್ತನಿಗೆ ಕೆಪಿಸಿಸಿ ವತಿಯಿಂದ 5 ಲಕ್ಷ ರೂ. ಪರಿಹಾರ ಚೆಕ್ ವಿತರಿಸಲಾಯಿತು.

ಹಾವೇರಿ ಜಿಲ್ಲೆ ರಾಣೇಬೆನ್ನೂರು ತಾಲೂಕಿನ ನದಿಹರಳಹಳ್ಳಿ ಗ್ರಾಮದ ಬಸಪ್ಪ ಕೆಂಚಪ್ಪ ಪಾಮೇನಹಳ್ಳಿ ಎಂಬ ಕಾರ್ಯಕರ್ತ ಸಮಾವೇಶದಲ್ಲಿ ಹೃದಯಾಘಾತದಿಂದ ಮೃತಪಟ್ಟಿದ್ದರು.

ಮೃತರ ಕುಟುಂಬಸ್ಥರು ಪರಿಹಾರ ನೀಡುವಂತೆ ಶಾಸಕ ಪ್ರಕಾಶ್ ಕೋಳಿವಾಡಗೆ ಮನವಿ ಮಾಡಿದ್ದರು. ಶಾಸಕ ಪ್ರಕಾಶ್ ಕೋಳಿವಾಡ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಗಮನಕ್ಕೆ ತಂದು 5 ಲಕ್ಷ ರೂ. ಪರಿಹಾರ ನೀಡುವಲ್ಲಿ ಯಶಸ್ವಿಯಾಗಿದರು.

ಭಾನುವಾರ ಶಾಸಕ ಪ್ರಕಾಶ್ ಕೋಳಿವಾಡ ಮೃತರ ಕುಟುಂಬಕ್ಕೆ ಚೆಕ್ ವಿತರಿಸಿದರು.

## ಬೀದಿಬದಿ ವ್ಯಾಪಾರ ಮಾಡ್ತಿದ್ದ ನಾಲ್ವರು ದುರ್ಮರಣ

# ಪಾಳು ಬಿದ್ದಿದ್ದ ಕಟ್ಟಡ ಕುಸಿತ

**ಹಾಸನ:** ಪಾಳು ಬಿದ್ದಿದ್ದ ಕಟ್ಟಡ ಕುಸಿದು ಬಿದ್ದು ಮೂವರು ಮಹಿಳೆಯರು ಹಾಗೂ ಓರ್ವ ಪುರುಷ ಸಾವನ್ನಪ್ಪಿರುವ ದಾರುಣ ಘಟನೆ ಹಾಸನದ ಬೇಲೂರು ಪಟ್ಟಣದ ಬಳಿ ನಡೆದಿದೆ.

ಮೃತರಲ್ಲಿ ಇಬ್ಬರು ಗುರುತು ಪತ್ತೆಯಾಗಿದ್ದು, ಅವರನ್ನು ಆಶಾ, ದೀಪು ಎಂದು ಗುರುತಿಸಲಾಗಿದೆ. ಇನ್ನುಳಿದವರ ಗುರುತು ಪತ್ತೆಯಾಗಿಲ್ಲ.

ಪಾಳು ಬಿದ್ದ ಕಟ್ಟಡದ ಕೆಳಗೆ ಬೀದಿ ಬದಿ ವ್ಯಾಪಾರಿಗಳು ವ್ಯಾಪಾರ ಮಾಡುತ್ತಿದ್ದ ವೇಳೆ ದಿಢೀರ್ ಕಟ್ಟಡ ಕುಸಿದಿದೆ. ಪರಿಣಾಮ ವ್ಯಾಪಾರ ಮಾಡುತ್ತಿದ್ದ ಮೂವರು ಮಹಿಳೆಯರು ಹಾಗೂ ಓರ್ವ ಪುರುಷ ಸಾವನ್ನಪ್ಪಿದ್ದಾರೆ. ಮೂವರಿಗೆ ಗಾಯಗಳಾಗಿದ್ದು, ಅಂಬುಲೆನ್ಸ್ ಮೂಲಕ ಹಾಸನ ಆಸ್ಪತ್ರೆಗೆ ರವಾನಿಸಲಾಗಿದೆ. ಸ್ಥಳಕ್ಕೆ ಬೇಲೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.



# ಲಿಂಗಾಯತರ ಸಮಾವೇಶ ಅಪ್ಪ ಮಕ್ಕಳ ಹಳೆಯ ಆಟ

**ದಾವಣಗೆರೆ:** ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಬದಲಾವಣೆಯಾಗುವ ಲಕ್ಷಣ ಇದೆ. ಈ ಬಗ್ಗೆ ಭಯ ಇರುವ ಕಾರಣಕ್ಕೆ ಲಿಂಗಾಯತರ ಸಮಾವೇಶ ಮಾಡುತ್ತಿದ್ದಾರೆ. ಇದೆಲ್ಲ ಯಡಿಯೂರಪ್ಪ ಮತ್ತು ಅವರ ಮಕ್ಕಳ ಹಳೆಯ ಆಟಗಳು ಎಂದು ಶಾಸಕ ಬಿ.ಪಿ ಹರೀಶ್ ವಾಗ್ದಾಳಿ ನಡೆಸಿದ್ದಾರೆ.



» ವಿಜಯೇಂದ್ರ ವಿರುದ್ಧ ಬಿ.ಪಿ ಹರೀಶ್ ವಾಗ್ದಾಳಿ

ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ಯಡಿಯೂರಪ್ಪ ಅವರನ್ನ ಸಿಎಂ ಕುರ್ಚಿಯಿಂದ ಕೆಳಗೆ ಇಳಿಸುವಾಗ ಲಿಂಗಾಯತ ಸ್ವಾಮೀಜಿಗಳನ್ನ ಇಟ್ಟುಕೊಂಡು ಆಟ ಆಡುತ್ತಿದ್ದರು. ಈಗ ಸಹ ಲಿಂಗಾಯತರ ಸಮಾವೇಶ ಮಾಡುತ್ತಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಬದಲಾವಣೆ ಆಗಲೇ ಬೇಕು. ಜೊತೆಗೆ ಪಕ್ಷ ವಿರೋಧಿಗಳು ಹಾಗೂ ಮ್ಯಾಚ್ ಫಿಕ್ಸರ್ಗಳಿಗೆ ಪಾಠ ಕಲಿಸಬೇಕು ಎಂದು ಪರೋಕ್ಷವಾಗಿ ಮಾಜಿ ಸಚಿವ ರೇಣುಕಾಚಾರ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಯಡಿಯೂರಪ್ಪ ಮತ್ತು ವಿಜಯೇಂದ್ರ ಬಗ್ಗೆ ಪಕ್ಷದ ವರಿಷ್ಠರಿಗೆ ಹಾಗೂ ಸಂಸದರಿಗೆ ದೂರು ನೀಡಿದ್ದೇವೆ. ಅವರು ಸಹ ಇವರ ಬಗ್ಗೆ ನಮ್ಮ ಮುಂದೆ ಗುಣಗಾನ ಮಾಡಿದ್ದಾರೆ. ವಿಜಯೇಂದ್ರ ಜೊತೆ ಓಡಾಡುವ ಪಕ್ಷ ವಿರೋಧಿಗಳಿಗೆ ತಕ್ಕ ಪಾಠ ಆಗಲಿದೆ ಎಂದು ಅವರು ಎಚ್ಚರಿಸಿದ್ದಾರೆ.

ವಿಜಯೇಂದ್ರ ವಿರುದ್ಧ ನನ್ನ ಹೋರಾಟ ನಿರಂತರವಾಗಿರುತ್ತದೆ. ಯತ್ನಾಳ್ ಜೊತೆ ಇರಲಿ ಬಿಡಲಿ, ನನ್ನ ಹೋರಾಟ ಮಾತ್ರ ನಿರಂತರವಾಗಿ ನಡೆಯುತ್ತದೆ ಎಂದು ಅವರು ಹೇಳಿದ್ದಾರೆ.

## ಬೆಳಗಾವಿಯಲ್ಲಿ ಬಿರುಬಿಸಿಲಿನ ಆರ್ಭಟ

# ಬಿಸಿಲ ಬೇಗೆಗೆ ಜನ ಹೈರಾಣು

**ಚಿಕ್ಕೋಡಿ:** ಉತ್ತರ ಕರ್ನಾಟಕದಲ್ಲಿ ಬಿರುಬಿಸಿಲಿನ ಆರ್ಭಟ ಶುರುವಾಗಿದ್ದು ಚಿಕ್ಕೋಡಿ ಭಾಗದ ಜನರು ಬಿಸಿಲಿನ ಝುಳಕ್ಕೆ ಹೈರಾಣಾಗಿದ್ದಾರೆ. ಕಳೆದ ಬಾರಿಗಿಂತಲೂ ಹೆಚ್ಚಿನ ತಾಪಮಾನ ಏರಿಕೆಯಾಗಿದ್ದು, ಜನರು ಬಿಸಿಲಿನ ಬೇಗೆಗೆ ಬೇಸತ್ತು ಹೋಗಿದ್ದಾರೆ.

ಬಿಸಿಲು ಜಿಲ್ಲೆಗಳಿಗಿಂತ ತಂಪಾಗಿರುತ್ತಿದ್ದ ಬೆಳಗಾವಿ ಜಿಲ್ಲೆಯಲ್ಲಿ ಮಾರ್ಚ್ ಆರಂಭದಲ್ಲೇ ಜನರು ಬಿಸಿಲಿಗೆ ಹೈರಾಣಾಗಿದ್ದಾರೆ. ಸಾಮಾನ್ಯವಾಗಿ ಮಾರ್ಚ್ ಆರಂಭದಲ್ಲಿ ಕಾಣಿಸಿಕೊಳ್ಳುತ್ತಿದ್ದ 32 ಡಿಗ್ರಿ ಸೆಲ್ಸಿಯಸ್ ತಾಪಮಾನ, ಈ ಬಾರಿ 36 ರಿಂದ 38 ಡಿಗ್ರಿ ಸೆಲ್ಸಿಯಸ್ ಆಸುಪಾಸಿನಲ್ಲಿ ದಾಖಲಾಗಿದೆ.

2020ರಿಂದ ಇಲ್ಲಿಯವರೆಗೆ ಇದ್ದ ತಾಪಮಾನವನ್ನು ಈ ಬಾರಿ ಮಾರ್ಚ್ ಆರಂಭದಲ್ಲೇ ಹಿಂದಿಕ್ಕಿದೆ. ಮಾರ್ಚ್ ತಿಂಗಳ ಹಿಂದಿನ ವರ್ಷಗಳ ಗರಿಷ್ಠ ತಾಪಮಾನ ಹೋಲಿಕೆ ನೋಡುವುದಾದರೆ, 2020 ಮಾರ್ಚ್‌ನಲ್ಲಿ 32.5 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶವಿತ್ತು. 2021ರಲ್ಲಿ 30.7, 2022ರಲ್ಲಿ 32.5, 2023ರಲ್ಲಿ 33.8, 2024ನಲ್ಲಿ 34.5, 2025 ಮಾರ್ಚ್‌ನಲ್ಲಿ 37.4 ಡಿಗ್ರಿ ಸೆಲ್ಸಿಯಸ್ ದಾಖಲಾಗಿತ್ತು.



ಚಿಕ್ಕೋಡಿಯಲ್ಲಿ ಅವಧಿಗೆ ಮುನ್ನವೇ ಬಿಸಿಲಿನ ಝುಳಕ್ಕೆ ಜನರು ತುತ್ತಾಗುತ್ತಿದ್ದಾರೆ. ಜನರು ಮಕ್ಕಳೊಂದಿಗೆ ಮನೆಯಿಂದ ಹೊರ ಬರಲು ಯೋಚನೆ ಮಾಡುತ್ತಿದ್ದಾರೆ. ನಗರದಲ್ಲಿ ಬಿಸಿಲಿನ ದಾಹ ತಣಿಸಿಕೊಳ್ಳಲು ಕಲ್ಲಂಗಡಿ, ತಂಪು ಪಾನೀಯ ಅಂಗಡಿಗಳ ಮುಂದೆ ಜನ ಸೇರುತ್ತಿದ್ದಾರೆ. ಬಿಸಿಲ ಬೇಗೆಯು ಮೇ ತಿಂಗಳವರೆಗೆ ಭಯಾನಕವಾಗಿರಲಿದ್ದು, ಕಚೇರಿಗಳ ಸಮಯ ಬದಲಾವಣೆ ಮಾಡುವಂತೆ ಜನರು ವಿನಂತಿಸಿದ್ದಲ್ಲದೇ, ಪ್ರಾಣಿ ಪಕ್ಷಿಗಳ ಕುರಿತು ಕನಿಕರ ತೋರಿಸುವಂತೆ ಮನವಿ ಮಾಡಿದ್ದಾರೆ.

# ಮಗನನ್ನು ಕಲ್ಲಿನಿಂದ ಹೊಡೆದು ಕೊಂದ ತಂದೆ!

**ಬೆಳಗಾವಿ:** ಮದುವೆ ಖುಷಿಯಲ್ಲಿದ್ದ ಯುವಕನನ್ನು ಕ್ಷುಲ್ಲಕ ಕಾರಣಕ್ಕೆ ಆತನ ತಂದೆ ಹಾಗೂ ಸಹೋದರ ಸೇರಿ ಹತ್ಯೆಗೈದ ಘಟನೆ ಕಿತ್ತೂರು ತಾಲೂಕಿನ ಚಿಕ್ಕ ನಂದಿಹಳ್ಳಿ ಗ್ರಾಮದಲ್ಲಿ ನಡೆದಿದೆ.



ಮೃತನನ್ನು ಮಂಜುನಾಥ್ ಉಳ್ಳಾಗಡ್ಡಿ (25) ಎಂದು ಗುರುತಿಸಲಾಗಿದೆ. ಕೊಲೆಗೈದ ಆರೋಪಿಗಳನ್ನು, ನಾಗಪ್ಪ ಹಾಗೂ ಗುರುಬಸಪ್ಪ ಎಂದು ಗುರುತಿಸಲಾಗಿದೆ. ಶನಿವಾರ ರಾತ್ರಿ ಮಂಜುನಾಥ್ ಕುಡಿದು ಬಂದು ಗಲಾಟೆ ಮಾಡುತ್ತಿದ್ದ. ಇದರಿಂದ ಬೇಸತ್ತ ತಂದೆ ಹಾಗೂ ಸಹೋದರ ಆತನನ್ನು ಕಲ್ಲು, ಇಟ್ಟಿಗೆಯಿಂದ ಹೊಡೆದು ಹತ್ಯೆಗೈದಿದ್ದಾರೆ.

ಮಾ.12ರಂದು ಮಂಜುನಾಥ್ ಮದುವೆ ನಿಗದಿಯಾಗಿತ್ತು. ಆತನ ಮದುವೆಗಾಗಿ ಸೇನೆಯಲ್ಲಿದ್ದ ಗುರುಬಸಪ್ಪ ರಜೆಯ ಮೇಲೆ ಊರಿಗೆ ಬಂದಿದ್ದ ಎಂದು ತಿಳಿದು ಬಂದಿದೆ.

ಕಿತ್ತೂರು ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ. ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಶವವನ್ನು ಬಿಮ್ಸ್ ಆಸ್ಪತ್ರೆಗೆ ಸಾಗಿಸಲಾಗಿದೆ.

# ಲಾರಿಗೆ ಇನ್ನೋವಾ ಕಾರು ಡಿಕ್ಕಿ : ಐವರ ದುರ್ಮರಣ

**ಚಿತ್ರದುರ್ಗ:** ಇನ್ನೋವಾ ಕಾರು ಲಾರಿಗೆ ಡಿಕ್ಕಿಯಾಗಿ ಭೀಕರ ಅಪಘಾತ ಸಂಭವಿಸಿದ ಪರಿಣಾಮ ಕಾರಿನಲ್ಲಿದ್ದ ಐವರು ದಾರುಣ ಸಾವನ್ನಪ್ಪಿರುವ ಘಟನೆ ಚಿತ್ರದುರ್ಗದ ಸಿಬಾರ ಗ್ರಾಮದಲ್ಲಿ ನಡೆದಿದೆ.

ದಾವಣಗೆರೆ-ಚಿತ್ರದುರ್ಗ ರಿಂಗ್ ರಸ್ತೆಯಲ್ಲಿ ಘಟನೆ ಸಂಭವಿಸಿದೆ. ಘಟನೆಯಲ್ಲಿ ಐವರು ಸ್ಥಳದಲ್ಲೇ ಮೃತಪಟ್ಟರೇ, ಓರ್ವನ ಸ್ಥಿತಿ ಗಂಭೀರವಾಗಿದೆ. ಸಿಬಾರ ಗ್ರಾಮದ ಹೋಟೆಲ್‌ವೊಂದರ ಬಳಿ ಘಟನೆ ನಡೆದಿದೆ. ಚಾಲಕನ ನಿಯಂತ್ರಣ ತಪ್ಪಿ ಕಾರು ಲಾರಿಗೆ ಡಿಕ್ಕಿಯಾಗಿರುವ



ಶಂಕೆ ವ್ಯಕ್ತವಾಗಿದೆ.

ಘಟನಾ ಸ್ಥಳಕ್ಕೆ ಗ್ರಾಮಾಂತರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

## ಗಂಭೀರ ಆರೋಪ

ಯಡಿಯೂರಪ್ಪ ಅವರನ್ನ ಸಿಎಂ ಕುರ್ಚಿಯಿಂದ ಕೆಳಗೆ ಇಳಿಸುವಾಗ ಲಿಂಗಾಯತ ಸ್ವಾಮೀಜಿಗಳನ್ನ ಇಟ್ಟುಕೊಂಡು ಆಟ ಆಡುತ್ತಿದ್ದರು. ಈಗ ಸಹ ಲಿಂಗಾಯತರ ಸಮಾವೇಶ ಮಾಡುತ್ತಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಬದಲಾವಣೆ ಆಗಲೇ ಬೇಕು. ಜೊತೆಗೆ ಪಕ್ಷ ವಿರೋಧಿಗಳು ಹಾಗೂ ಮ್ಯಾಚ್ ಫಿಕ್ಸರ್ಗಳಿಗೆ ಪಾಠ ಕಲಿಸಬೇಕು ಎಂದು ಪರೋಕ್ಷವಾಗಿ ಮಾಜಿ ಸಚಿವ ರೇಣುಕಾಚಾರ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಭ್ರಷ್ಟಾಚಾರ, ಮ್ಯಾಚ್ ಫಿಕ್ಸಿಂಗ್ ಮಾಡುವವರೆಲ್ಲರೂ ನಾಶವಾಗಲಿ

ನಮಗೆ ಯಾವುದೇ ಭಯವಿಲ್ಲ. ನಾವು ಪ್ರಾಮಾಣಿಕ ಕಾರ್ಯಕರ್ತರು. ಭ್ರಷ್ಟಾಚಾರ ಮಾಡುವವರು ಮತ್ತು ಮ್ಯಾಚ್ ಫಿಕ್ಸಿಂಗ್ ಮಾಡುವವರೆಲ್ಲರೂ ನಾಶವಾಗಲಿ. ಯಡಿಯೂರಪ್ಪ ಆಗಲಿ ಯತ್ನಾಳ್ ಆಗಲಿ ಯಾರೇ ಆಗಲಿ ನಮಗೆ ಹೆದರಿಕೆಯಿಲ್ಲ. ನಾನು ಯತ್ನಾಳ್ ಬೆಂಬಲಿಗನಲ್ಲ. ನಾನು ದಾವಣಗೆರೆಯವನು, ಯತ್ನಾಳ್ ವಿಜಯಪುರದವರು. ದಾವಣಗೆರೆಯಲ್ಲಿ ನಡೆಯುತ್ತಿರುವ ಲೋಕಸಭಾ ಚುನಾವಣೆಯಲ್ಲಿ ಯಡಿಯೂರಪ್ಪ ಮಾಡಿರುವ ಅನ್ಯಾಯದ ವಿರುದ್ಧ ಹೋರಾಟ ಮಾಡುತ್ತೇನೆ ಎಂದು ಹರೀಶ್ ಹೇಳಿದರು.

ಯಡಿಯೂರಪ್ಪ ಮತ್ತು ವಿಜಯೇಂದ್ರ ಬಗ್ಗೆ ಪಕ್ಷದ ವರಿಷ್ಠರಿಗೆ ಹಾಗೂ ಸಂಸದರಿಗೆ ದೂರು ನೀಡಿದ್ದೇವೆ. ಅವರು ಸಹ ಇವರ ಬಗ್ಗೆ ನಮ್ಮ ಮುಂದೆ ಗುಣಗಾನ ಮಾಡಿದ್ದಾರೆ. ವಿಜಯೇಂದ್ರ ಜೊತೆ ಓಡಾಡುವ ಪಕ್ಷ ವಿರೋಧಿಗಳಿಗೆ ತಕ್ಕ ಪಾಠ ಆಗಲಿದೆ ಎಂದು ಅವರು ಎಚ್ಚರಿಸಿದ್ದಾರೆ.

ವಿಜಯೇಂದ್ರ ವಿರುದ್ಧ ನನ್ನ ಹೋರಾಟ ನಿರಂತರವಾಗಿರುತ್ತದೆ. ಯತ್ನಾಳ್ ಜೊತೆ ಇರಲಿ ಬಿಡಲಿ, ನನ್ನ ಹೋರಾಟ ಮಾತ್ರ ನಿರಂತರವಾಗಿ ನಡೆಯುತ್ತದೆ ಎಂದು ಅವರು ಹೇಳಿದ್ದಾರೆ.

## ಕುಸಿದು ಬಿದ್ದ ತಾಯಿ!

ಹಿಂದೂ ಹುಡುಗಿಯನ್ನು ಮುಸ್ಲಿಂ ಹುಡುಗ ಪ್ರೀತಿಸಿ ಕಿಡ್ನಾಪ್ ಮಾಡಿದ್ದಾನೆ ಎಂಬ ಆರೋಪ ಸಂತಿ ಬಸ್ತವಾಡ ಗ್ರಾಮದಲ್ಲಿ ಕೇಳಿಬಂದಿತ್ತು. 22 ದಿನಗಳ ಹಿಂದೆ ರಾಧಿಕಾ ಮುಚ್ಚಂಡಿ ಮತ್ತು ಸದ್ರುದಿನ್ ಬೇಪಾರಿ ಎಂಬ ಜೋಡಿ ನಾಪತ್ತೆಯಾಗಿತ್ತು. ರಾಧಿಕಾ ಅವರ ತಾಯಿ ದೀಪಾ ಅವರು ಮಗಳನ್ನು ಕಿಡ್ನಾಪ್ ಮಾಡಲಾಗಿದೆ ಎಂದು ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಇದೀಗ ಈ ಜೋಡಿ ಮುಂಬೈನಲ್ಲಿ ಪತ್ತೆಯಾಗಿದ್ದು, ಪೊಲೀಸರು ಅವರನ್ನು ಬೆಳಗಾವಿಗೆ ಕರೆತಂದಿದ್ದಾರೆ. ಜೋಡಿಯನ್ನು ಬೆಳಗಾವಿ ಮಹಿಳಾ ಪೊಲೀಸ್ ಠಾಣೆಗೆ ಕರೆತಂದು ವಿಚಾರಣೆ ನಡೆಸಲಾಯಿತು. ಈ ವೇಳೆ ರಾಧಿಕಾ, ನಾನು ಸದ್ರುದಿನ್ ಅವರನ್ನು ಪ್ರೀತಿಸಿ ಮದುವೆಯಾಗಿದ್ದೇನೆ. ನಾನು ನನ್ನ ಗಂಡನ ಜೊತೆಗೆ ಇರುತ್ತೇನೆ ಎಂದು ಹೇಳಿದ್ದಾರೆ.

ಈ ವೇಳೆ ರಾಧಿಕಾ ತಾಯಿ ದೀಪಾ ಅವರು ಮಗಳನ್ನು ಮನೆಗೆ ಕಳುಹಿಸುವಂತೆ ಪೊಲೀಸರ ಮೊರೆ ಹೋಗಿದ್ದಾರೆ. ಮದುವೆ ಮಾಡಿಕೊಡುತ್ತೇವೆ ಮಗಳೇ ಎಂದು ಕಣ್ಣೀರು ಹಾಕಿದ್ದಾರೆ, ಆದರೆ ರಾಧಿಕಾ ಒಪ್ಪಿಲ್ಲ, ತನ್ನ ಮಗಳ ಮಾತಿನಿಂದ ಮನನೊಂದ ದೀಪಾ ಠಾಣೆಯಲ್ಲೇ ಕುಸಿದು ಬಿದ್ದಿದ್ದಾರೆ. ಸಂಬಂಧಿಕರು ತಕ್ಷಣ ದೀಪಾ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

**ಹಿಂದೂ ಯುವತಿಯನ್ನ ಕಿಡ್ನ್ಯಾಪ್ ಮಾಡಿದ ಮುಸ್ಲಿಂ ಯುವಕ!:** ಬೆಳಗಾವಿಯಲ್ಲೊಂದು ಲವ್-ಕಿಡ್ನಾಪ್ ಮಾಡಿರುವ ಆರೋಪ ಕೇಳಿಬಂದಿತ್ತು. ಸದ್ರುದ್ದೀನ್ ಭೇಪಾರಿ ಮತ್ತು ನರ್ಸಿಂಗ್ ಓದುತ್ತಿದ್ದ ಹಿಂದೂ ಹುಡುಗಿ ನಡುವೆ ಸ್ನೇಹ ಬೆಳೆದಿತ್ತು. ನಂತರ ಈ ಸ್ನೇಹ ಪ್ರೀತಿಗೆ ತಿರುಗಿ ಎರಡರಿಂದ ಮೂರು ವರ್ಷಗಳೇ ಕಳೆದಿತ್ತು. ಆದರೆ ಮನೆಯಲ್ಲಿ ಮದುವೆ ಸುದ್ದಿ ಹೇಳಿದ್ದೇ ತಡ ಹುಡುಗಿ ತಾಯಿಯಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು ಎನ್ನಲಾಗಿದೆ.9

ಅನ್ಯಧರ್ಮದ ಹುಡುಗ ಎಂಬ ಒಂದೇ ಕಾರಣಕ್ಕೆ ಹಿಂದೂ ಹುಡುಗಿಯ ತಾಯಿ ಮದುವೆ ಬಗ್ಗೆ ಹೇಳಿದಾಗಲ್ಲಾ ಬೇಡ ಹೇಳುತ್ತಲೇ ಇದ್ದರಂತೆ. ಆದರೆ ತಾಯಿ ವಿರೋಧ ವ್ಯಕ್ತವಾದ ಬೆನ್ನಲ್ಲೇ ಪ್ರೀತಿಸಿದ ನರ್ಸಿಂಗ್ ಯುವತಿಯನ್ನೇ ಮುಸ್ಲಿಂ ಯುವಕ ಸದ್ರುದಿನ್ ಬೇಪಾರಿ ಎಂಬಾತ ಅಪಹರಿಸಿಕೊಂಡು ಕರೆದೊಯ್ದಿದ್ದಾನೆ ಎಂದು ಆರೋಪಿಸಲಾಗಿತ್ತು.

ಬೆಳಗಾವಿ ತಾಲೂಕಿನ ಸಂತಿಬಸ್ತವಾಡ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಗೌಂಡಿ (ಗಾರೆ ಕೆಲಸ) ಆಗಿ ಕೆಲಸ ಮಾಡ್ತಿದ್ದ ಸದ್ರುದಿನ್ ಬೇಪಾರಿ ಎಂಬಾತನ ವಿರುದ್ಧ ಯುವತಿ ಅಪಹರಣ ಆರೋಪಿಸಲಾಗಿತ್ತು, 22 ದಿನಗಳ ಹಿಂದೆ ಹಿಂದೂ ಹುಡುಗಿಯನ್ನ ಸದ್ರುದಿನ್ ಎಂಬಾತ ಅಪಹರಿಸಿ ಕರೆದೊಯ್ದಿದ್ದಾನೆ ಎಂಬ ಆರೋಪ ಕೇಳಿ ಬಂದಿತ್ತು.

**ಹಿಂದೂ ಯುವತಿ, ಮುಸ್ಲಿಂ ಯುವಕ:** ಅಲ್ಲದೇ ಈ ಕೃತ್ಯಕ್ಕೆ ಸದ್ರುದಿನ್‌ಗೆ ಆತನ ಕುಟುಂಬಸ್ಥರು ಸಾಥ್ ಕೊಟ್ಟಿದ್ದಾರೆ ಎಂದು ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಹುಡುಗಿ ತಾಯಿ ದೂರು ದಾಖಲಿಸಿದ್ದರು. ಸದ್ಯ ಓಡಿ ಹೋಗಿರುವ ಈ ಜೋಡಿಯ ಪತ್ತೆಗಾಗಿ ಮೂರು ವಿಶೇಷ ತಂಡವನ್ನು ರಚಿಸಲಾಗಿದ್ದು, ಮಾಧ್ಯಮಗಳಿಗೆ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾಹಿತಿ ನೀಡಿದ್ದಾರೆ.

## ಇಡಿ ದಾಳಿ

ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಿ ಅಧಿಕಾರಿಗಳು ಮತ್ತು ಉದ್ಯಮಿಗಳು ಸೇರಿದಂತೆ ಹಲವಾರು ವ್ಯಕ್ತಿಗಳನ್ನು ಈಗಾಗಲೇ ಬಂಧಿಸಲಾಗಿದೆ.

ಛತ್ತೀಸ್‌ಗಢ ಮದ್ಯ ಹಗರಣ ಪ್ರಕರಣವನ್ನು ಇಡಿ ತನಿಖೆ ನಡೆಸುತ್ತಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಇಡಿ ಮತ್ತು ಎಸಿಬಿಯಲ್ಲಿ ಎಫ್‌ಐಆರ್ ದಾಖಲಾಗಿದೆ. 2 ಸಾವಿರ ಕೋಟಿ ರೂ.ಗಳಿಗೂ ಹೆಚ್ಚಿನ ಹಗರಣದ ಬಗ್ಗೆ ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಐಎಎಸ್ ಅಧಿಕಾರಿ ಅನಿಲ್ ತುತೇಜಾ, ಅಬಕಾರಿ ಇಲಾಖೆ ಎಂಡಿ ಎಪಿ ತ್ರಿಪಾಠಿ ಮತ್ತು ಉದ್ಯಮಿ ಅನ್ವರ್ ಧೇಬರ್ ಅವರ ಮೂಲಕ ಆಗಿನ ಭೂಪೇಶ್ ಸರ್ಕಾರದ ಅವಧಿಯಲ್ಲಿ ಈ ಹಗರಣ ನಡೆದಿತ್ತು ಎಂದು ತನಿಖೆಯಲ್ಲಿ ಕಂಡುಹಿಡಿರುವುದಾಗಿ ಜಾರಿ ನಿರ್ದೇಶನಾಲಯ ಹೇಳಿಕೊಂಡಿದೆ.

## ಪಾಪಿಗಳು!

ಸರ್ಕಾರದ ನಿಗದಿತ ವಿವಾಹ ವಯಸ್ಸು ಉಲ್ಲಂಘಿಸಿ ಅಪ್ರಾಪ್ತರನ್ನು ವಿವಾಹ ಮಾಡುವ ಪದ್ಧತಿ ಇಂದಿದೂ ನಡೆಯುತ್ತಿದೆ. ಅಂತಹದ್ದೇ ಅಮಾನವೀಯ ಘಟನೆಯೊಂದು ತಮಿಳುನಾಡಿನಲ್ಲಿ ನಡೆದಿದೆ.

ತಮಿಳುನಾಡು ಹಾಗೂ ಕರ್ನಾಟಕ ಗಡಿ ಭಾಗದ ಗ್ರಾಮದಲ್ಲಿ ನಡೆದ ಈ ಅಮಾನವೀಯ ಘಟನೆ ಎಲ್ಲರನ್ನೂ ತಲೆ ತಗ್ಗಿಸುವಂತೆ ಮಾಡಿದೆ. 14 ವರ್ಷದ ಬಾಲಕಿಗೆ ಅವಳ ಸ್ವಂತ ಸೋದರ ಮಾವನ ಜೊತೆ ಬಲವಂತವಾಗಿ ಬಾಲ್ಯ ವಿವಾಹ ಮಾಡಲಾಗಿದೆ.

## ಮೊದಲನೇ ಪುಟದಿಂದ...

ಬಾಲಕಿ ಅಳುತ್ತಾ, ಕಿರುಚಾಡುತ್ತಿದ್ದರೂ ಆ ಪಾಪಿಗಳು ಕರುಣೆ ತೋರಿಸಲಿಲ್ಲ. ಏಳನೇ ತರಗತಿ ಓದುತ್ತಿದ್ದ ಬಾಲಕಿಗೆ ಅವಳ ತಾಯಿಯ ಸ್ವಂತ ತಮ್ಮನ ಜೊತೆ ಬಲವಂತವಾಗಿ ಮದುವೆ ಮಾಡಲಾಗಿದೆ.

ಬಾಲಕಿಗೆ ಇಷ್ಟವಿಲ್ಲದಿದ್ದರೂ ಫೆಬ್ರವರಿ 3 ರಂದು ಬೆಂಗಳೂರಿನಲ್ಲಿ ಮದುವೆ ನಡೆದಿತ್ತು. ಮದುವೆ ಮುಗಿಸಿ ಎಲ್ಲರೂ ಬಾಲಕಿಯ ಮನೆಗೆ ಬಂದಿದ್ದರು. ಅಲ್ಲಿಂದ ಬಾಲಕಿಯನ್ನ ಯುವಕನ ಮನೆಗೆ ಕರೆದುಕೊಂಡು ಹೋಗಲು ಯತ್ನಿಸಿದಾಗ ಬಾಲಕಿ ಒಪ್ಪಲಿಲ್ಲ. ಬಾಲಕಿ ಒಪ್ಪದಿದ್ದಾಗ ಆ ಪಾಪಿಗಳು ಅವಳನ್ನು ಬಲವಂತವಾಗಿ ಬುಜದ ಮೇಲೆ ಹೊತ್ತುಕೊಂಡು ಹೋಗಿದ್ದಾರೆ. ದಾರಿಯುದ್ದಕ್ಕೂ ಬಾಲಕಿ ಕಿರುಚಾಡುತ್ತಿದ್ದರೂ, ಕಣ್ಣೀರು ಹಾಕಿ ಗೋಳಾಡುತ್ತಿದ್ದರೂ ಆ ಪಾಪಿಗಳ ಮನಸ್ಸು ಕರಗಲಿಲ್ಲ.

ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಡೆಂಕಣಿಕೋಟೆ ಮಹಿಳಾ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದಾರೆ. ಬಾಲ್ಯ ವಿವಾಹ ಆಗಿದ್ದ ಬಾಲಕಿಯ ಪೋಷಕರು, ಮಾವ, ಅತ್ತೆ, ಪತಿ ವಿರುದ್ಧ ಬಾಲ್ಯ ವಿವಾಹ ಮತ್ತು ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಐದು ಜನರನ್ನು ಬಂಧಿಸಲಾಗಿದೆ.

## ಕಾಯ್ದೆ ತರ್ತೀವಿ

ಸಿಎಂ ಹೇಳಿಕೆಗೆ ಕಾಂಗ್ರೆಸ್ ನಾಯಕ ಆರಿಫ್ ಮಸೂದ್ ತೀವ್ರ ಟೀಕೆ ವ್ಯಕ್ತಪಡಿಸಿದ್ದಾರೆ. ಸ್ವಯಂಪ್ರೇರಿತ ಮತಾಂತರವು ಸಾಂವಿಧಾನಿಕ ಹಕ್ಕು. ಕಾನೂನು ಬಲವಂತದ ಮತಾಂತರವನ್ನು ವಿರೋಧಿಸುವುದಾದರೆ, ಅದು ತಾರತಮ್ಯವಿಲ್ಲದೆ ಎಲ್ಲರಿಗೂ (ಧರ್ಮಕ್ಕೂ) ಅನ್ವಯಿಸಬೇಕು ಎಂದಿದ್ದಾರೆ.

ಬಿ.ಆರ್. ಅಂಬೇಡ್ಕರ್ ರಚಿಸಿದ ಸಂವಿಧಾನದಲ್ಲಿ ದೋಷಗಳಿವೆ ಎಂದು ಮುಖ್ಯಮಂತ್ರಿ ಹೇಳುತ್ತಿದ್ದಾರೆಯೇ ಎಂದು ಮಸೂದ್ ಪ್ರಶ್ನಿಸಿದ್ದಾರೆ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನವನ್ನು ಬದಲಾಯಿಸಲಿದ್ದೇನೆ ಎಂದು ಅವರು ಒಪ್ಪಿಕೊಳ್ಳಲಿ ಅಥವಾ ಅದರಲ್ಲಿ ದೋಷಗಳಿವೆ ಎಂದು ಹೇಳಲಿ ಎಂದು ಟಾಂಗ್ ಕೊಟ್ಟಿದ್ದಾರೆ.

## ಹಾಲು ಕಡಿತ?

ಹಾಲನ್ನು ಕಡಿತಗೊಳಿಸುವ ಬಗ್ಗೆ ಕೆಎಂಎಫ್ ಚಿಂತನೆಗೆ ಮುಂದಾಗಿದೆ.

ಐದಾರು ತಿಂಗಳ ಹಿಂದೆ ಪ್ರತಿನಿತ್ಯ ಒಂದು ಕೋಟಿ ಸಮೀಪ ಹಾಲು ಉತ್ಪಾದನೆಯಾಗುತ್ತಿದ್ದ ಕಾರಣ ಹಾಲನ್ನ ಪ್ರತಿ ಅರ್ಧ ಲೀಟರ್ ಮತ್ತು ಒಂದು ಲೀಟರ್ ಪ್ಯಾಕೆಟ್‌ಗಳಲ್ಲಿ ಕ್ರಮವಾಗಿ 50 ಎಂಎಲ್, ಮತ್ತು 100 ಎಂಎಲ್ ಹೆಚ್ಚುವರಿಯಾಗಿ ಸೇರಿಸಿ, ಹೆಚ್ಚುವರಿಯಾಗಿ ದರ ಪರಿಷ್ಕರಣೆ ಮಾಡಿದ್ದರು. ಆದರೆ ಸದ್ಯ ಬೇಸಿಗೆ ಕಾರಣ ಹಿಂದೆ ಉತ್ಪಾದನೆ ಆಗುತ್ತಿದ್ದಷ್ಟೇ ಪ್ರಮಾಣದಲ್ಲಿ ಈಗ ಉತ್ಪಾದನೆ ಕಷ್ಟವಾಗಲಿದ್ದು, ಸುಮಾರು 10 ರಿಂದ 15%ನಷ್ಟು ಹಾಲಿನ ಉತ್ಪಾದನೆ ಇಳಿಕೆಯಾಗುವ ಸಾಧ್ಯತೆ ಇದೆ. ಇದರಿಂದ ಹೆಚ್ಚುವರಿಯಾಗಿ ನೀಡುತ್ತಿದ್ದ ಹಾಲನ್ನ ಕಡಿತ ಮಾಡುವ ಸಾಧ್ಯತೆ ಇದೆ. ಆದರೆ ಹಾಲು ಕಡಿತ ಆದರೂ ಹೆಚ್ಚುವರಿ ಹಾಲಿಗೆ ಪಡೆಯುತ್ತಿದ್ದ ಹೆಚ್ಚುವರಿ ಹಣವನ್ನು ಕಡಿತ ಮಾಡುತ್ತಾ ಅನ್ನೋದನ್ನ ಕಾದು ನೋಡಬೇಕಿದೆ.

ಸದ್ಯ ದರ ಏರಿಕೆಗೆ ಚಿಂತನೆ ಮಾಡಿರುವ ಸರ್ಕಾರ, ಹೆಚ್ಚುವರಿ ಹಾಲು ಕಡಿತವಾದರೂ ಅದೇ ದರಕ್ಕೆ ಮತ್ತೆ ಹೊಸ ದರ ಏರಿಕೆ ಮಾಡುವ ಸಾಧ್ಯತೆ ಇದೆ. ಈ ಬಗ್ಗೆ ಸಭೆ ಮಾಡಿ ತೀರ್ಮಾನ ಮಾಡಲು ಕೆಎಂಎಫ್ ನಿರ್ಧಾರ ಮಾಡಿದ್ದು, ದರ ಏರಿಕೆಗೂ ಮುನ್ನವೇ ಈ ಬಗ್ಗೆ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

## ಭಾರಿ ಇಳಿಕೆ

ಹಂಪಿಯ ಪ್ರವಾಸೋದ್ಯಮದ ಮೇಲೆ ನೇರ ಪರಿಣಾಮ ಬೀರಿದೆ.

**25ಕ್ಕೂ ಹೆಚ್ಚು ಹೋಂಸ್ಟೇಗಳಲ್ಲಿ ಬುಕಿಂಗ್ ಕ್ಯಾನ್ಸಲ್:** ಕಳೆದ ಎರಡು ದಿನಗಳಲ್ಲಿ, ಹಂಪಿ ಮತ್ತು ಅದರ ಸುತ್ತಮುತ್ತಲಿನ 25 ಕ್ಕೂ ಹೆಚ್ಚು ಹೋಂಸ್ಟೇಗಳಲ್ಲಿ ಬುಕಿಂಗ್ ಕ್ಯಾನ್ಸಲ್ ಮಾಡಲಾಗಿರುವುದು ತಿಳಿದುಬಂದಿದೆ. ಕೊಪ್ಪಳ ಘಟನೆಯು ಹಂಪಿ ಪ್ರವಾಸೋದ್ಯಮದ ಮೇಲೆ ನಕಾರಾತ್ಮಕ ಪರಿಣಾಮ ಬೀರಿದೆ ಎಂದು ಕರ್ನಾಟಕ ರಾಜ್ಯ ಪ್ರವಾಸಿ ಮಾರ್ಗದರ್ಶಿಗಳ ಸಂಘದ ಕಾರ್ಯದರ್ಶಿ ವಿರೂಪಾಕ್ಷಿ ವಿ ಹಂಪಿ ಹೇಳಿರುವುದಾಗಿಯೂ ವರದಿ ಉಲ್ಲೇಖಿಸಿದೆ. ಘಟನೆ ವರದಿಯಾದ ನಂತರ, ಹೋಂಸ್ಟೇಗಳಲ್ಲಿ ಬುಕಿಂಗ್‌ನಲ್ಲಿ ಕುಸಿತ ಕಂಡುಬಂದಿರುವುದನ್ನು ಅವರು ದೃಢಪಡಿಸಿದ್ದಾರೆ.

**ಹಂಪಿಗೆ ಬರಲು ಇತರ ರಾಜ್ಯಗಳ ಪ್ರವಾಸಿಗರಿಂದಲೂ ಹಿಂದೇಟು:** ವಿದೇಶಗಳ ಪ್ರಯಾಣಿಕರು ಮಾತ್ರವಲ್ಲ, ಇತರ ರಾಜ್ಯಗಳ ಪ್ರವಾಸಿಗರು ಕೂಡ ಹಂಪಿಗೆ ನಿಗದಿಪಡಿಸಿದ್ದ ಪ್ರವಾಸವನ್ನು ರದ್ದುಗೊಳಿಸುತ್ತಿದ್ದಾರೆ ಅಥವಾ ಮುಂದೂಡುತ್ತಿದ್ದಾರೆ. ಇಡೀ ರಾಷ್ಟ್ರವು ಸಾಣಾಪುರ ಅತ್ಯಾಚಾರ ಘಟನೆಯನ್ನು ಖಂಡಿಸಿದೆ. ಹಂಪಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪೊಲೀಸರು ಗಸ್ತು ಹೆಚ್ಚಿಸುತ್ತಾರೆ ಎಂದು ಆಶಿಸುತ್ತೇವೆ ಎಂದು ವಿರೂಪಾಕ್ಷಿ ಹೇಳಿದ್ದಾರೆ. ಏತನ್ಮಧ್ಯೆ, ವಿಜಯನಗರ ಪೊಲೀಸರು ಹಂಪಿ ಮತ್ತು ಸುತ್ತಮುತ್ತಲಿನ ಎಲ್ಲಾ ಹೋಂಸ್ಟೇಗಳ ಮಾಲೀಕರೊಂದಿಗೆ ಸಭೆ ನಡೆಸಿದ್ದಾರೆ. ಕೊಪ್ಪಳ ಘಟನೆಯು ಎಲ್ಲಾ ಹೋಂಸ್ಟೇ ಮಾಲೀಕರಿಗೆ ಮತ್ತು ಪೊಲೀಸ್ ಇಲಾಖೆಗೆ ಒಂದು ಎಚ್ಚರಿಕೆಯಾಗಿದೆ ಎಂದು ವಿಜಯನಗರ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿ ಬಾಬು ಬಿಎಲ್ ಹೇಳಿದ್ದಾರೆ.

ಹಂಪಿ ಮತ್ತು ಜಿಲ್ಲೆಯ ಇತರ ಪ್ರವಾಸಿ ಸ್ಥಳಗಳಿಗೆ ಭೇಟಿ ನೀಡುವವರಿಗೆ ಸುರಕ್ಷತೆ ಒದಗಿಸಲು ಪೊಲೀಸ್ ಇಲಾಖೆ ಸಿದ್ಧವಾಗಿದೆ ಮತ್ತು ಶೀಘ್ರದಲ್ಲೇ ಹೋಂಸ್ಟೇ ಮಾಲೀಕರಿಗೆ ಮಾರ್ಗಸೂಚಿಗಳನ್ನು ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ. ಹಂಪಿಯ ಹೋಂಸ್ಟೇ ಮಾಲೀಕರೊಂದಿಗೆ ಭಾನುವಾರ ಸಭೆಗಳನ್ನು ನಡೆಸಿರುವುದಾಗಿಯೂ ಅವರು ತಿಳಿಸಿದ್ದಾರೆ.

## ಗಂಭೀರ ಗಾಯ

ಇದು ಗೂಳಿಯನ್ನು ಪಳಗಿಸುವ ಪುರಾತನ ಕಾರ್ಯಕ್ರಮವಾಗಿದೆ. ಕನ್ನಡದಲ್ಲಿ ಗೂಳಿ ಕಾಳಗ ಎಂದು ಕರೆಸಿಕೊಳ್ಳುವ ಈ ಕ್ರೀಡೆ ತಮಿಳುನಾಡಿನ ಬಹುಮುಖ್ಯ ಗ್ರಾಮೀಣ ಕ್ರೀಡೆ. ಬರೀ ಕ್ರೀಡೆಯಷ್ಟೇ ಅಲ್ಲದೆ ತಮಿಳುನಾಡಿನ ಸಂಕ್ರಾಂತಿ ಹಬ್ಬದ ಒಂದು ಸಾಂಸ್ಕೃತಿಕ ಆಚರಣೆಯೂ ಆಗಿದೆ.

ಚೆನ್ನಾಗಿ ಕೊಬ್ಬಿದ ಹೋರಿಯೊಂದನ್ನು ಗೂಳಿಗಳ ಜೊತೆಗೆ ಸೆಣಸಾಡುವುದಕ್ಕೆ ಸಿದ್ದರಾಗಿ ನಿಂತ ಜನಗಳ ಗುಂಪಿಗೆ ಹಗ್ಗವಿಲ್ಲದೆ ಬಿಡಲಾಗುತ್ತದೆ. ಗೂಳಿಯನ್ನು ಹಗ್ಗ ಬಿಚ್ಚಿ ಬಿಟ್ಟ ತಕ್ಷಣ ನೆರೆದಿರುವ ಜನರ ಹರ್ಷೋದ್ಗಾರ, ಕೇಕೆ ಮುಗಿಲು ಮುಟ್ಟುತ್ತದೆ. ಇದನ್ನು ಕಂಡ ಹೋರಿ ನಿಗದಿತ ಬಯಲಿನಲ್ಲಿ ಓಡಾಲಾರಂಭಿಸುತ್ತದೆ. ಅದರ ಮೇಲೆ ಎರಗುವ ಮೂಲಕ ಯುವಕರು ಹೋರಿಯ ಭುಜ ಹಿಡಿದುಕೊಂಡು ಹೋರಿಯನ್ನು ಒಂದು ಕಡೆ ನಿಲ್ಲಿಸಬೇಕು. ಹಾಗೆ ನಿಲ್ಲಿಸುವಲ್ಲಿ ಯಾರು ಸಫಲರಾಗುತ್ತಾರೋ ಸುತ್ತ ಮುತ್ತಲಿನ ಹಳ್ಳಿಗಳಲ್ಲಿ ಅವರಿಗೆ ಇನ್ನಿಲ್ಲದ ಮನ್ನಣೆ, ಗೌರವ ಸಿಗುತ್ತದೆ.

## ಕುಸಿತ

ದೋಮಲಪೆಂಟಾ ಬಳಿಯ ಶ್ರೀಶೈಲಂ ಆಣೆಕಟ್ಟಿನ ಹಿಂಭಾಗದ ಸುರಂಗದಲಿ ಸೋರಿಕೆ ಉಂಟಾಗಿದ್ದು, ಸೋರಿಕೆ ಸರಿಪಡಿಸಲು ಕಾರ್ಮಿಕರು ಒಳಗೆ ಹೋದಾಗ ಛಾವಣಿ ಕುಸಿದಿತ್ತು. ಈ ವೇಳೆ 56 ಕಾರ್ಮಿಕರು ಒಳಗೆ ಸಿಲುಕಿದ್ದರು. ಈ ಪೈಕಿ 48 ಜನರನ್ನು ಆರಂಭದಲ್ಲಿಯೇ ರಕ್ಷಿಸಲಾಗಿದ್ದು, 8 ಕಾರ್ಮಿಕರು ಸಿಲುಕಿಕೊಂಡಿದ್ದರು. ಕಾರ್ಮಿಕರನ್ನು ಪತ್ತೆಹಚ್ಚಲು ಕಳೆದ 17 ದಿನಗಳಿಂದ ರಕ್ಷಣಾ ಕಾರ್ಯ ನಡೆಯುತ್ತಿದ್ದು, ಭಾನುವಾರ ಓರ್ವ ಕಾರ್ಮಿಕನ ಶವ ಪತ್ತೆಯಾಗಿದೆ.

ಫೆ.22 ರಂದು ಸುರಂಗ ಕುಸಿತದ ಬಳಿಕ ಸ್ಥಳದಲ್ಲಿ ಎನ್‌ಡಿಆರ್ ಎಫ್, ಎಸ್‌ಡಿಆರ್‌ಎಫ್, ಉತ್ತರಾಖಂಡದ ರ‍್ಯಾಟ್ ಮೈನರ್, ಸ್ನಿಫರ್ ನಾಯಿ ಸೇರಿದಂತೆ 300ಕ್ಕೂ ಅಧಿಕ ಸಿಬ್ಬಂದಿ ಜೊತೆಗೂಡಿ ರಕ್ಷಣಾ ಕಾರ್ಯಾಚರಣೆ ನಡೆಸಿದ್ದಾರೆ. ಕಳೆದ 17 ದಿನಗಳಿಂದ ಹಗಲು, ರಾತ್ರಿ ಕಾರ್ಯಾಚರಣೆ ನಡೆಯುತ್ತಿದೆ.

ಕಾರ್ಯಾಚರಣೆ ಭರದಿಂದ ಸಾಗುತ್ತಿದ್ದು, ರಾಜ್ಯ ಮತ್ತು ಕೇಂದ್ರ ಸರ್ಕಾರ ಎರಡೂ ಅತ್ಯುತ್ತಮ ಪ್ರಯತ್ನ ಮಾಡುತ್ತಿದೆ. ಓರ್ವನ ಮೃತದೇಹ ಪತ್ತೆಯಾದ ಬಳಿಕ ಇನ್ನುಳಿದವರ ರಕ್ಷಣೆಗಾಗಿ ರೋಬೋಟ್ ಬಳಸಲು ರಾಜ್ಯ ಸರ್ಕಾರ ಯೋಜಿಸಿದ್ದು, 4 ಕೋಟಿ ರೂ. ಖರ್ಚು ಮಾಡಲಿದೆ.

ಇನ್ನೂ ಘಟನಾ ಸ್ಥಳಕ್ಕೆ ತೆಲಂಗಾಣ ಸಿಎಂ ಎ.ರೇವಂತ್ ರೆಡ್ಡಿ ಮಾ.2 ರಂದು ಭೇಟಿ ನೀಡಿದ್ದರು. ಇದೀಗ ಮಾ.11 ರಂದು ಘಟನಾ ಸ್ಥಳಕ್ಕೆ ಇನ್ನೊಮ್ಮೆ ಭೇಟಿ ನೀಡುವ ಮೂಲಕ ರಕ್ಷಣಾ ಕಾರ್ಯಾಚರಣೆಯನ್ನು ಪರಿಶೀಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಘಟನೆ ಏನು?:** ತೆಲಂಗಾಣದ ನಾಗರ್‌ಕರ್ನೂಲ್ ಜಿಲ್ಲೆಯ ಶ್ರೀಶೈಲಂ ಎಡದಂಡೆ ಕಾಲುವೆಯ ನಿರ್ಮಾಣ ಹಂತದಲ್ಲಿದ್ದ ಸುರಂಗದಲ್ಲಿ ಮೇಲ್ಛಾವಣಿ ಕುಸಿದು 8 ಮಂದಿ ಕಾರ್ಮಿಕರು ಸಿಲುಕಿದ್ದು, ಸುರಂಗ ನಿರ್ಮಾಣ ಕಂಪನಿ ನೀಡಿದ ಮಾಹಿತಿಯ ಪ್ರಕಾರ, ಸುರಂಗದಲ್ಲಿ 12-13 ಕಿ.ಮೀ ಒಳಗೆ ಸೋರಿಕೆ ಉಂಟಾಗಿತ್ತು. ಅದನ್ನು ಸರಿಪಡಿಸಲು ಕಾರ್ಮಿಕರು ಒಳಗೆ ಹೋದಾಗ ಎಡಭಾಗದಲ್ಲಿರುವ ಸುರಂಗದ ಮೇಲ್ಛಾವಣಿ ಮೂರು ಮೀಟರ್‌ಗಳಷ್ಟು ಕುಸಿದಿತ್ತು.

## ಬಂಧನ

ಇಂದು ಮುಂಜಾನೆ ಆರೋಪಿಯನ್ನು ಗಂಗಾವತಿಗೆ ಕರೆದುಕೊಂಡು ಬಂದಿದ್ದಾರೆ. ಕೃತ್ಯವೆಸಗಿದ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಕೊಪ್ಪಳದ ಕಾಲುವೆಯ ಪ್ರಶಾಂತ ದಡದಲ್ಲಿ ದೇಶಿ ಮತ್ತು ವಿದೇಶಿ ಪ್ರವಾಸಿಗರು ನಕ್ಷತ್ರಗಳನ್ನು ವೀಕ್ಷಿಸುತ್ತಿದ್ದಾಗ ಕೆಲ ದುಷ್ಕರ್ಮಿಗಳು ದಾಂಧಲೆ ಸೃಷ್ಟಿಸಿದ್ದರು. ಇಬ್ಬರು ಮಹಿಳೆಯರ ಮೇಲೆ ಅತ್ಯಾಚಾರ ಎಸಗಿದ್ದರು.

ಆರೋಪಿಗಳು ಮಹಿಳೆಯರನ್ನು ಗುರಿಯಾಗಿಸಿಕೊಂಡು ಮೂವರು ಪ್ರಯಾಣಿಕರನ್ನು ಕಾಲುವೆಗೆ ತಳ್ಳಿದರು. ಅಮೆರಿಕ ಮೂಲದ ಡೇನಿಯಲ್ ಮತ್ತು ಮಹಾರಾಷ್ಟ್ರದ ಪ್ರಯಾಣಿಕ ಪಂಕಜ್ ಈಜಿ ದಡ ಸೇರಿದ್ದರು. ಒಡಿಶಾದ ಬಿಬಾಶ್ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದರು. ಅವರ ಮೃತದೇಹ ಶನಿವಾರ ಬೆಳಗ್ಗೆ ಪತ್ತೆಯಾಗಿತ್ತು.

ಸಂಜೆ ಮುಗಿಲು
ಸೋಮವಾರ
10.3.2025



# ಮೌಲ್ಯಯುತವಾದ ಸಭ್ಯ ಸಮಾಜದ ಸೃಷ್ಟಿಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದು



**ವಿಜಯಪುರ:** ಸಾಮಾಜಿಕ, ನೈತಿಕ ಮತ್ತು ಧಾರ್ಮಿಕ ಮೌಲ್ಯಗಳನ್ನು ಮೂಲವಾಗಿಸಿಕೊಂಡು ಸದೃಢವಾಗಿರುವ ಸಭ್ಯಸಮಾಜವನ್ನು ಸೃಷ್ಟಿಸುವಲ್ಲಿ ಮಹಿಳೆಯ ಪಾತ್ರ ಮಹತ್ತರವಾದುದು. ವಿಚಾರಕ್ರಾಂತಿಯಿಂದ ಹಿಡಿದು ವಿಜ್ಞಾನ, ತಂತ್ರಜ್ಞಾನದವರೆಗೆ ಮಹಿಳೆಯು ಸ್ಥಾನಮಾನಕ್ಕಾಗಿ ಸಿಡಿದೆದ್ದು ಸಂಘಟಿತರಾಗಿ ಹೋರಾಟ ಮಾಡಿದ ಹಾದಿಯು ದುರ್ಗಮವಾದುದು. ಮನೆಯಲ್ಲಿಯೇ ಇದ್ದು ಬದುಕು ಕಟ್ಟಬಲ್ಲ ಮಹಿಳೆಯರಲ್ಲಿ ಅಪರಾಧಿ ಭಾವನೆ ಬಾರದೇ ದೇಸೀ ಸಂಸ್ಕೃತಿ, ಆಚರಣೆ, ಅಧ್ಯಾತ್ಮವನ್ನು ಬೋಧಿಸಿ ಉಳಿಸುವ ಕಾರ್ಯವಾಗಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ, ಶಿಕ್ಷಕ ಎಚ್.ಎಸ್.ರುದ್ರೇಶಮೂರ್ತಿ ತಿಳಿಸಿದರು.

ಪಟ್ಟಣದ ಶ್ರೀ ಚನ್ನಕೇಶವಸ್ವಾಮಿ ದೇವಾಲಯ ರಸ್ತೆಯಲ್ಲಿರುವ ವಿವೇಕಾನಂದ ಮಾತೃಮಡಿಲು ಸಂಸ್ಥೆಯಲ್ಲಿ ಜಿಲ್ಲಾ ಸಕ್ಷಮ, ಸದೀಕ್ಷಾ ಪರಿವಾರಗಳ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಮಾಜ ಚಿಂತಕ ಬಾಬುರಾಜೇಂದ್ರಪ್ರಸಾದ್ ಮಾತನಾಡಿ, ಹಿಂದೆಂದಿಗಿಂತಲೂ ಉತ್ತಮವಾದ ಕಾನೂನು, ಮಸೂದೆಗಳು ಜಾರಿಗೊಳ್ಳುತ್ತಿದ್ದರೂ ಮಹಿಳೆಯರ ಮೇಲೆ ನಿರಂತರ ದೌರ್ಜನ್ಯಗಳು ನಡೆಯುತ್ತಲೇ ಇರುವುದು ವಿಷಾಧಕರ ಸಂಗತಿಯಾಗಿದ್ದು, ಮಹಿಳಾ ಬದುಕಿನ ಮೇಲಿನ ದಾಳಿಯನ್ನು ಹತ್ತಿಕ್ಕಲು ಸಂಘಟಿತ ಹೋರಾಟದ ಅಗತ್ಯವಿದೆ ಎಂದರು.

ಸದೀಕ್ಷಾ ಪರಿವಾರದ ಡಿ.ಗಂಗಾಧರ್ ಮಾತನಾಡಿ, ಪುರುಷನಷ್ಟೇ ಸಮಾನವಾಗಿ ದುಡಿಯುವ ಶಕ್ತಿ, ಜವಾಬ್ದಾರಿ ಮಹಿಳೆಯರ ಮೇಲಿದ್ದು, ದುಡಿಯುವ ಮಹಿಳೆಯ ನೋವು, ಅನ್ಯಾಯ, ಅಸಮಾನತೆ ಹೆಚ್ಚುತ್ತಿದೆ. ಬಂಡವಾಳಶಾಹಿಗಳು ಸ್ತ್ರೀಯನ್ನು ಭೋಗದವಸ್ತುವಂತೆ ಬಿಂಬಿಸಿ ಮಹಿಳೆಯ ಘನತೆ–ಗೌರವವು ಕುಸಿಯುವಂತೆ ಮಾಡುತ್ತಿದ್ದಾರೆ ಎಂದರು.

ಜಿಲ್ಲಾಸಕ್ಷಮ ಅಧ್ಯಕ್ಷ ಹಾರೋಹಳ್ಳಿ ಚಂದ್ರಪ್ಪ ಮಾತನಾಡಿ, ಪ್ರಸ್ತುತ ಜಾರಿಯಲ್ಲಿರುವ ಕಾನೂನು ಕಟ್ಟಳೆಗಳ ಅರಿವು ಹೊಂದಿ ತನಗಾದ ಅನ್ಯಾಯದ ವಿರುದ್ಧ ಸೆಟೆದುನಿಲ್ಲಬಲ್ಲ ಆತ್ಮಸ್ಥೈರ್ಯ ಮಹಿಳೆಗೆ ಬರಬೇಕು. ಸಮಾಜವು ಮಹಿಳೆಯರಿಗಾದ ನೋವಿಗೆ ಸ್ಪಂದಿಸುವಂತಾಗಬೇಕು ಎಂದರು.

ಸಕ್ಷಮ ಜಿಲ್ಲಾ ಕಾರ್ಯದರ್ಶಿ ಬಿ.ಎಂ.ಜಗದೀಶ್‌ಕುಮಾರ್ ಮಾತನಾಡಿ, ಎಲ್ಲಾ ಕ್ಷೇತ್ರಗಳಲ್ಲಿಯೂ ಮಹಿಳೆಯು ಪುರುಷರಿಗೆ ಸಮಾನವಾಗಿ ಸಾಧನೆ ಮಾಡುತ್ತಿದ್ದು, ಸಾಮಾಜಿಕ, ಆರ್ಥಿಕ ಸಮಾನತೆ ಪಡೆಯುವಲ್ಲಿ ಮಹಿಳೆಯು ಮುಂದಾಗಬೇಕಿದೆ. ಮಹಿಳೆಯರ ನೆರವಿಲ್ಲದೇ ಅಭಿವೃದ್ಧಿಶೀಲ ರಾಷ್ಟ್ರಗಳು, ಸಮಾಜದಲ್ಲಿರುವ ಶೈಕ್ಷಣಿಕ ಮತ್ತು ಇತರೆ ಸಂಘಸಂಸ್ಥೆಗಳು ತಮ್ಮ ಗುರಿ ಮತ್ತು ಉದ್ದೇಶಗಳನ್ನು ಬಹುಶಃ ಸಾಧಿಸಲಾರವು. ಸಾಮಾಜೀಕರಣ ಪ್ರಕ್ರಿಯೆಯಲ್ಲಿ ಮಹಿಳೆಯು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕಿದೆ ಎಂದರು.

ಗ್ರಾಮಪಂಚಾಯಿತಿ ಅಧ್ಯಕ್ಷೆ ಸುಮಾಮಂಜುನಾಥ್, ಮುನಿನಾರಾಯಣ, ಸದೀಕ್ಷಾ ಪರಿವಾರದ ವೀರಭದ್ರ, ಕೃಷ್ಣಪ್ಪ, ವಂದನಾಜಗದೀಶ್, ಶೋಭಾಕಿಶೋರ್‌ಕುಮಾರ್, ಶಿಕ್ಷಕಿ ಎಂ.ಗಿರಿಜಾಂಬ, ಮತ್ತಿತರರು ಪಾಲ್ಗೊಂಡಿದ್ದರು. ಗಾಯಕಿ ಭಾನು ತಂಡದವರಿಂದ ವಚನಗಳ, ಭಾವಗೀತೆಗಳ ಗಾಯನ ನಡೆಯಿತು. ಸಿಆರ್‌ಪಿ ಸರಿತಾ ಅವರನ್ನು ಸನ್ಮಾನಿಸಲಾಯಿತು.

# ಗುರುಗಂಧರ್ವ ರಾಷ್ಟ್ರೀಯ ಪುರಸ್ಕಾರ ಪ್ರದಾನ

**ಬೆಂಗಳೂರು:** ಜೆ.ಸಿ.ರಸ್ತೆಯಲ್ಲಿರುವ ರವೀಂದ್ರ, ಕಲಾಕ್ಷೇತ್ರ, ಸಭಾಂಗಣದಲ್ಲಿ ಇದೇ ಮಾರ್ಚ್ 8 ರ ರಾತ್ರಿ, ಗಾಯನಾಚಾರ್ಯ ಗುರುರಾವ್ ದೇಶಪಾಂಡೆ ಸಂಗೀತ ಸಭಾ ವತಿಯಿಂದ ಗುರುರಾವ್ ದೇಶಪಾಂಡೆ – ಭೀಮಸೇನ್ ಜೋಶಿ ಸ್ಮರಣಾರ್ಥ ಅಹೋರಾತ್ರಿ ಸಂಗೀತೋತ್ಸವ ಆಯೋಜಿಸಲಾಗಿತ್ತು

ಈ ಬಾರಿಯ ಸಂಗೀತೋತ್ಸವದ ವೇಳೆ ನಾಡಿನ ಖ್ಯಾತ ಹಿಂದೂಸ್ತಾನಿ ಗಾಯಕರಾದ ಪದ್ಮಶ್ರೀ ಪುರಸ್ಕೃತ ಪಂಡಿತ್ ವೆಂಕಟೇಶ್ ಕುಮಾರ್ ಅವರಿಗೆ ಗುರುಗಂಧರ್ವ ರಾಷ್ಟ್ರೀಯ ಪುರಸ್ಕಾರ ಪ್ರದಾನ ಮಾಡಿ ಗೌರವಿಸಲಾಯಿತು. ಇದೇ ವೇಳೆ ಇತ್ತೀಚೆಗೆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮ ವಿಭೂಷಣಕ್ಕೆ ಭಾಜನರಾದ ಡಾ. ಎಲ್.ಸುಬ್ರಮಣ್ಯಂ ಅವರನ್ನೂ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಡಾ. ಎಲ್ ಸುಬ್ರಮಣಿಯನ್ ಅವರೊಂದಿಗೆ, ಅಂಕಣಕಾರರೂ, ರಮಣಶ್ರೀ ಹೋಟೆಲ್ ಸಮೂಹದ ಮುಖ್ಯಸ್ಥರಾದ ಶ್ರೀ ಎಸ್.ಷಡಕ್ಷರಿ ಅವರು ಮುಖ್ಯ ಅಭ್ಯಾಗತರಾಗಿ ಪಾಲ್ಗೊಂಡರು. ಈ ಬಾರಿಯ ಸಂಗೀತೋತ್ಸವದಲ್ಲಿ ಪ್ರಶಸ್ತಿ ಪುರಸ್ಕೃತ ಪಂಡಿತ್ ವೆಂಕಟೇಶ್ ಕುಮಾರ್ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ ಪ್ರಸ್ತುತಪಡಿಸಿದರು.

ಬಳಿಕ ಪಂಡಿತ್ ವಿನಾಯಕ ತೊರವಿ ಗಾಯನ, ವಿದುಷಿ ಅನುಪಮಾ ಭಾಗವತ್ ಸಿತಾರ್, ಶ್ರೀ ಓಜಸ್ ಅಧಿಯ ತಬಲಾ ಸ್ವತಂತ್ರ ವಾದನ ಹಾಗೂ ಶ್ರೀ ಅನಿರುದ್ಧ ಐತಾಳ್ ಗಾಯನದ ಮೂಲಕ ಸಂಗೀತಾಸಕ್ತರಿಗೆ ಮಧುರ ಸಂಗೀತದ ರಸದೌತಣವನ್ನು ಉಣಬಡಿಸಿದರು. ಸಾಹವಾದನದಲ್ಲಿ ಪಂಡಿತ್ ರವೀಂದ್ರ ಯಾವಗಲ್, ಪಂಡಿತ್ ರವೀಂದ್ರ, ಕಟೋಟಿ, ಪಂಡಿತ್ ವ್ಯಾಸಮೂರ್ತಿ ಕಟ್ಟಿ, ಪಂಡಿತ್ ರಾಜೇಂದ್ರ, ನಾಕೋಡ್ ಹಾಗೂ ಶ್ರೀ ಸುಧಾಂಶು ಘರ್ಪುರೆ ಕಲಾವಿದರಿಗೆ ಸಮರ್ಥ ಸಾಥ್ ನೀಡಿದರು. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಪಂ.ವೆಂಕಟೇಶ್ ಕುಮಾರ್, ಸಂಗೀತ ಹಾಗೂ ನೃತ್ಯ ಕ್ಷೇತ್ರದಲ್ಲಿ ಗುರುಗಳ ಮಾರ್ಗದರ್ಶನ ಹಾಗೂ ಒಡನಾಟ ಬಹಳ ಮುಖ್ಯ. ಇವೆರಡೂ ಕ್ಷೇತ್ರಗಳಲ್ಲಿ ಇನ್ನೂ ಗುರುಗಳನ್ನು ಉನ್ನತ ಸ್ಥಾನದಲ್ಲಿ ಇಡಲಾಗುತ್ತದೆ. ಜನರು ಸಂಗೀತ ಸಿದ್ಧಿ ಮಾಡಿಕೊಂಡರೆ ಪ್ರಸಿದ್ಧಿ ಅದಾಗಿಯೇ ಬರುತ್ತದೆ. ಆದರೆ ಇಂದು ಹೆಚ್ಚಿನ ಜನರು ಸಿದ್ಧಿ ಬದಲು ಪ್ರಸಿದ್ಧಿ ಹಿಂದೆ ಹೋಗುತ್ತಾರೆ ಎಂದರು. ಬಳಿಕ ಮಾತನಾಡಿದ ಡಾ.ಎಲ್.ಸುಬ್ರಮಣ್ಯಂ, ಸತತ 40 ವರ್ಷಗಳಿಂದ ಇಂತಹ ಅಹೋರಾತ್ರಿ, ಸಂಗೀತೋತ್ಸವವನ್ನು ಆಯೋಜಿಸುವುದು ಸವಾಲಿನ ಕೆಲಸವಾಗಿದೆ. ಇಂತಹ ಕಾರ್ಯಕ್ರಮಗಳಿಂದಾಗಿಯೇ ನಾಡಿನಲ್ಲಿ ಸಂಗೀತ ಕ್ಷೇತ್ರ, ಬೆಳೆಯುತ್ತಿದೆ ಎಂದರು.

# ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ, ಡಿಕೆ ಶಿವಕುಮಾರ್ ಉಪಮುಖ್ಯಮಂತ್ರಿ ಮುಂದುವರಿಕೆ



**ವಿಜಯಪುರ:** ಪಕ್ಷದ ಹೈಕಮಾಂಡ್ ತಿಳಿಸುವವರೆಗೂ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಪಕ್ಷದ ಅಧ್ಯಕ್ಷರಾಗಿ ಡಿ.ಕೆ. ಶಿವಕುಮಾರ್ ರವರು ಮುಂದುವರೆಯಲಿದ್ದು, ನಮ್ಮ ಕಾಂಗ್ರೆಸ್ ಪಕ್ಷ ಹೈಕಮಾಂಡ್ ನಿರ್ಧಾರದ ಮೇಲೆ ನಡೆಯುವ ಪಕ್ಷವಾಗಿದ್ದು, ಹೈಕಮಾಂಡ್ ತಿಳಿಸುವವರೆಗೂ ಯಾವುದೇ ಬದಲಾವಣೆ ಇಲ್ಲವೆಂದು, ವಿನಾಕಾರಣ ಪಕ್ಷದ ಮುಖಂಡರುಗಳು ಪತ್ರಿಕ ಹೇಳಿಕೆಗಳನ್ನು ನೀಡುವ ಮೂಲಕ ಪಕ್ಷದ ಗೌರವ ಕಡಿಮೆ ಮಾಡಬಾರದೆಂದು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವರಾದ ಕೆ.ಎಚ್. ಮುನಿಯಪ್ಪ ತಿಳಿಸಿದರು.

ಹೋಬಳಿಯ ವೆಂಕಟಗಿರಿ ಕೋಟೆ, ಬಿಜ್ಜವಾರ, ಹಾರೋಹಳ್ಳಿ, ಕೋರಮಂಗಲ, ಮಂಡಿಬೆಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೈ ಮಾಸ್ಕ್ ದೀಪಗಳು, ಚರಂಡಿಗಳು, ಕಾಂಕ್ರೀಟ್ ರಸ್ತೆಗಳು ಮುಂತಾದ 3.6 ಕೋಟಿಯ 34 ಕಾಮಗಾರಿ ಕೆಲಸಗಳಿಗೆ ಚಾಲನೆ ನೀಡಿ ಹಳೆಯೂರಿನಲ್ಲಿ ಮಾತನಾಡುತ್ತಿದ್ದರು.

ಸಮತೋಲಿತ ಉತ್ತಮವಾದ ಬಜೆಟ್ ಅನ್ನು ಸಿದ್ದರಾಮಯ್ಯರವರು ಮಂಡಿಸಿದ್ದು, ರೈತರು ಹಾಗೂ ಬಡವರ ಪರವಾಗಿ ಬಜೆಟ್ ಇದಾಗಿದ್ದು, 16 ಬಾರಿ ಬಜೆಟ್ ಮಂಡಿಸಿರುವ ಸಿದ್ದರಾಮಯ್ಯರವರಿಗೆ ಅಪಾರ ಅನುಭವ ಇದ್ದು, ಬಜೆಟ್ ನ ಎಲ್ಲಾ ಕೆಲಸಗಳಿಗೂ ಹಣವನ್ನು ಒದಗಿಸುವ ಶಕ್ತಿ ಇದೆ ಎಂದು ತಿಳಿಸಿದರು.

ಈ ಹಿಂದಿನ ಸರ್ಕಾರ ಲೆಕ್ಕಾಚಾರ ಇಲ್ಲದೆ ಹಲವಾರು ಕಾಮಗಾರಿ ಕೆಲಸಗಳನ್ನು ಘೋಷಿಸಿದ್ದು, ಅವುಗಳಿಗೂ ಸಹ ಹಣದ ಹೊಂದಾವಣಿಕೆ ಮಾಡಬೇಕಾಗಿರುವುದರಿಂದ ಸ್ವಲ್ಪ ಸಮಸ್ಯೆಯಾಗಿದ್ದು, ಅದನ್ನು ಪರಿಹರಿಸಿಕೊಂಡು ಜನತೆಗೆ ಉತ್ತಮ ಸರಕಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಎಲ್ಲೇ ನೀರಿನ ಅಭಾವ ಕಂಡುಬಂದರೆ 24 ಗಂಟೆಗಳ ಒಳಗಾಗಿ ಟ್ಯಾಂಕರ್ ಮೂಲಕವಾದರೂ ಸರಿಯೇ ಕುಡಿಯುವ ನೀರನ್ನು ಪೂರೈಸಲು ತಿಳಿಸಲಾಗಿದ್ದು, ಜಿಲ್ಲಾಧಿಕಾರಿಗಳ ಮುಖ್ಯ ಖಾತೆಯಲ್ಲಿ ಇದಕ್ಕೆ ಅವಶ್ಯಕವಾದ ಹಣ ಇರುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಯದರ್ಶಿ ಮಂಜುನಾಥ್, ಸದಸ್ಯರಾದ ಚಿನ್ನಪ್ಪ, ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಾಮಚಂದ್ರಪ್ಪ, ಹಾರೋಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಚಂದ್ರಪ್ಪ, ರಘು, ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಅಮರನಾಥ್, ಮಾಜಿ ಸದಸ್ಯ ಸಜ್ಜದ್, ಸದಸ್ಯರಾದ ಮಾರಪ್ಪ, ಕೋರಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜುನಾಥ್, ಸದಸ್ಯರಾದ ದೇವರಾಜ್, ಮಂಜುಳಾ ಅಂಬರೀಶ್, ಮಾಜಿ ಅಧ್ಯಕ್ಷ ಮುನಿ ಬೈರಪ್ಪ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾದ ಅನಂತಕುಮಾರಿ ಚಿನ್ನಪ್ಪ, ಬಿ.ರಾಜಣ್ಣ, ತಾಲೂಕು ಪಂಚಾಯಿತಿ ಇ.ಒ. ಶ್ರೀನಾಥ್ ಗೌಡ, ಜಿಲ್ಲಾ ಪಂಚಾಯಿತಿ ಇಂಜಿನಿಯರುಗಳಾದ ಸುನೀಲ್, ಮೋಹನ್, ತಹಸೀಲ್ದಾರ್, ಬಾಲಕೃಷ್ಣ, ಮಹೇಶ್, ಚಿಕ್ಕನಹಳ್ಳಿ ವೆಂಕಟೇಶ್, ಪಾಪರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.

# ಜೀವಕ್ಕೆ ಉಸಿರು ನೀಡುವ ಶಕ್ತಿ ಇರುವುದೇ ಹೆಣ್ಣಿಗೆ




**ವಿಜಯಪುರ:** ಮಹಿಳೆಯರು ಒಂದೇ ಕ್ಷೇತ್ರಕ್ಕೆ ಮೀಸಲಿರದೆ ಇಂದು ಪ್ರತಿಯೊಂದು ಕ್ಷೇತ್ರದಲ್ಲಿಯೂ ತಮ್ಮದೇ ಆದ ಛಾಪನ್ನು ಮೂಡಿಸಿದ್ದಾರೆ ಎಂದು ಶ್ರೀ ಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಪ್ರಾಂಶುಪಾಲ ಎಸ್.ಎಸ್ ಪ್ರದೀಪ ತಿಳಿಸಿದರು.

ಪಟ್ಟಣದ ಶ್ರೀ ಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಆವರಣದಲ್ಲಿ ರಾಷ್ಟ್ರೀಯ ಯುವ ಯೋಜನೆ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಲ ವತಿಯಿಂದ ಆಯೋಜಿಸಲಾದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಯುವತಿಯರಿಗೆ ಕ್ರೀಡಾ ಸಲಕರಣೆಗಳನ್ನು ಮತ್ತು ವಿವಿಧ ರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳ ಪುಸ್ತಕಗಳನ್ನು ಯುವ ಯೋಜನೆ ವತಿಯಿಂದ ವಿತರಿಸಿ ಮಾತನಾಡಿ ಪ್ರತಿಯೊಂದು ಘಟ್ಟದಲ್ಲೂ ಮಹಿಳೆ ತಾನು ಅಬಲೆಯಲ್ಲ, ಸಬಲೆ ಎಂಬುದನ್ನು ಸಾಧಿಸಿ ತೋರಿಸಿದ್ದಾಳೆ. ಎಂತಹ ಕೆಲಸವನ್ನೆ? ಆಗಲಿ ಸಮರ್ಪಕವಾಗಿ ನಿಭಾಯಿಸುವ ಶಕ್ತಿ ಆಕೆಯದು ಆದ್ದರಿಂದ ಪ್ರತಿಯೊಂದು ಘಟ್ಟದಲ್ಲೂ ಮಹಿಳೆ ತಾನು ಅಬಲೆಯಲ್ಲ ಸಬಲೆ ಎಂಬುದನ್ನು ಸಾಧಿಸಿ ತೋರಿಸಿದ್ದಾಳೆ ಎಂದು ತಿಳಿಸಿದರು.

ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸಂಯೋಜಕ ಡಾ.ವಿ. ಪ್ರಶಾಂತ ಮಾತನಾಡಿ ಈ ದಿನ ನಮ್ಮ ಈ ಸಮಾಜದಲ್ಲಿ ಮಹಿಳೆಯರ ಶಕ್ತಿ ಮತ್ತು ಧೈರ್ಯ ಸಾಹಸಗಳನ್ನು ನೆನೆಯುವ ದಿನವಾಗಿದೆ. ನಮ್ಮ ರಾಜ್ಯದ ವೀರ ವನಿತೆ ಓಬವ್ವ, ಕಿತ್ತೂರು ರಾಣಿ ಚೆನ್ನಮ್ಮ, ವಚನ ಸಾಹಿತ್ಯ ಕ್ಷೇತ್ರಕ್ಕೆ ಅದ್ಭುತ ಕೊಡುಗೆ ನೀಡಿದ ಅಕ್ಕಮಹಾದೇವಿ, ಪರಿಸರ ಮಾತೆ ಸಾಲುಮರದ ತಿಮ್ಮಕ್ಕ, ಜನಪದ ಗೀತೆಗಳ ಜೋಗತಿ ಮಂಜಮ್ಮ, ಕ್ರೀಡಾ ಸಾಧಕಿ ಅಶ್ವಿನಿ ನಾಚಪ್ಪ, ಹಿರಿಯ ಸಾಹಿತಿ ಕಮಲಾ ಹಂಪನಾ, ಸಾಮಾಜಿಕ ಕಾರ್ಯಕರ್ತ ಇಂದಿರಾ ಕೃಷ್ಣಪ್ಪ, ಸಮಾಜ ಸೇವಕಿ ಡಾ. ಸುಶೀಲಮ್ಮ, ಚಲನಚಿತ್ರರಂಗದ ಲೀಲಾವತಿ, ಮೊದಲಾದವರು ಈ ನಮ್ಮ ರಾಜ್ಯದಲ್ಲಿ ಕಲೆ ಸಾಹಿತ್ಯ ಸಂಸ್ಕೃತಿ ಕ್ರೀಡೆಗಳಿಗೆ ಮಾದರಿಯಾದ ಆದರ್ಶ ಮಹಿಳೆಯರು ಎಂದು ತಿಳಿಸಿದರು.

ಇದೇ ಕಾರ್ಯಕ್ರಮದ ಅಂಗವಾಗಿ ಗ್ರಾಮೀಣ ಯುವತಿಯರಿಗೆ ಪ್ರೊ.ಬಿ ಕೃಷ್ಣಪ್ಪ ಟ್ರಸ್ಟ್ ವತಿಯಿಂದ ಪ್ರಕಟಿಸಿದ ವಿವಿಧ ಪುಸ್ತಕಗಳು, ಭಾರತ ಸರ್ಕಾರದ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಪ್ರಕಾಶನ ವಿಭಾಗದ ಎಂ.ಎಸ್ ರಜನಿಕಾಂತ್, ಅನುವಾದಿತ ನಾಗರೀಕ ಸೇವಾ ಪರೀಕ್ಷೆಗಳಿಗಾಗಿ ಪ್ರಾಚೀನ ಭಾರತ ಆಕಾರ ಪುಸ್ತಕಗಳು ಹಾಗೂ ಕ್ರೀಡಾ ಸಲಕರಣೆಗಳನ್ನು ನೀಡಲಾಯಿತು. ಕಾರ್ಯಕ್ರಮದ ಉಪಸ್ಥಿಯಲ್ಲಿ ಶ್ರೀ ಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಉಪನ್ಯಾಸಕರಾದ ಪ್ರವರ್ಧನ್, ಅನಿಲ್, ನಾಗೇಶ್, ಹರೀಶ್ ಹಾಗೂ ವಿವಿಧ ತರಗತಿಗಳ ವಿದ್ಯಾರ್ಥಿನಿಯರು ಹಾಜರಿದ್ದರು.

# ಕಣ್ಣಿನ ತಪಾಸಣಾ ಶಿಬಿರ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲದಲ್ಲಿರುವ ಹೆಚ್. ಕೃಷ್ಣಸ್ವಾಮಿ ಮೆಮೋರಿಯಲ್ ಚಾರಿಟೇಬಲ್ ಟ್ರಸ್ಟ್, ವಿಶ್ವಚೇತನ ಸಮೂಹ ವಿದ್ಯಾ ಸಂಸ್ಥೆಗಳು, ರೋಟರಿ ಮಿಡ್ ಟೌನ್ ಹಾಗೂ ಕೊಯಮತ್ತೂರು ಅರವಿಂದ ಕಣ್ಣಿನ ಆಸ್ಪತ್ರೆ ರವರ ಸಹಯೋಗದೊಂದ ಸತತ 32 ನೇ ತಿಂಗಳಾ ಉಚಿತ ನೇತ್ರ, ನಿರಂತರ ಕಣ್ಣಿನ ತಪಾಸಣಾ ಶಿಬಿರವು ಭಾನುವಾರದಂದು ವಿಶ್ವಚೇತನ ಸಮೂಹ ವಿದ್ಯಾಸಂಸ್ಥೆ ಆವರಣ ಕೊಳ್ಳೇಗಾಲದಲ್ಲಿ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಯವರಾದ ಪ್ರೇಮಲತಾ ಕೃಷ್ಣಸ್ವಾಮಿರವರು, ಅರವಿಂದ ಕಣ್ಣಿನ ಆಸ್ಪತ್ರೆಯ ಡಾ. ಸುಜಯ್ ಜಾರ್ಜ್ ಮತ್ತು ಗೋರಂಗ್ ಕುಮಾರ್ ಹಾಗೂ ಅರವಿಂದ ಕಣ್ಣಿನ ಆಸ್ಪತ್ರೆಯ ಸಂಯೋಜಕರಾದ ವಿಜಯ್ ಕುಮಾರ್ ಸಂಸ್ಥೆಯ ಸಂಯೋಜಕರಾದ ರಾಜೇಶ್ ರವರು, ಸಂಸ್ಥೆಯ ಸಿಬ್ಬಂದಿಗಳಾದ ಕುಮಾರಿ ಚೈತ್ರಾ ಹಾಗೂ ಮೋಹನ್ ಹಾಜರಿದ್ದರು.

ಈ ಶಿಬಿರದಲ್ಲಿ 72 ರೋಗಿಗಳನ್ನು ತಪಾಷಣೆಗೆ ಒಳಪಟ್ಟಿದ್ದು ಅದರಲ್ಲಿ 24 ಜನರನ್ನು ಕಣ್ಣಿನ ಶಸ್ತ್ರ ಚಿಕಿತ್ಸೆಗಾಗಿ ಅರವಿಂದ ಕಣ್ಣಿನ ಆಸ್ಪತ್ರೆ ಕೊಯಮತೂರಿಗೆ ಕಳುಹಿಸಿಕೊಡಲಾಯಿತು.



## ಕರಡು/ತಾತ್ಕಾಲಿಕ ಪಟ್ಟಿ ಪ್ರಕಟಣೆ

**ಮೈಸೂರು:** ಪ್ರವಾಸೋದ್ಯಮ ಇಲಾಖೆಯ ವತಿಯಿಂದ 2024–25ನೇ ಸಾಲಿನಲ್ಲಿ ಎಸ್.ಸಿ..ಪಿ/ ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಣ್ಣ ಉದ್ಯಮದಾರರನ್ನು ಉತ್ತೇಜಿಸಲು Enterprenuershipವಿಷಯದ ಬಗ್ಗೆ ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ, ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು ಸಹಾಯಧನದ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಆಯ್ಕೆಯಾದ ಫಲಾನುಭವಿಗಳ ಕರಡು/ತಾತ್ಕಾಲಿಕ ಪಟ್ಟಿಯನ್ನು ವೆಬ್ ಸೈಟ್ https://mysurutourism.in/notification/ ನಲ್ಲಿ ಪ್ರಕಟಿಸಲಾಗಿದ್ದು, ಈ ಸಂಬಂಧ ಏನಾದರೂ ಆಕ್ಷೇಪಣೆ ಇದ್ದಲ್ಲಿ ಮಾರ್ಚ್ 5 ರಿಂದ 14 ರ ಒಳಗಾಗಿ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಲಿಖಿತವಾಗಿ ಆಕ್ಷೇಪಣೆಯನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಚ್ಚುವರಿ ಪಡಿತರ ಹಂಚಿಕೆ

**ಮೈಸೂರು:** ಆಹಾರ, ನಾಗರಿಕ ಸರಬಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ಫೆಬ್ರವರಿ 2025 ರ ಮಾಹೆಯಿಂದ ಜಾರಿಗೆ ಬರುವಂತೆ ನೇರ ನಗದು ವರ್ಗಾವಣೆ (ಡಿಬಿಟಿ) ಬದಲಾಗಿ ಅನ್ನಭಾಗ್ಯ ಯೋಜನೆಯಡಿ ಸರ್ಕಾರದ ಆದೇಶದ ಮಾರ್ಗಸೂಚಿಯಂತೆ ಏಕ– ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕ್ಕಿಂತ ಹೆಚ್ಚು ಸದಸ್ಯರುಳ್ಳ ಎಎವೈ ಪಡಿತರ ಚೀಟಿಗೆ ಪ್ರತಿ ಫಲಾನುಭವಿಗೆ ಮತ್ತು ಪಿಹೆಚ್‌ಹೆಚ್ ಪಡಿತರ ಚೀಟಿಯ ಪ್ರತಿ ಫಲಾನುಭವಿಗಳಿಗೆ ಪ್ರತಿ ಮಾಹಿ ಹೆಚ್ಚುವರಿಯಾಗಿ 5 ಕೆಜಿ ಅಕ್ಕಿಯನ್ನು ಹಂಚಿಕೆ ನೀಡಲಾಗಿರುತ್ತದೆ. ಫೆಬ್ರವರಿ 2025ರ ಮಾಹೆ ಪಡಿತರ ವಿತರಣಾ ಕಾರ್ಯ ಮುಕ್ತಾಯವಾಗಿರುವುದರಿಂದ ಫೆಬ್ರವರಿ ಮತ್ತು ಮಾರ್ಚ್ 2025ರ ಮಾಹಿತಿಗಳಿಗೆ ಹೆಚ್ಚುವರಿ ಐದು ಕೆಜಿ ಅಕ್ಕಿಯನ್ನು ಕೆಳಕಂಡ ಪ್ರಮಾಣದಲ್ಲಿ ಹಂಚಿಕೆ ನೀಡಲಾಗಿದೆ. 2025ರ ಮಾರ್ಚ್ ಮಾಹೆಯಲ್ಲಿ ಅನ್ನಭಾಗ್ಯ ಯೋಜನೆಯ ಅಡಿಯಲ್ಲಿ ಉಚಿತವಾಗಿ ವಿತರಿಬೇಕಾದ ಪಡಿತರ ಪ್ರಮಾಣ (ಕೆ.ಜಿ ಗಳಲ್ಲಿ) ಅಂತ್ಯೋದಯ (ಎಎವೈ) ಒಂದು, ಎರಡು, ಮೂರು ಸದಸ್ಯರಿಗೆ 35 ಕೆ.ಜಿ (ಪ್ರತಿ ಕಾರ್ಡಿಗೆ), ನಾಲ್ಕು ಸದಸ್ಯರಿಗೆ 45 ಕೆ.ಜಿ (ಪ್ರತಿ ಕಾರ್ಡಿಗೆ), ಐದು ಸದಸ್ಯರಿಗೆ 65 ಕೆ.ಜಿ (ಪ್ರತಿ ಕಾರ್ಡಿಗೆ), ಆರು ಸದಸ್ಯರಿಗೆ 85 ಕೆ.ಜಿ (ಪ್ರತಿ ಕಾರ್ಡಿಗೆ), ಏಳು ಸದಸ್ಯರಿಗೆ 105 ಕೆ.ಜಿ (ಪ್ರತಿ ಕಾರ್ಡಿಗೆ) ಉಚಿತವಾಗಿ ನೀಡಲಾಗುವುದು. ಪಿ ಹೆಚ್ ಹೆಚ್ (ಬಿಪಿಎಲ್) ಪ್ರತಿ ಸದಸ್ಯರಿಗೆ 15 ಕೆ.ಜಿ (ಪ್ರತಿ ಕಾರ್ಡಿಗೆ) ಉಚಿತವಾಗಿ ನೀಡಲಾಗುವುದು.

## ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ ರಾಗಿ ಖರೀದಿ ಕೇಂದ್ರಗಳ ಸ್ಥಾಪನೆ

**ಮೈಸೂರು:** ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ 2024–25 ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಭತ್ತ ಮತ್ತು ರಾಗಿಯನ್ನು ಮಾರಾಟ ಮಾಡಲು ಜಿಲ್ಲೆಯಲ್ಲಿ ನೊಂದಯಿಸಿಕೊಂಡಿರುವ ರೈತರಿಂದ ಜಿಲ್ಲೆಯಲ್ಲಿ ತೆರೆಯಲಾಗಿರುವ ಖರೀದಿ ಕೇಂದ್ರಗಳಲ್ಲಿ ಭತ್ತ ಮತ್ತು ರಾಗಿ ಖರೀದಿ ಪ್ರಕ್ರಿಯೆ ಪ್ರಾರಂಭಗೊಂಡಿದ್ದು, ನೋಂದಾಯಿತ ರೈತರಿಂದ ಪ್ರತಿ ಕ್ವಿಂಟಾಲ್ ಭತ್ತಕ್ಕೆ ರೂ.2300/– ರಂತೆ ಹಾಗೂ ಪ್ರತಿ ಕ್ವಿಂಟಾಲ್ ರಾಗಿಗೆ ರೂ. 4290/– ದರದಂತೆ ಆಹಾರ ಧಾನ್ಯ ಖರೀದಿಸಲಾಗುತ್ತಿದೆ. ಆದ್ದರಿಂದ ನೋಂದಾಯಿತ ರೈತರು ತಮ್ಮ ತಮ್ಮ ತಾಲ್ಲೂಕಿನಲ್ಲಿ ತೆರೆಯಲಾಗಿರುವ ಬೆಂಬಲ ಬೆಲೆ ಯೋಜನೆಯ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಈ ಜಿಲ್ಲೆಯ ಖರೀದಿ ಏಜೆನ್ಸಿಯವರು ನಿಗಧಿಪಡಿಸಿದ ದಿನಾಂಕದಂದು ಎಪ್. ಎ. ಕ್ಯೂ ಗುಣಮಟ್ಟದ ಭತ್ತ ಮತ್ತು ರಾಗಿಯನ್ನು ಖರೀದಿ ಕೇಂದ್ರಕ್ಕೆ ನೀಡುವಂತೆ ತಿಳಿಸಿದೆ. ಮೈಸೂರು ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ ಬಂಡಿಪಾಳ್ಯ, ನಂಜನಗೂಡು ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ, ಬಿಳಿಗೆರೆ ಖರೀದಿ ಕೇಂದ್ರ, ಟಿ.ನರಸೀಪುರ ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ, ಟಿ ನರಸೀಪುರ, ಎ.ಪಿ.ಎಂ.ಸಿ ಆವರಣ, ಬನ್ನೂರು, ಹುಣಸೂರು ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ, ಹುಣಸೂರು, ಎ.ಪಿ.ಎಂ.ಸಿ ಆವರಣ, ರತ್ನಪುರಿ, ಕೆ.ಆರ್ .ನಗರ ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ, ಕೆ.ಆರ್.ನಗರ, ಸಾಲಿಗ್ರಾಮ ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ ಸಾಲಿಗ್ರಾಮ, ಪ್ರವಾಸಿ ಮಂದಿರ (ಶ್ರೀರಾಮ ದೇವಸ್ಥಾನದ ಹತ್ತಿರ) ಚುಂಚನಕಟ್ಟೆ, ಸರಗೂರು ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ ಸರಗೂರು, ಪಿರಿಯಾಪಟ್ಟಣ ತಾಲ್ಲೂಕಿನ ಎ.ಪಿ.ಎಂ.ಸಿ ಆವರಣ ಪಿರಿಯಾಪಟ್ಟಣ, ಎ.ಪಿ.ಎಂ.ಸಿ ಆವರಣ, ಬೆಟ್ಟದಪುರ, ರೈತ ಸಂಪರ್ಕ ಕೇಂದ್ರ, ಹಾರನಹಳ್ಳಿ, ರೈತ ಸಂಪರ್ಕ ಕೇಂದ್ರ, ರಾವಂದೂರು ಇಲ್ಲಿ ನೀಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ, ಅಧ್ಯಕ್ಷರಾದ ಜಿ ಲಕ್ಷ್ಮಿಕಾಂತ ರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಅರ್ಕೇಶ್ವರಸ್ವಾಮಿರಥೋತ್ಸವ

**ಮಂಡ್ಯ:** ನಗರದಗುತ್ತಲು ಶ್ರೀ ಅರ್ಕೇಶ್ವರಸ್ವಾಮಿದೇವಾಲಯದ 2024–25 ನೇ ಸಾಲಿನ ಬ್ರಹ್ಮರಥೋತ್ಸವವನ್ನು ಮಾರ್ಚ್ 14 ರಂದು ವಿಜೃಂಭಣೆಯಿಂದಆಚರಿಸಲಾಗುತ್ತಿದ್ದು ಬೆಳಗ್ಗೆ 9:41 ರಿಂದ 10:29 ರ ಸುಮಾರಿಗೆರಥೋತ್ಸವ ಪ್ರಾರಂಭವಾಗಲಿದೆ. ಶ್ರೀ ಶೈವಾಗಮೋಕ್ತ ವಿಶೇಷ ಪೂಜಾ ಉತ್ಸವಾದಿಗಳ ಕಾರ್ಯಮಗಳು ಮಾರ್ಚ್ 8 ರಿಂದ ಪ್ರಾರಂಭವಾಗಿ ಮಾರ್ಚ್ 17 ರಂದು ಮುಕ್ತಾಯವಾಗಲಿದ್ದು, ಪ್ರತಿ ದಿನವು ಸಾಂಪ್ರಾದಾಯದಂತೆ ಪೂಜಾಕೈಂಕರ್ಯಗಳನ್ನು ನೆರವೇರಿಸಲಾಗುವುದು.

# ಲಿಂಗ ತಾರತಮ್ಯ ನಿವಾರಿಸುವ ಪ್ರಯತ್ನಗಳಾಗಲಿ



**ಚಿತ್ರದುರ್ಗ:** ಮಹಿಳಾ ದಿನಾಚರಣೆಗಳಲ್ಲಿ ಬರೀ ಮಹಿಳೆಯರೇ ಭಾಗವಹಿಸಬೇಕೆಂಬುದಿಲ್ಲ, ಅದರಲ್ಲಿ ಪುರುಷರು ಸಹ ಭಾಗವಹಿಸಿ, ಮಹಿಳೆಯರ ಸಮಸ್ಯೆಗಳನ್ನ ಅರಿತು ನಿವಾರಿಸುವ ನಿಟ್ಟಿನಲ್ಲಿ ಸಹಾಯ ಹಸ್ತ ಚಾಚಬೇಕು. ಸರ್ಕಾರದ ಹಲವಾರು ಯೋಜನೆಗಳು ಮಹಿಳೆಯರ ಮತ್ತು ಹೆಣ್ಣು ಮಕ್ಕಳ ರಕ್ಷಣೆಗೆ ಬಲಿಷ್ಠವಾಗಿವೆ, ಅವುಗಳನ್ನ ತೀರ್ವಗತಿಯಲ್ಲಿ ಅನುಷ್ಠಾನಗೊಳಿಸಬೇಕು. ಈ ಕ್ರಿಯೆಯನ್ನು ವೇಗಗೊಳಿಸಿ ಎಂಬುದೇ ಈ ವರ್ಷದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಘೋಷಣೆಯಾಗಿದೆ ಎಂದು ಚಿತ್ರದುರ್ಗ ಜಿಲ್ಲಾ ಪಂಚಾಯತ್ ನ ಮುಖ್ಯ ಯೋಜನಾ ಅಧಿಕಾರಿಗಳಾದ ಶ್ರೀಮತಿ ಸಿ. ಎಸ್. ಗಾಯತ್ರಿಯವರು ಮಾತನಾಡಿದರು.

ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನ ಚರಕ ತಿರುಗಿಸುವುದರ ಮುಖಾಂತರ ಉದ್ಘಾಟಿಸಿ ಮಾತನಾಡುತ್ತಿದ್ದರು.

ಮಹಿಳೆಯರು ತಮ್ಮ ಬಗ್ಗೆ ಇರುವ ಕೀಳರಿಮೆ ನಿವಾರಿಸಿಕೊಂಡು, ಪುರುಷರ ಜೊತೆ ಸಮನಾಗಿ, ಸ್ಥಾನಗಳನ್ನ ಅಲಂಕರಿಸುವ ಮತ್ತು ಅಧಿಕಾರವನ್ನು ಚಲಾಯಿಸುವ ಪ್ರಯತ್ನಗಳನ್ನ ಮಾಡಬೇಕು.

ಮಹಿಳೆಯರ ಶೋಷಣೆ ಆಗುತ್ತಿರುವ ಎಲ್ಲಾ ರಂಗಗಳನ್ನ ಶುದ್ಧೀಕರಿಸಬೇಕು, ಅವರನ್ನು ರಾಜಕೀಯವಾಗಿ ಪ್ರಭುದ್ಧರನ್ನಾಗಿ ಮಾಡಬೇಕು, ಬಡತನ, ಶೋಷಣೆ ದೌರ್ಜನ್ಯಗಳಿಂದ ಮುಕ್ತಗೊಳಿಸಬೇಕು, ಉತ್ತಮ ಶಿಕ್ಷಣ ನೀಡಿ ಅವರಿಗೆ ಸ್ವಂತ ಕಾಲ ಮೇಲೆ ನಿಲ್ಲುವಂಥ, ಆರ್ಥಿಕ ಸಬಲೀಕರಣದ ನಿಟ್ಟಿನಲ್ಲಿ ಪ್ರಯತ್ನಗಳಾಗಬೇಕು ಎಂದರು. ಅವಿದ್ಯಾವಂತರು ಮತ್ತು ವಿದ್ಯಾವಂತರಲ್ಲೂ ಸಹ ಇನ್ನೂ ಹೆಣ್ಣು ಭ್ರೂಣ ಹತ್ಯೆ ನಡೆದೇ ಇದೆ, ಅದರಲ್ಲಿ ಕರ್ನಾಟಕ ಮತ್ತು ಚಿತ್ರದುರ್ಗ ಸ್ವಲ್ಪಮಟ್ಟಿಗೆ ಹೆಣ್ಣು ಮಕ್ಕಳ ಸಂಖ್ಯೆ ಹೆಚ್ಚಿಸಿಕೊಳ್ಳುತ್ತಾ ಬರುತ್ತಿದೆ, ಇದು ಇನ್ನೂ ಹೆಚ್ಚುತ್ತಾ ಹೋಗಿ, ಹೆಣ್ಣು ಗಂಡಿನ ಸಮಾನತೆಯ ಗುರಿಮುಟ್ಟುವವರೆಗೂ ನಾವೆಲ್ಲರೂ ಪ್ರಯತ್ನಿಸಬೇಕು ಎಂದರು. ಪುರುಷ ಪ್ರಧಾನ ಸಮಾಜದಲ್ಲಿ ಹೆಣ್ಣು ಮಕ್ಕಳು ತಮ್ಮ ಹಕ್ಕುಗಳನ್ನು ಚಲಾಯಿಸುವುದನ್ನು ಕಲಿತು ರಾಜಕೀಯದಲ್ಲೂ ಸಹ ತಮಗೆ ನೀಡಿದ ಅಧಿಕಾರವನ್ನು ಸ್ವತಃ ಯೋಚಿಸಿ ಕಾರ್ಯರೂಪಕ್ಕೆ ತರಬಹುದು ಎಂದರು.

ಪ್ರಾಂಶುಪಾಲರಾದ ಶ್ರೀ ಸಿದ್ದರಾಮ ಚನಗೊಂಡರವರು ಅಧ್ಯಕ್ಷೀಯ ಭಾಷಣ ಮಾಡುತ್ತಾ ಹೆಣ್ಣು ಮಕ್ಕಳ ಅಭಿವೃದ್ಧಿಯಲ್ಲಿ ಕುಟುಂಬದ ಎಲ್ಲಾ ಸದಸ್ಯರ ಪಾತ್ರವಿದೆ, ಅಣ್ಣತಮ್ಮಂದಿರ, ತಂದೆ ತಾಯಿಯರ, ಸಹಕಾರದಿಂದ ಅವರನ್ನ ಶೈಕ್ಷಣಿಕವಾಗಿ ಆರ್ಥಿಕವಾಗಿ, ಮಾನಸಿಕವಾಗಿ ಸಬಲೀಕರಿಸಬಹುದು, ಹಾಗಾಗಿ ಕುಟುಂಬದ ಸದಸ್ಯರು ಮತ್ತು ಸಮಾಜದ ಪ್ರಮುಖರು ಮಹಿಳಾ ಸಬಲೀಕರಣದ ಬಗ್ಗೆ ಶ್ರಮವಹಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನ ಡಾ. ರಾಜೇಶ್ವರಿ. ಪಿ. ನಿರ್ವಹಿಸಿದರು. ಸಹಾಯಕ ಪ್ರಾಧ್ಯಾಪಕಿ ಶ್ರೀಮತಿ ಫೈರೋಜಾರವರು ಸ್ವಾಗತಿಸಿದರು,

ಮಹಿಳಾ ಸಬಲೀಕರಣ ಕೋಶದ ಸಂಯೋಜಕರಾದ ಶ್ರೀಮತಿ ರಶ್ಮಿ ಟಿ. ಎಸ್. ಪ್ರಾಸ್ತಾವಿಕ ನುಡಿಗಳನ್ನಾಡಿದರು, ಶ್ರೀಮತಿ ಸೀಮಾ ಕೌಸರ್ ರವರು ಅತಿಥಿಗಳ ಪರಿಚಯ ಮಾಡಿಕೊಟ್ಟರು,

ಬಹುಮಾನ ವಿತರಣೆ ಶ್ರೀಮತಿ ಸುಮಾ. ಕೆ. ನೆರವೇರಿಸಿ, ಶ್ರೀಮತಿ ವಿದ್ಯಾ ವೈ. ಎಸ್. ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಶ್ರೀ ಮಂಜಣ್ಣ, ಕೆ. ವಿನೋದ್ ಕುಮಾರ್, ಕೃಷ್ಣಮೂರ್ತಿ, ಲಾಲ್ ಸಿಂಗ್ ನಾಯಕ್, ಸತೀಶ್ ಗೌಡ, ಶ್ರೀಮತಿ ವಿದ್ಯಾ ಕೆ ವಿ, ವಿದ್ಯಾ, ಎಸ್. ರಾಘವೇಂದ್ರ ಮಂಜುನಾಥ್, ಪ್ರಮೋದ್ ನಾಗರಾಜ್ ಎನ್. ವಿ, ಉಪಸ್ಥಿತರಿದ್ದರು.

ಕಾಲೇಜಿನಲ್ಲಿ ಬಿಎಸ್ಸಿ ಕಂಪ್ಯೂಟರ್ ಸೈನ್ಸ್ ಎಲೆಕ್ಟ್ರಾನಿಕ್ಸ್ ವಿಭಾಗದ ಆರನೇ ರ್ಯಾಂಕ್ ಗಳಿಸಿದ ಎಚ್. ಎಸ್. ರಚನ, ಸ್ನಾತಕೋತ್ತರ ವಿಭಾಗದ ಸಸ್ಯಶಾಸ್ತ್ರ ವಿಭಾಗದ ಏಳನೇ ರ್ಯಾಂಕ್ ಗಳಿಸಿದ ಆಯಿಷ ಮುಸ್ಕಾನ್ ಅಹಮದ್ ಪಟೇಲ್, ರಸಾಯನ ಶಾಸ್ತ್ರದಲ್ಲಿ ಐದನೇ ರ್ಯಾಂಕ್ ಗಳಿಸಿದ ನಾಗವೇಣಿ ಜಿ. ಏಳನೇ ರ್ಯಾಂಕ್ ಗಳಿಸಿದ ಸುಶ್ಮಿತಾ. ಡಿ. ವಿದ್ಯಾರ್ಥಿನಿಯರಿಗೆ ಸನ್ಮಾನಿಸಲಾಯಿತು.

# ಶಕ್ತಿ ಮಹಿಳಾ ಸಮಾವೇಶ

**ಮಾಲೂರು:** ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಭಾರತೀಯ ಜೀವ ವಿಮಾ ನಿಗಮ ಬೆಂಗಳೂರು ವಿಭಾಗ 2ರ ವತಿಯಿಂದ ಎಲ್ ಐ ಸಿಯ ಶಕ್ತಿ ಮಹಿಳಾ ಸಮಾವೇಶ ಕಾರ್ಯಕ್ರಮವನ್ನು ಚನ್ನಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಸಮಾವೇಶವನ್ನು ಹಿರಿಯ ವಿಭಾಗಾಧಿಕಾರಿ ಸಿ.ರಾಜಶೇಖರ್ ಹಾಗೂ ಸೀತಾಮಹಾಲಕ್ಷ್ಮೀ ರಾಜಶೇಖರ್ ರವರು ಉದ್ಘಾಟಿಸಿದರು.

ಎಲ್ ಐ ಸಿಯ ಬ್ರ್ಯಾನ್ಡ್ ಹೆಸರು ಪ್ರಪಂಚದಲ್ಲಿ 3ನೇ ಸ್ಥಾನ ಪಡೆದಿದೆ, ಜೀವ ವಿಮಾ ಮಾರ್ಕೆಟ್ ಯಲ್ಲಿ 12ನೇ ಸ್ಥಾನ ಪಡೆದಿದೆ. ಇಂದು ವಿಶ್ವಾದ್ಯಂತ ಮಹಿಳೆಯರು ಎಲ್ಲಾ ರಂಗದಲ್ಲಿ ಹೆಸರು ಮಾಡುತ್ತಿದ್ದು, ಪ್ರತಿಯೊಂದು ಕ್ಷೇತ್ರದಲ್ಲಿಯೂ ಮುಂಚೂಣಿಯಲ್ಲಿ ಇದ್ದಾರೆ ಎಂದು ಎಲ್ ಐ ಸಿ ಹಿರಿಯ ವಿಭಾಗಾಧಿಕಾರಿ ಸಿ.ರಾಜಶೇಖರ್ ರವರು ತಿಳಿಸಿದರು. ಪ್ರಧಾನಮಂತ್ರಿಯವರು ಉದ್ಘಾಟನಾ ಮಾಡಿದಂತಹ ಭೀಮಾಸಖಿ ಯೋಜನೆಯ ವತಿಯಿಂದ ಮಹಿಳಾ ಸಖಿಯರಿಗೆ ಮೊದಲ ವರ್ಷಕ್ಕೆ 7 ಸಾವಿರ, ಎರಡನೇ ವರ್ಷ 6000 ಹಾಗೂ ಮೂರನೇ ವರ್ಷ 5000 ರೂಪಾಯಿಗಳು ಕೊಡ್ತಾರೆ. ಇದರಿಂದ ಹೆಚ್ಚು ಪ್ರಯೋಜನ ಪಡೆದುಕೊಳ್ಳಬೇಕು ಎಂದರು. ಜೊತೆಗೆ ಎಸ್ ಎಸ್ ಎಲ್ ಸಿ ಪಾಸಾಗಿರುವ ಯಾರಾದರೂ ಸರಿ ಮಹಿಳಾ ಸಖಿಯಲ್ಲಿ ಏಜೆನ್ಸಿ ಪಡೆದುಕೊಳ್ಳಬಹುದು ಎಂದರು.

ಈ ಸಮಾವೇಶದಲ್ಲಿ ಎಲ್ ಐ ಸಿ ಯಲ್ಲಿ ಉತ್ತಮ ವ್ಯವಹಾರ ನಡೆಸಿದ ಮಹಿಳಾ ಪ್ರತಿನಿಧಿಗಳನ್ನು ಅವರ ಕುಟುಂಬ ಸಮೇತವಾಗಿ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಮಾಲೂರು ಎಲ್ ಐ ಸಿ ಉಪಗ್ರಹ ಶಾಖೆಯ ಎಲ್ ಐ ಸಿ ಜೀವ ವಿಮಾ ಸಲಹೆಗಾರ ಮಡಿವಾಳ ನಂಜುಂಡಪ್ಪ ಹಾಗೂ ಅವರ ಧರ್ಮಪತ್ನಿಯಾದ ಇಂದ್ರಾಣಿ ನಂಜುಂಡಪ್ಪ ಅವರನ್ನು ಸನ್ಮಾನಿಸಲಾಯಿತು.



## ಮಾ.23ರಂದು ಕಾವ್ಯ ಸಂಸ್ಕೃತಿ ಯಾನ ಕಾರ್ಯಕ್ರಮ

**ವಿಜಯಪುರ:** ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಮಾರ್ಚ್ 23ರ ಭಾನುವಾರದಂದು 10 ಗಂಟೆಗೆ ಕಾವ್ಯ ಸಂಸ್ಕೃತಿ ಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಸಾಹಿತ್ಯ, ಕಾವ್ಯ, ಸಂಸ್ಕೃತಿಯೆಡೆಗೆ ಆಸಕ್ತಿ ಹೊಂದಿರುವವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಬೆಂಗಳೂರಿನ ರಂಗಧಾಮದ ಕಾವ್ಯ ಸಂಸ್ಕೃತಿ ಯಾನ ಪ್ರಧಾನ ಪ್ರಧಾನ ಸಂಚಾಲಕ ಮಲ್ಲಿಕಾರ್ಜುನ ಮಹಾಮನೆರವರು ತಿಳಿಸಿದರು.

ಅವರು ಪಟ್ಟಣದಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಟೌನ್ ಕನ್ನಡ ಸಾಹಿತ್ಯ ಪರಿಷತ್ ಮತ್ತು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತುಗಳ ಸಹಕಾರದೊಂದಿಗೆ ಏರ್ಪಡಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಿದ್ದರು. ಜನರೆಡೆಗೆ ಕಾವ್ಯ ಎಂಬ ಪರಿಕಲ್ಪನೆ ಯೊಂದಿಗೆ ರಾಜ್ಯದಾದ್ಯಂತ ಈ ಕಾರ್ಯಕ್ರಮವನ್ನು ಏರ್ಪಡಿಸಲಾಗುತ್ತಿದ್ದು ಈಗಾಗಲೇ ಕೊಡಗು ಜಿಲ್ಲೆಯಲ್ಲಿ ಯಶಸ್ವಿಯಾಗಿ ನಡೆಸಿದ್ದು ಇದೀಗ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಜಯಪುರದಲ್ಲಿ ನಡೆಸಲು ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದು ತಿಳಿಸಿದರು. ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ಬಿ ಹಡಪದ್ ರವರು ಮಾತನಾಡಿ ಈ ಕಾವ್ಯವಾಚನ ಕಾರ್ಯಕ್ರಮದಲ್ಲಿ ಹೊಸ ಹೊಸ ಕವಿಗಳನ್ನು ಗುರುತಿಸಿ ಅವರ ಪ್ರತಿಭೆಗಳನ್ನು ಹೊರಹೊಮ್ಮಲು ಅವಕಾಶ ಇದ್ದು, ಆಸಕ್ತರು ಟೌನ್ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಜಿಲ್ಲಾ ಮತ್ತು ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳನ್ನು ಸಂಪರ್ಕಿಸಿ ನೋಂದಣಿ ಮಾಡಿಕೊಳ್ಳಬಹುದೆಂದು ತಿಳಿಸಿದರು. ಈ ಸಂದರ್ಭದಲ್ಲಿ ಶ್ರೀನಿವಾಸ ಜೆ ಎನ್ ಅಧ್ಯಕ್ಷರು ವಿಜಯಪುರ ನಗರ ಘಟಕ ಕನ್ನಡ ಸಾಹಿತ್ಯ ಪರಿಷತ್ತು, ವಾಸುದೇವ ಹೊಸಹಳ್ಳಿ ಹಳ್ಳಿ ಜನಪದ, ಕೆ ಎಚ್ ಚಂದ್ರಶೇಖರ ಕಲಾವಿದರು, ಎನ್ ಮುನಿರಾಜು ಸಂಘಟನಾ ಕಾರ್ಯ ದರ್ಶಿ, ಎನ್ ನಾರಾಯಣಸ್ವಾಮಿ ಕಜಾಂಚಿ ಶಸಾಪ, ಮುನಿಪಾಪ ಮುಶಿ, ನಾರಾಯಣಸ್ವಾಮಿ ಎ ಎಂ ಹಾಜರಿದ್ದರು.

## ಉಚಿತ ಬಟ್ಟೆ ಬ್ಯಾಗ್ ವಿತರಣೆ

**ಕೋಲಾರ:** ಮುಂದಿನ ಪೀಳಿಗೆಗಾಗಿ ಪರಿಸರ ಸಂರಕ್ಷಣೆಯೊಂದೇ ಮಾರ್ಗವಾಗಿದ್ದು, ಪ್ಲಾಸ್ಟಿಕ್ ಮುಕ್ತ ಭಾರತ ಮಾಡುವುದೇ ನಮ್ಮ ಸಂಘದ ಉದ್ದೇಶವಾಗಿದ್ದು ಸಾರ್ವಜನಿಕರ ಹಿತಾಸಕ್ತಿಗಾಗಿ ಉಚಿತವಾಗಿ ಬಟ್ಟೆ ಬ್ಯಾಗ್ ವಿತರಣೆ ಮಾಡಲಾಗುತ್ತಿದೆ ಎಂದು ಅಖಿಲ ಕರ್ನಾಟಕ ಪವರ್ ಸ್ಟಾರ್ ಪವನ್ ಕಲ್ಯಾಣ್ ಅಭಿಮಾನಿಗಳ ಸಂಘದ ಮುಳಬಾಗಿಲು ನಗರ ಘಟಕದ ಅಧ್ಯಕ್ಷ ವಿ.ಕೆ. ಕಿರಣ್ ಕುಮಾರ್ ತಿಳಿಸಿದರು. ಮುಳಬಾಗಿಲು ಪಟ್ಟಣದಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ಅಖಿಲ ಕರ್ನಾಟಕ ಪವರ್ ಸ್ಟಾರ್ ಪವನ್ ಕಲ್ಯಾಣ್ ಅಭಿಮಾನಿಗಳ ಸಂಘದ ವತಿಯಿಂದ ಉಚಿತ ಬಟ್ಟೆ ಬ್ಯಾಗ್ ವಿತರಣೆ ಮಾಡಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂಘದ ವೆಂಕಟೇಶ್, ಶಂಕರ್, ಶ್ರೀಕಾಂತ್, ಬಿ.ಹರೀಶ್, ರಾಜಮೌಳಿ, ರಾಜು, ಸಂತೋಷ್, ರಿಜ್ವಾನ್. ಬಾಬಾ ಜಾನ್, ದೊಡ್ಡ ಗುರುಕಿ ಪ್ರಸಾದ್, ರಾಜಣ್ಣ, ಅಭಿ, ರವಿ, ಆನಂದ್, ವಿಕೆ ಮಂಜುನಾಥ, ವಿಜಯ್, ಕೆ.ಕೆ.ಬಸ್ ಸುರೇಶ್ ಬೀದಿ ಬದಿ ವ್ಯಾಪಾರಿಗಳಾದ ಕೆ.ರಘುಪತಿ, ರಫೀವುಲ್ಲಾ, ನಾಗೇಶ್ ಭಾಗವಹಿಸಿದ್ದರು.



## ಶುಲ್ಕಮರುಪಾವತಿ ಸೌಲಭ್ಯಕ್ಕೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2023–24ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿ ಕೋರ್ಸುಗಳ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ಹಾಗೂ ಪ್ರವರ್ಗ–1ರ ಅಲೆಮಾರಿ, ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಶುಲ್ಕಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಮಾರ್ಚ್ 15ರವರೆಗೆ ವಿಸ್ತರಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ವೆಬ್ ಸೈಟ್ https://ssp.postmatrics.karnataka.gov.in, , ಕಾರ್ಯಕ್ರಮಗಳ ವಿವರ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಲು ವೆಬ್‌ಸೈಟ್ https://bcwd.karnataka.gov.in, ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005, ಇ–ಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್ postmatrichelp@karnataka.gov.in, ದೂರವಾಣಿ ಸಂಖ್ಯೆ 1902 ಅನ್ನು ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮ

**ಚಿಕ್ಕಬಳ್ಳಾಪುರ:** ನಗರದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಲಾಗುವುದೆಂದು ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ಹೇಳಿದರು.



ಅವರು ಚಿಕ್ಕಬಳ್ಳಾಪುರ ನಗರದ ಮುಷ್ಟೂರು ರಸ್ತೆ ಹಾಗೂ ದಿನ್ನೆಹೊಸಳ್ಳಿ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ರಸ್ತೆಗಳು ಅಭಿವೃದ್ಧಿಗೆ ದ್ಯೋತಕ ಹೀಗಾಗಿ ನಗಲುಗು ಸರದಂತೆ ಗ್ರಾಮೀಣ ಪ್ರದೇಶದ ರಸ್ತೆಗಳಿಗೆ ಹೆಚ್ಚು ಹೊತ್ತು ಕೊಡಲಾಗುತ್ತಿದೆ ಎಂದರು. ಇನ್ನು ನಗರದ 30ನೇ ವಾರ್ಡಿನ ದಲಿತರ ಮನೆಗಳ ತೇರುವುಗೊಳಿಸುವ ರೈಲ್ವೆ ಇಲಾಖೆ ವಿರುದ್ಧ ಶೀಘ್ರದಲ್ಲಿಯೇ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರಿ ಹೇಳಿದರು. ಮನೆಗಳನ್ನು ರೈಲ್ವೆ ಇಲಾಖೆ ಹಾಗು ಕೇಂದ್ರ ಸರ್ಕಾರ ದಲಿತರ ಮನೆಗಳನ್ನು ತಿರುಗೊಳಿಸಿ ತೇರುವುಗೊಳಿಸಿ ಎರಡು ಟ್ರಾಕ್ ರೈಲ್ವೆ ಹಳಿಗಳನ್ನು ಹಾಕುತ್ತಿರುವುದು ದುರದೃಷ್ಟಕರ ನಾವು ದಲಿತರ ಪರವಾಗಿ ನಿಂತಿದ್ದೇವೆ ಅಲ್ಲಿ ಯಾವುದೇ ಕಾರಣಕ್ಕೂ ಮನೆಗಳನ್ನು ತಿರುಗುಗೊಳಿಸಲು ಬಿಡುವುದಿಲ್ಲ ಎಂದ ಅವರು ಶೀಘ್ರದಲ್ಲಿ ಚಿಕ್ಕಬಳ್ಳಾಪುರದ ಶಿಡ್ಲಘಟ್ಟ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿ ವರೆಗೂ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಇದಕ್ಕಾಗಿ ಎಲ್ಲಾ ರೀತಿಯ ರೂಪುರೇಷೆಗಳನ್ನು ತಯಾರು ಮಾಡಲಾಗುತ್ತಿದೆ ಎಂದರು. ದಲಿತರಿಗೆ ಹೆಚ್ಚಿನ ಆದ್ಯತೆ ಕೊಡಲಾಗುತ್ತಿದ್ದು ಅವರ ಬದುಕು ಹಸನಾಗಲು ಹಾಗೂ ಅವರನ್ನು ಮುಖ್ಯ ವಾಹಿನಿಗೆ ತರಲು ಎಲ್ಲ ರೀತಿಯ ಪ್ರಯತ್ನ ಮಾಡಲಾಗುತ್ತಿದೆ ದಲಿತರಿಗೆ ನಮ್ಮ ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಕಾರಣಕ್ಕೂ ತೊಂದರೆ ಆಗಲು ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ತಾಲೂಕು ಕಾಂಗ್ರೆಸ್ ಅಧ್ಯಕ್ಷ ಕೆ ಎನ್ ಜಯರಾಮ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರೆಸ್ ಸೂರಿ, ನಗರಸಭೆ ನಾಮನಿರ್ದೇಶನ ಸದಸ್ಯರಾದ ವೇಣುಗೋಪಾಲ್, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಹಾಗೂ ವಕೀಲರಾದ ಕೆ.ಎಂ.ಮುನೇಗೌಡ, ಕೆಸಿ. ಕೆಸಿ ರಾಜಕಾಂತ್ ನಗರಸಭಾ ಸದಸ್ಯರಾದ ಕಣಿತಹಳ್ಳಿ ವೆಂಕಟೇಶ್ ಕಾಂಗ್ರೆಸ್ ಪಕ್ಷದ ಇನ್ನಿತರರು ಇದ್ದರು

## ಪ್ರವೇಶಾತಿಗೆ ಅರ್ಜಿ ಆಹ್ವಾನ

**ಮೈಸೂರು:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಶೈಕ್ಷಣಿಕ ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಜಾತಿಯ ಅನ್ಯೆರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಆರ್ಥಿಕವಾಗಿ ಹಿಂದುಳಿದಿರುವ ಪ್ರತಿಭಾವಂತ ಗಂಡು ಮಕ್ಕಳಿಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಶ್ರೀ ರಾಮಕೃಷ್ಣ ವಿದ್ಯಾಶಾಲೆ ಮೈಸೂರು ಇಲ್ಲಿಗೆ 8 ನೇ ತರಗತಿಗಾಗಿ ಪ್ರವೇಶಾತಿಗೆ ಪರೀಕ್ಷೆಯ ಮುಖಾಂತರ ಆಯ್ಕೆ ಮಾಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಕಛೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಸಮಾಜ ಕಲ್ಯಾಣ ಇಲಾಖೆ, ಮೈಸೂರು ಇಲ್ಲಿಗೆ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮಾರ್ಚ್ 25 ರಂದು ಕೊನೆಯ ದಿನಾಂಕವಾಗಿದ್ದು, ಏಪ್ರಿಲ್ 12 ಬೆಳಿಗ್ಗೆ 10 ಗಂಟೆಗೆ ಪ್ರವೇಶ ಪರೀಕ್ಷೆಯನ್ನು ಶ್ರೀ ರಾಮಕೃಷ್ಣ ವಿದ್ಯಾಶಾಲಾ, ಯಾದವಗಿರಿ ಮೈಸೂರು ಇಲ್ಲಿ ನಡೆಸಲಾಗುವುದು. ಅರ್ಜಿಯೊಂದಿಗೆ ಸಲ್ಲಿಸಬೇಕಾಗಿರುವ ದಾಖಲೆಗಳು: ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, 7ನೇ ತರಗತಿ ಅಂಕಪಟ್ಟಿ, ಅಭ್ಯರ್ಥಿಯ ಭಾವಚಿತ್ರ, ಆಧಾರ್ ಕಾರ್ಡ್/ ವಿಳಾಸ ದೃಢೀಕರಣ ಪತ್ರದೊಂದಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್–1 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವದ ಎಲ್ಲಾ ರಂಗಗಳಲ್ಲಿಯೂ ಮಹಿಳೆಯ ಸ್ಥಾನ ಅಗ್ರಗಣ್ಯ

**ಚಿಕ್ಕಬಳ್ಳಾಪುರ:** ವಿಶ್ವದ ಎಲ್ಲಾ ರಂಗಗಳಲ್ಲಿಯೂ ಮಹಿಳೆಯ ಸ್ಥಾನ ಅಗ್ರಗಣ್ಯವಾದದ್ದು ಪುರುಷರಿಗೆ ಸರಿ ಸಮಾನವಾದ ಸ್ಥಾನದಲ್ಲಿ ಮಹಿಳೆ ಪ್ರಸಿದ್ಧಿ ಹೊಂದಿದ್ದಾಳೆ ಇದು ನಮಗೆಲ್ಲ ಹೆಮ್ಮೆ ಎಂದು ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಸ್ಥಾಪಕ ಅಧ್ಯಕ್ಷ ಸಂದೀಪ ಬಿ ರೆಡ್ಡಿ ಹೇಳಿದರು.ಅವರು ಚಿಕ್ಕಬಳ್ಳಾಪುರ ನಗರದ ಕೆ ಟಿ ರಸ್ತೆಯಲ್ಲಿನ ಪ್ರಜಾಪಿತಾ ಬ್ರಹ್ಮಕುಮಾರೀಸ್ ಈಶ್ವರಿಯ ವಿಶ್ವವಿದ್ಯಾಲಯದ ಶಿವ ಪ್ರೇರಣಾ ಭವನದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿಪಾಲ್ಗೊಂಡುಮಾತನಾಡಿದ ಅವರು,ಈ ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆಯರು ಭಾಗವಹಿಸಿರುವುದು ತುಂಬಾ ಸಂತಸದ ವಿಷಯ, ಗ್ರಾಮೀಣ ಪ್ರದೇಶಗಳಲ್ಲಿ ಆಶಾ ಕಾರ್ಯಕರ್ತೆಯರು ಅತ್ಯಂತ ಪರಿಶ್ರಮ ಮತ್ತು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಿ ಗ್ರಾಮೀಣ ಜನತೆಗೆ ಆರೋಗ್ಯದ ಭರವಸೆ ತುಂಬುತ್ತಿದ್ದಾರೆ ಎಂದರು.ಮುಂದಿನ ದಿನಮಾನಗಳಲ್ಲಿ ತಾಲೂಕಿನಾದ್ಯಂತ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಆಶಾ ಕಾರ್ಯಕರ್ತರನ್ನು ಒಂದೆಡೆ ಸೇರಿಸಿ ಇನ್ನಷ್ಟು ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸುವ ಇಂಗಿತ ವ್ಯಕ್ತಪಡಿಸಿದರು.ಇದೆ ಸಂದರ್ಭದಲ್ಲಿ ತಮ್ಮ ಭಗತ್ ಸಿಂಗ್ ಚಾಟೆಬಲ್ ಟ್ರಸ್ಟ್ ವತಿಯಿಂದ ಭಾಗವಹಿಸಿದ್ದ ಎಲ್ಲಾ ಆಶಾ ಕಾರ್ಯಕರ್ತರಿಗೆ ಮತ್ತು ಮಹಿಳೆಯರಿಗೆ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಸೀರೆ ಕುಪ್ಪಸ ನೀಡಿ ಶುಭ ಹಾರೈಸಿದರು. ಪ್ರಜಾಪಿತಾ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯ ಸ್ಥಾನಿಕ ಸಂಚಾಲಕರಾದ ರಾಜಯೋಗಿನಿ ಬಿಕೆ ಲಲಿತ ಅಕ್ಕ ಮಾತನಾಡಿ,ಸೃಷ್ಟಿ ಲಯಗಳಲ್ಲಿ ಮೂಲ ಕಾರಣಕರ್ತರುಗಳಾದ ತ್ರಿಮೂರ್ತಿಯರ ಪತ್ನಿಯರಾಗಿ ಲಕ್ಷೀ ಸರಸ್ವತಿ ಮತ್ತು ಪಾರ್ವತಿಯಾರು ಇಂದಿಗೂ ಬಯಸುತ್ತಿದ್ದಾರೆ ವಿಶ್ವದಲ್ಲಿ ಇಂದಿಗೂ ಪ್ರಧಾನ ಪಾತ್ರ ವಹಿಸುತ್ತಿದ್ದಾರೆ ಅವರು ಸಹ ಮಹಿಳೆಯರೇ ಈ ಭೂಮಿಯನ್ನು ಹೊತ್ತಿರುವವರು ಮಹಿಳೆ ಎಂಬುದನ್ನ ಪುನರುಚ್ಚರಿಸಿದ ಅವರು ದೇಶ ಮಾತೆಯನ್ನು ತಾಯಿ ಭಾರತ ಮಾತೆ ಎಂದು ಕರೆಯುತ್ತೇವೆ ಆಗಾಗಿ ಮಹಿಳೆಯ ಪಾತ್ರ ಅತ್ಯಂತ ಹೆಚ್ಚಿನ ಪ್ರಾಧಾನ್ಯತೆ ಹೊಂದಿದೆ ಎಂದರು.ತಾಲೂಕು ಆರೋಗ್ಯಧಿಕಾರಿ ಡಾ.ಮಂಜುಳಾ ಮಾತನಾಡಿ,ಆಶಾ ಕಾರ್ಯಕರ್ತೆಯರು ತಮ್ಮ ಸತತ ಪರಿಶ್ರಮದಿಂದ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುವುದರ ಮೂಲಕ ಆರೋಗ್ಯ ಇಲಾಖೆಗೆ ಹೆಚ್ಚಿನ ಕೊಡುಗೆ ನೀಡಿದ್ದಾರೆ ಎಂದು ಬಗ್ಗೆ ಕೊಂಡಾಡಿದ ಅವರು ಇಲಾಖೆಯ ಮೇಲಾಧಿಕಾರಿಗಳ ಅಪ್ಪಣೆ ಪಡೆದು ಮುಂದಿನ ದಿನ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಇಲಾಖೆಯಿಂದಲೇ ಆಶಾ ಕಾರ್ಯಕರ್ತೆಯರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಇಂಗಿತ ವ್ಯಕ್ತಪಡಿಸಿದರು. ಇದೆ ವೇಳೆ ನಾಯನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಶೋಭಾ,ನಂದಿ ಪ್ರಾಥಮಿಕ ಆರೋಗ್ಯ ಕೇಂದ್ರದ ಪವಿತ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಆಶಾ ಕಾರ್ಯಕರ್ತೆಯರಾದ ದೀಪ,ಗಂಗಲಕ್ಷ್ಮೀ ಹಾಗೂ ಅಂಗನವಾಡಿ ಕೇಂದ್ರದ ಸಲ್ಮಾ ಅವರ ಕಾರ್ಯವನ್ನ ಕೊಂಡಾಡಿದರಲ್ಲದೆ ವೇದಿಕೆಯ ಗಣ್ಯರು ಗೌರವಿಸಿ ಅವರನ್ನು ಸನ್ಮಾನಿಸಿದರು.ಹಿರಿಯ ಪತ್ರಕರ್ತ ಹಾಗೂ ಸಾಹಿತಿಗಳಾದ ಟಿ ಎಸ್ ನಾಗೇಂದ್ರ ಬಾಬು,ಎಂ. ಕೃಷ್ಣಪ್ಪ,ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯ ಶಿವಮ್ಮ,ನಿವೃತ್ತ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಹೆಚ್ ನಂಜುಂಡಯ್ಯ ನಗರಸಭಾ ಸದಸ್ಯರಾದ ವಿ. ಸುಬ್ರಹ್ಮಣ್ಯಚಾರಿ,ಶಿಕ್ಷಕ ಮಂಜುನಾಥ್,ಬಿ. ಕೆ.ರೇಣುಕಾ, ಬಿ. ಕೆ.ಸಹೋದರಿಯರಾದ ಚಿನ್ನಮ್ಮ,ಸುಜಾತಮ್ಮ, ಸೇರಿದಂತೆ ಇನ್ನಿತರರ ಬಿಕೆ ಸಹೋದರ ಸಹೋದರಿಯರು ಇದ್ದರು.



## ಜಾನಪದ ಸಂಗೀತವು ಸಂಬಂಧಗಳನ್ನು ಗಟ್ಟಿಗೊಳಿಸುತ್ತದೆ: ಗುರುಪ್ರಸಾದ್

**ಕೋಲಾರ:** ಜಾನಪದ ಸಂಗೀತವು ಸಂಬಂಧಗಳನ್ನು ಗಟ್ಟಿಗೊಳಿಸುವ ಸುಂದರ ಮತ್ತು ಅರ್ಥಪೂರ್ಣ ಸಾಹಿತ್ಯವಿರುತ್ತದೆ. ಸೋದರತ್ವ, ಪೋಷಕರ ಮಹತ್ವ, ಗೆಳೆತನ, ಪ್ರೀತಿ ಹೀಗೆ ಹಲವಾರು ಮಜಲುಗಳನ್ನು ನಾವು ಜನಪದದಲ್ಲಿ ಕಾಣಬಹುದು. ಮರೆತ ಹಳೆಯ ನೆನಪುಗಳನ್ನು ಕಣ್ಣಿಗೆ ಕಟ್ಟಿದಂತೆ ಗಾಯಕರು ಹಾಡಿದರು ಎಂದು ದಲಿತ ಕ್ರಿಯಾ ಸಮಿತಿಯ ರಾಜ್ಯ ಸಂಚಾಲಕ ಡಿ.ಎಂ. ಗುರುಪ್ರಸಾದ್ ಅಭಿಪ್ರಾಯಪಟ್ಟರು.

ಕನ್ನಡಮತ್ತುಸಂಸ್ಕೃತಿಇಲಾಖೆನಿರ್ದೇಶನಾಲಯ ಬೆಂಗಳೂರು, ಗಾನಸುಧಾ ಸಾಂಸ್ಕೃತಿಕ ಕಲಾ ಸಂಘ ಜಯಮಂಗಲ ಇವರ ಸಹಯೋಗದಲ್ಲಿ ವಿಶೇಷ ಘಟಕ ಯೋಜನೆಯಡಿಯಲ್ಲಿ ಮಾಲೂರು ಮಾರುತಿ ಬಡಾವಣೆಯಲ್ಲಿ ಹಮ್ಮಿಕೊಂಡಿದ್ದ ಕನ್ನಡ ಸಂಗೀತ ಕಲಾ ವೈಭವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಗಾನಸುಧಾ ಸಾಂಸ್ಕೃತಿಕ ಕಲಾ ಸಂಘ ಅಧ್ಯಕ್ಷ ಕೆ. ಗೌತಮ್ ಮಾತನಾಡಿ ಸಂಗೀತವು ಮಾನಸಿಕ ನೆಮ್ಮದಿಯನ್ನು ನೀಡುತ್ತದೆ. ಇದರಿಂದ ಆರೋಗ್ಯ ಸುಧಾರಣೆಯಾಗುತ್ತದೆ ಎಂದು ವೈಜ್ಞಾನಿಕವಾಗಿ ಸಾಬೀತಾಗಿದೆ. ಅದರಲ್ಲೂ ನಮ್ಮ ಹಳ್ಳಿ ಸೊಗಡಿನ ಜಾನಪದ ಸಂಗೀತವು ಹಲವಾರು ಪ್ರಾಕಾರಗಳಿದ್ದು, ಜಾನಪದ ಸಂಗೀತ, ಜಾನಪದ ನೃತ್ಯವು ಹಲವಾರು ಕವಲುಗಳನ್ನು ಹೊಂದಿದ್ದು, ಹಲವಾರು ಕಲಾವಿದರು ಜೀವನೋಪಾಯಕ್ಕೂ ಆಧಾರವಾಗಿದೆ. ಈ ನಿಟ್ಟಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕಲಾ ತಂಡಗಳಿಗೆ ಸಾಂಸ್ಕೃತಿ ಕಾರ್ಯಕ್ರಮಗಳನ್ನು ನೀಡುತ್ತಿದ್ದು, ಕಲಾವಿದರು ಬದುಕು ಕಟ್ಟಿಕೊಳ್ಳಲು ಮತ್ತು ಕಲೆಯನ್ನು ಉಳಿಸಲು ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಬೇತಮಂಗಲ ಸಿ.ನಾರಾಯಣಸ್ವಾಮಿ ಮತ್ತು ತಂಡದಿಂದ ಜಾನಪದ ಸಂಗೀತ, ಈಶ್ವರಪ್ಪ ಮತ್ತು ತಂಡದಿಂದ ಸುಗಮ ಸಂಗೀತ, ಶ್ರಾವಂತಿ ಮತ್ತು ತಂಡದಿಂದ ಭರತನಾಟ್ಯ ಕಾರ್ಯಕ್ರಮ ನಡೆಯಿತು. ತಬಲ ಸಹಕಾರ ಪೃಥ್ವಿರಾಜ್ ಮತ್ತು ಕೀಬೋರ್ಡ್ ಸಹಕಾರವನ್ನು ಹಲಿಮಂಗಲ ಶಿವಕುಮಾರ್ ನಡೆಸಿಕೊಟ್ಟರು.

ಜಗದೇನಹಳ್ಳಿ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಹಾಗೂ ಮಾಜಿ ಎಪಿಎಂಸಿ ಅಧ್ಯಕ್ಷ ಶ್ರೀನಿವಾಸರೆಡ್ಡಿ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಸದಸ್ಯ ಪ್ರದೀಪ್‌ರೆಡ್ಡಿ, ಸಂಗೀತ ಶಿಕ್ಷಕಿ ಡಾ. ಅರುಣಾ, ಎಂ.ನಾರಾಯಣಸ್ವಾಮಿ ಉಪಸ್ಥಿತರಿದ್ದರು.



## ಕುಪ್ಪೂರು ಬೊಮ್ಮಲಿಂಗಯ್ಯ ಹಾಲು ಕರೆಯುವ ಸ್ಪರ್ಧೆಯಲ್ಲಿ ಪ್ರಥಮ

**ಹುಳಿಯಾರು:** ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಚಿಕ್ಕನಾಯಕನಹಳ್ಳಿ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘ ಕುಪ್ಪೂರು ಮತ್ತು ಗ್ರಾಮ ಪಂಚಾಯಿತಿ ಕುಪ್ಪೂರು ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಗುರುಮರುಳ ಸಿದ್ದೇಶ್ವರಸ್ವಾಮಿ ಗದ್ದಿಗೆ ಮಠದ ಆವರಣದಲ್ಲಿ ಕರುಗಳ ಪ್ರದರ್ಶನ ಮತ್ತು ಹಾಲು ಕರೆಯುವ ಸ್ಪರ್ಧೆ ಏರ್ಪಡಿಸಲಾಗಿತ್ತು.

ಹಾಲು ಕರೆಯುವ ಸ್ಪರ್ಧೆಯಲ್ಲಿ ಕುಪ್ಪೂರಿನ ಬೊಮ್ಮಲಿಂಗಯ್ಯ ಪ್ರಥಮ ಸ್ಥಾನ ಪಡೆದು 10000 ರೂ, ಮೇಲನಹಳ್ಳಿಯ ಯೋಗಾನಂದ ದ್ವಿತೀಯ ಸ್ಥಾನ ಪಡೆದು 7500 ರೂ. ತಮ್ಮಡಿಹಳ್ಳಿಯ ಅನಿತಾ ತೃತೀಯ ಸ್ಥಾಪ ಪಡೆದು 5000 ರೂ ಬಹುಮಾನ ಪಡೆದುಕೊಂಡರು.

ಕರುಗಳ ಪ್ರದರ್ಶನದಲ್ಲಿ ಒಟ್ಟು 85 ಕರುಗಳು ಭಾಗವಹಿಸಿದ್ದವು. ಉತ್ತಮವಾಗಿ ಸಾಕಿದ ಕರುಗಳಿಗೆ ವಯಸ್ಸಿಗನುಗುಣವಾಗಿ 01 ರಿಂದ 04 ತಿಂಗಳು, 04 ರಿಂದ 07ತಿಂಗಳು ಮತ್ತು 07 ತಿಂಗಳ ಮೇಲ್ಪಟ್ಟ ಕರುಗಳು ಹೀಗೆ ಮೂರು ಹಂತವಾಗಿ ವಿಂಗಡಿಸಿ 15 ಬಹುಮಾನಗಳನ್ನು ವಿತರಿಸಿ ಕರುಗಳ ಮಾಲಿಕರನ್ನು ಗೌರವಿಸಲಾಯಿತು. ಕರುಗಳ ಪ್ರದರ್ಶನದಲ್ಲಿ ಚಾಂಪಿಯನ್ ಪಟ್ಟವನ್ನು ಅರಳೀಕೆರೆ ಪವನ್‌ಕುಮಾರ್ ಅವರ ಹೆಚ್.ಎಫ್ ಕರು, ಚಿಕ್ಕ ಕರುಗಳ ಗುಂಪಿನಲ್ಲಿ ಬೆನಕನಕಟ್ಟೆ ಸುರೇಶ್ ಪ್ರಥಮ, ಹೆಸರಹಳ್ಳಿ ಯೋಗರಾಜು ದ್ವಿತಿಯ, ದಿಬ್ಬದಹಳ್ಳಿ ಮಿಥುನ್ ತೃತೀಯ ಬಹುಮಾನಗಳನ್ನು ಪಡೆದುಕೊಂಡರು. ಮಧ್ಯಮ ವರ್ಗದ ಕರುಗಳ ಗುಂಪಿನಲ್ಲಿ ಅರಳೀಕೆರೆ ಪವನ್ ಪ್ರಥಮ, ಭಟ್ಟರಹಳ್ಳಿ ದರ್ಶನ್ ದ್ವಿತೀಯ ಮತ್ತು ಹರಳಕಟ್ಟೆ ನಾಗರಾಜು ತೃತೀಯ ಬಹುಮಾನಗಳನ್ನು ಪಡೆದುಕೊಂಡರು. ದೊಡ್ಡ ಕರುಗಳ ಗುಂಪಿನಲ್ಲಿ ನವೀನ್ ಭಟ್ಟರಹಳ್ಳಿ ಪ್ರಥಮ, ಸದಾಶಿವಯ್ಯ ದಿಬ್ಬದಹಳ್ಳಿ ದ್ವಿತೀಯ ಹಾಗೂ ಹೆಂಜಯ್ಯ ಕುಪ್ಪೂರು ತೃತೀಯ ಬಹುಮಾನಗಳನ್ನು ಪಡೆದುಕೊಂಡರು.

## ಬೃಹತ್ ಲಲಿತ ಸಹಸ್ರನಾಮ ಪಾರಾಯಣ

**ಬೆಂಗಳೂರು:** ಕುಟುಂಬದ ಸರ್ವತೋಮುಖ ಅಭಿವೃದ್ದಿಯಲ್ಲಿ ಮಹಿಳೆಯರ ಪಾತ್ರ ಬಹಳ ಮುಖ್ಯವಾಗಿದೆ ಎಂದು ತಿರುಪತಿ ಶ್ರೀ ಶಕ್ತಿ ಪೀಠಂ ನ ಮಾತಾಜಿ ಶ್ರೀ ಶ್ರೀ ಶ್ರೀ ರಮ್ಯಾನಂದ ಭಾರತಿ ಸ್ವಾಮಿನಿ ತಿಳಿಸಿದರು.

ಇಂದು ಮಹಿಳಾ ದಿನಾಚರಣೆಯ ಅಂಗವಾಗಿ ಕಾಡುಗೋಡಿ ರಸ್ತೆ ವೈಟ್‌ಫೀಲ್ಡ್‌ನಲ್ಲಿರುವ ಮೈತ್ರಿ ಲೇಔಟ್ ಚೈತನ್ಯ ಭಾರತಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಬೃತಹ್ ಲಲಿತ ಸಹಸ್ರನಾಮ ಪಾರಾಯಣ ಹಾಗೂ ಸವಾಸಿನಿ ಪೂಜಾ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಮಹಿಳೆಯರಿಗೆ ನಮ್ಮ ಸಂಸ್ಕೃತಿಯಲ್ಲಿ ವಿಶೇಷವಾದ ಸ್ಥಾನಮಾನ ನೀಡಲಾಗಿದೆ. ಶಕ್ತಿಯ ಪ್ರತಿರೂಪ ಮಹಿಳೆ. ಕುಟುಂಬವನ್ನು ಹಾಗೂ ಸಮಾಜವನ್ನು ಸರಿಯಾದ ದಾರಿಯಲ್ಲಿ ಮುನ್ನಡೆಸಲು ಈ ಶಕ್ತಿಯ ಅವಶ್ಯಕತೆ ಬಹಳಷ್ಟಿದೆ. ಮಹಿಳೆಯರು ತಮ್ಮ ಸ್ವಸಾಮರ್ಥ್ಯವನ್ನು ಬೆಳೆಸಿಕೊಳ್ಳಲು ಹೆಚ್ಚಿನ ಆದ್ಯತೆ ನೀಡಬೇಕು. ತಮ್ಮ ಕುಟುಂಬವನ್ನು ಅದರ ಜೊತೆಯಲ್ಲೇ ಸಮಾಜದ ಸರ್ವತೋಮುಖ ಅಭಿವೃದ್ದಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು. 09 ನೇ ಮಾರ್ಚ್ ಭಾನುವಾರದಂದು ಚೈತನ್ಯ ಸಮರ್ಪನ್, ವೈಟ್ ಫೀಲ್ಡ್ ಹೊಸಕೋಟೆ ರಸ್ತೆ, ಶಿವನಗರ, ವಾಸ್ತು ಭೂಮಿ ಕನ್ನಮಂಗಲದಲ್ಲಿ ಬೆಳಿಗ್ಗೆ 9 ಗಂಟೆಯಿಂದ 12 ರ ವರೆಗೆ ಪೂಜ್ಯ ಶ್ರೀ ಮಾತಾಜಿಗೆ ಪಾದಪೂಜೆ ನಡೆಯಲಿದೆ. ನಂತರ ಮಾತಾಜಿಯವರಿಂದ ಅನುಗ್ರಹ ಭಾಷಣ ಮತ್ತು ಅನ್ನಪ್ರಸಾದ ನಡೆಯಲಿದೆ. ಅಂದು ಸಂಜೆ 5 ರಿಂದ 8 ಗಂಟೆಯವರೆಗೆ ಪೂಜ್ಯ ಶ್ರೀ ಮಾತಾಜಿಯವರ ದರ್ಶನ ಮತ್ತು ಮಂತ್ರ ಉಪದೇಶ ನಡೆಯಲಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಾತಾಜಿಯವರ ಆಶೀರ್ವಾದ ಪಡೆದುಕೊಳ್ಳಬಹುದಾಗಿದೆ.



# ಹರಾಜಿನಲ್ಲಿ ಪಂಪ್ ಮೋಟರ್ ಇಡದೆ ಯಾಮಾರಿಸಿದರು

**ಹುಳಿಯಾರು:** ಹುಳಿಯಾರು ಪಟ್ಟಣ ಪಂಚಾಯ್ತಿಯಲ್ಲಿ ಬುಧವಾರ ಬಹಿರಂಗ ಹರಾಜು ಇಸ್ತಿಹಾರ್ ಏರ್ಪಡಿಸಿದ್ದರು. ಇದರಲ್ಲಿ ಪಂಚಾಯ್ತಿಯ ಅನುಪಯುಕ್ತ ಸಾಮಗ್ರಿಗಳ ಹರಾಜು ಮಾಡಿದ್ದರು. ಆದರೆ ಕೊಳವೆಬಾವಿಗಳ ಪಂಪ್ ಮತ್ತು ಮೋಟರ್ ಇಡುವುದಾಗಿ ಹೇಳಿ ಇಡದೆ ಯಾಮಾರಿಸಿದರು ಎಂದು ಹರಾಜಿಗೆ ಬಂದಿದ್ದ ಗುಜರಿ ವ್ಯಾಪಾರಿಗಳು ಆರೋಪಿಸಿದರು.

ಹರಾಜು ಪ್ರಕಟಣೆ ನೋಡಿದ ತಕ್ಷಣ ಪಪಂ ಮುಖ್ಯಾಧಿಕಾರಿ ನಾಗಭೂಷಣ್ ಅವರಿಗೆ ದೂರವಾಣಿ ಕರೆ ಮಾಡಿ ಹರಾಜಿಗೆ ಏನೇನು ಐಟಂ ಇಡುತ್ತಿದ್ದೀರಿ ಎಂದು ಕೇಳಿದಾಗ ನಿರುಪಯುಕ್ತ ಪಂಪ್ ಮೋಟರ್ ಸೇರಿದಂತೆ ವಿವಿಧ ಕಬ್ಬಿಣದ ಗುಜರಿ ಐಟಂಗಳಿವೆ ಎಂದಿದ್ದರು. ಹಾಗಾಗಿ ಹರಾಜಿನಲ್ಲಿ ಪಾಲ್ಗೊಳ್ಳಲು ಬೆಂಗಳೂರಿನಿಂದ ಬಂದಿದ್ದೇನೆ. ಇಲ್ಲಿ ನೋಡಿದರೆ ಟ್ಯೂಬ್ ಲೈಟ್‌ನ ಫ್ರೇಮ್‌ಗಳೇ ಅಧಿಕವಾಗಿದ್ದು 5 ಸಾವಿರ ರೂ.ಗಳಿಗೂ ಬೆಲೆ ಬಾಳದ ಸಾಮಗ್ರಿಗಳಿವೆ ಎಂದು ಗುಜರಿ ವ್ಯಾಪಾರಿ ಪಾಷಾ ಆರೋಪಿಸಿದರು. ಅಲ್ಲದೆ ನಿಮ್ಮನ್ನು ಬಾ ಎಂದು ಕರೆದಿದ್ದೇವೆಯೇ ಎಂದು ಅವಮಾನಿಸಿದ್ದಾರೆ ಎಂದರು. ಹುಳಿಯಾರಿನ ಗುಜರಿ ವ್ಯಾಪಾರಿ ನಾಗಣ್ಣ ಅವರು ಮಾತನಾಡಿ ಈ ಹಿಂದೆ ಗೋಡನ್‌ನಿಂದ ಗುಜರಿ ಐಟಂ ಹೊರತೆಗೆದಾದ 10 ಸಣ್ಣ ಮೋಟರ್, 5 ದೊಡ್ಡ ಮೋಟರ್, ನಾಲ್ಕೈದು ಪಂಪ್‌ಗಳು ಇದ್ದವು. ಇವುಗಳನ್ನೂ ಹರಾಜಿನಲ್ಲಿಡುವಿರಾ ಎಂದು ಕೇಳಿದಾಗ ಹೌದು ಎಂದಿದ್ದರು. ಆದರೆ ಈಗ ಹರಾಜಿಗೆ ಬಂದು ನೋಡಿದರೆ ಮೋಟರ್‌ಗಳೇ ಇಲ್ಲದಾಗಿದೆ. ಎರಡ್ಮೂರು ಸಾವಿರ ರೂ. ಬೆಲೆ ಬಾಳದ ಐಟಂ ಕೂಗಲು 10 ಸಾವಿರ ಠೇವಣಿ ಮಾಡಿದ್ದಾರೆ ಎಂದು ಆರೋಪಿಸಿದರು. ಇದಕ್ಕೆ ಮುಖ್ಯಾಧಿಕಾರಿಗಳು ಪ್ರತಿಕ್ರಿಯಿಸಿ ಮೋಟರ್‌ಗಳು ಉಪಯುಕ್ತವೋ, ಅನುಪಯುಕ್ತವೋ ಎಂಬುದನ್ನು ಎಂಜಿನಿಯರ್ ಅವರಿಂದ ವರದಿ ಪಡೆದು ಹರಾಜಿಗೆ ಇಡಲಾಗುವುದು. ಈಗ ಇಲ್ಲಿರುವ ಸಾಮಗ್ರಿಗಳನ್ನು ಮಾತ್ರ ಹರಾಜು ಹಾಕಲಾಗುವುದು ಎಂದೇಳಿ ಹರಾಜು ಪ್ರಕ್ರಿಯೆ ಆರಂಭಿಸಿದರು.



# ಹುಳಿಯಾರು ಪಪಂಗೆ ಸುಂಕ ವಸೂಲಾತಿ ಗುತ್ತಿಗೆಯಿಂದ 6,88,900 ಹಣ ಸಂಗ್ರಹ

**ಹುಳಿಯಾರು:** ಹುಳಿಯಾರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಖಾಸಗಿ ಬಸ್ ನಿಲ್ದಾಣದ ಬಸ್ಸುಗಳ ಶುಲ್ಕ ವಸೂಲಾತಿ, ವಾರದ ಸಂತೆ ನೆಲವಳಿ ಸುಂಕ ವಸೂಲಾತಿ ಹರಾಜು, ಹುಣುಸೆ ಮರದ ಫಸಲು ಹರಾಜು, ಫುಟ್ಪಾತ್ ಅಂಗಡಿಗಳ ವಸೂಲಾತಿ ಹಕ್ಕಿನ ಹರಾಜು ಹಾಗೂ ಅನುಪಯುಕ್ತ ಸಾಮಗ್ರಿಗಳ ಪ್ರಕ್ರಿಯೆಯು ಪಟ್ಟಣ ಪಂಚಾಯಿತಿ ಆವರಣದಲ್ಲಿ ಮುಖ್ಯಾಧಿಕಾರಿ ಎಸ್.ನಾಗಭೂಷಣ್ ಅವರ ಉಪಸ್ಥಿತಿಯಲ್ಲಿ ಬುಧವಾರ ಜರುಗಿತು.

5 ರೀತಿಯ ಸುಂಕ ವಸೂಲಾತಿ ಗುತ್ತಿಗೆ ಹಾರಾಜು ಪ್ರಕ್ರಿಯೆಯ ಮೂಲಕ ಪಟ್ಟಣ ಪಂಚಾಯ್ತಿಗೆ 6,88,900 ರೂ. ಸಂಗ್ರಹವಾಯಿತು. ಆದರೆ ಕಳೆದ ಬಾರಿ ಸಂಗ್ರಹವಾದ ಹಣಕ್ಕಿಂತ ಅರ್ಧಕ್ಕರ್ಧ ಹಣ ಈ ಬಾರಿ ಕಡಿಮೆ ಸಂಗ್ರಹವಾಯಿತು. ಕಳೆದ ಬಾರಿ 12,84,600 ರೂ ಸಂಗ್ರಹವಾಗಿದ್ದು ಈ ಬಾರಿ 6,04,700 ರೂ. ಕಡಿಮೆ ಹಣ ಸಂಗ್ರಹವಾಗಿದೆ. ಇದಕ್ಕೆ ವಿವಿಧ ಕಾರಣಗಳಿದ್ದು ಹರಾಜು ಸಂದರ್ಭದಲ್ಲಿ ಈ ಸಂಬಂಧ ಮಾತಿನ ಚಕಮಕಿ ನಡೆದು ಬಿಡ್ ತಡೆಯಿಡಿಯುವುದಾಗಿ ಪಪಂ ಹೇಳಿದರೂ ಅನಿವಾರ್ಯವಾಗಿ ಬಿಡ್ ಪ್ರಕ್ರಿಯೆ ಮುಗಿಸಿದರು.

ಕಳೆದ ಬಾರಿ ಫುಟ್ಪಾತ್ ಅಂಗಡಿಗಳ ವಸೂಲಾತಿ ಹಕ್ಕು ದಾಖಲೆಯ 9.99 ರೂಪಾಯಿಗೆ ಹರಾಜಾಗಿದ್ದರೆ ಈ ಬಾರಿ ಚನ್ನಕೇಶವ ಅವರಿಗೆ 5,00,500 ರೂಗೆ ನಿಂತಿತು. ಖಾಸಗಿ ಬಸ್ಸುಗಳ ಶುಲ್ಕ ವಸೂಲಾತಿ ಹಕ್ಕು 1.02.000 ರೂಪಾಯಿಗಳಿಗೆ ಹಾರಾಜಾಗಿತ್ತು ಆದರೆ ಈಗ ಕೇವಲ 15 ಸಾವಿರ ರೂಗಳಿಗೆ ಸೈಯದ್ ಮುನಾವರ್ ಎಂಬುವರಿಗೆ ನಿಂತಿತು. ವಾರದ ಸಂತೆ ನೆಲವಳಿ ಸುಂಕ ವಸೂಲಾತಿ ಹರಾಜು 1,71,000 ರೂಪಾಯಿಗೆ ಆಗಿತ್ತು. ಈಗ ಮಿಲ್ಟ್ರಿ ಶಿವಣ್ಣ ಅವರಿಗೆ 1,60,500 ರೂಗೆ ಆಯಿತು. ಕಳೆದ ವರ್ಷ ಹುಣಸೆ ಮರದ ಫಸಲು ಹರಾಜು ರೂ 12,600 ಕ್ಕೆ ಆಗಿದ್ದರೆ ಈ ವರ್ಷ ಟ್ರಾಕ್ಟರ್ ಮಂಜಣ್ಣ ಹರಾಜು ಕೂಗಿದವರು ಹರಾಜು ನಿಂತಿರುವ ಹಣವನ್ನು 24 ಗಂಟೆಯೊಳಗೆ ಪಾವತಿಸಲು ಮುಖ್ಯಾಧಿಕಾರಿ ನಾಗಭೂಷಣ್ ಸೂಚಿಸಿದರು. ಹರಾಜು ಪ್ರಕ್ರಿಯೆಯಲ್ಲಿ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷೆ ಕಾವ್ಯರಾಣಿ, ಸ್ಥಾಯಿಸಮಿತಿ ಅಧ್ಯಕ್ಷ ಚಂದ್ರಶೇಖರ್, ಸದಸ್ಯರುಗಳಾದ ಹೇಮಂತ್ ಕುಮಾರ್, ಜಹೀರ್ ಸಾಬ್, ಬೀಬೀಫಾತೀಮಾ, ನಾಮಿನಿ ಸದಸ್ಯ ವೆಂಕಟೇಶ್ ಪಟ್ಟಣ ಪಂಚಾಯಿತಿ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

**ಹುಣಸೆ ಮರದಲ್ಲಿ ಹಣ್ಣಿಲ್ಲ:** ಹುಣಸೆ ಮರದ ಫಸಲು ಹರಾಜು ಕೇವಲ 2800 ರಕ್ಕೆ ನಿಲ್ಲುವ ಸೂಚನೆ ತಿಳಿದ ಮುಖ್ಯಾಧಿಕಾರಿಗಳು ಕಳೆದ ವರ್ಷ 12,600 ರಕ್ಕೆ ಹೋಗಿತ್ತು. ಇಷ್ಟು ಕಮ್ಮಿಗೆ ಕೂಗಿದರೆ ಹೇಗೆ ಕೂಗಿ ಎಂದರು. ಆದರೆ ಬಿಡ್ಡುದಾರರು ಹುಣಸೆ ಮರಗಳನ್ನು ನೋಡಿದ್ದೀರ ಸ್ವಾಮಿ ಹಣ್ಣುಗಳೇ ಇಲ್ಲ. ಒಂದೊಂದು ಮರದ ಹಣ್ಣು ಬಡಿಸಲು 2 ಸಾವಿರ ಕೂಲಿ ಕೊಡಬೇಕು. 11 ಮರಗಳಿಗೆ 22 ಸಾವಿರ ಆಗುತ್ತದೆ. ಕೂಲಿ ಕೊಟ್ಟು ಹಣ್ಣು ಬಡಿಸಿ ನಾವೇನು ಲಾಭಗಳಿಸೋದು ನಾವ್ಯಾರೂ ಕೂಗಲ್ಲ ಮಂಜಣ್ಣ ಅವರಿಗೆ ಅಂತಿಮ ಮಾಡಿ ಎಂದು ಹೇಳಿದರು.

**ಖಾಸಗಿ ಬಸ್‌ಗಳೇ ಬರಲ್ಲ:** ಖಾಸಗಿ ಬಸ್ಸುಗಳ ಶುಲ್ಕ ವಸೂಲಾತಿ ಹಕ್ಕಿನ ಹರಾಜು 15 ಸಾವಿರ ದಾಟದಾದಾಗ ಮತ್ತೆ ಮುಖ್ಯಾಧಿಕಾರಿಗಳು ಬಿಡ್‌ದಾರರನ್ನು ಏನ್ರಿ ಇದು ಕಳೆದ ವರ್ಷ ಲಕ್ಷ ದಾಟಿದ್ದು 15 ಸಾವಿರಕ್ಕಾದರೆ ಹರಾಜು ನಿಲ್ಲಿಸಿ ನಮ್ಮ ಸಿಬ್ಬಂದಿಗಳಿಂದಲೇ ವಸೂಲಿ ಮಾಡಿಸುತ್ತೇನೆ ಎಂದರು. ಕಳೆದ ವರ್ಷ ನಿತ್ಯ ನೂರಾರು ಖಾಸಗಿ ಬಸ್‌ಗಳು ಬರುತ್ತಿದ್ದವು. ಈಗ ಕೇವಲ ಹದಿನೈದಿಪ್ಪತ್ತು ಬಸ್ ಬರುತ್ತಿವೆ. ನಿತ್ಯ 400 ರಿಂದ 500 ಶುಲ್ಕ ಸಂಗ್ರಹವಾಗಬಹುದು. ಬೆಳಗ್ಗಿಯಿಂದ ಸಂಜೆ ವರೆವಿಗು ನಿಂತು ಶುಲ್ಕ ಸಂಗ್ರಹಿಸುವ ಕೂಲಿ ಹಣ ಕಳೆದರೆ ಹರಾಜು ಕೂಗಿದಕ್ಕಾದರೂ ಏನು ಲಾಭ ಬರುತ್ತದೆ ಹೇಳಿ ಕೊಡುವುದಾದರೆ ಕೊಡಿ ಇಲ್ಲದಿದ್ದರೆ ಕ್ಯಾನ್ಸಲ್ ಮಾಡಿ ಎಂದು ಬಿಡ್ಡುದಾರರು ಹೇಳಿದರು. ಕೊನೆಗೆ ವಿಧಿಯಿಲ್ಲದೆ 15 ಸಾವಿರಕ್ಕೇ ಫೈನಲ್ ಮಾಡಲಾಯಿತು

**ಕಳೆದ ಬಾರಿಯ ಗುತ್ತಿಗೆದಾರರಿಗೆ ನಿರ್ಬಂಧ:** ಫುಟ್ ಪಾತ್ ಸುಂಕ ವಸೂಲಿ ಗುತ್ತಿಗೆಯ ಹರಾಜು ನಡೆಯುವಾಗ ಫುಟ್ ವ್ಯಾಪಾರಿಗಳು ಮದ್ಯ ಪ್ರವೇಶಿಸಿ ಕಳೆದ ವರ್ಷ 10 ಲಕ್ಷ ರೂಗೆ ಹರಾಜು ಕೂಗಿ ನನಗೆ ಲಾಸ್ ಆಗಿದೆ ಎಂದು ದೌರ್ಜನ್ಯದಿಂದ ಹೆಚ್ಚುವರಿಯಾಗಿ ಸುಂಕ ವಸೂಲಿ ಮಾಡಿದ್ದಾರೆ. ನಾವು ದೂರು ಕೊಟ್ಟರೂ ಯಾರೊಬ್ಬರೂ ಸ್ಪಂಧಿಸಲಿಲ್ಲ ಎಂದು ಆರೋಪಿಸಿದರು. ಇದಕ್ಕೆ ಸ್ಥಾಯಿ ಸಮಿತಿ ಅಧ್ಯಕ್ಷ ಚಂದ್ರಶೇಖರ್ ಅವರು ನಾನೇ ಖುದ್ದು ಹೆಚ್ಚು ವಸೂಲಿ ಮಾಡುತ್ತಿರುವುದನ್ನು ನೋಡಿ ಗಲಾಟೆ ಸಹ ಮಾಡಿದ್ದೇನೆ. ಹಾಗಾಗಿ ಈ ಬಾರಿ ಹರಾಜಿನಲ್ಲಿ ಕಳೆದ ವರ್ಷ ಗುತ್ತಿಗೆ ಪಡೆದ ಮಲ್ಲಿಕಾರ್ಜು ಅವರನ್ನು ನಿರ್ಬಂಧಿಸಿರುವುದಾಗಿ ಹೇಳಿದರು. ಇದಕ್ಕೆ ಠೇವಣಿ ಹಣ ಕಟ್ಟಿಸಿಕೊಂಡು ಅರ್ಧ ಹರಾಜು ಮುಗಿದಿರುವಾಗ ಹೇಗೆ ನಿರ್ಬಂಧಿಸುತ್ತೀರಿ ಎಂದು ಕೆಲವರು ವಿರೋಧ ವ್ಯಕ್ತಪಡಿಸಿದರು. ಆದರೂ ಮಲ್ಲಿಕಾರ್ಜುನ್ ಅವರನ್ನು ಬಿಟ್ಟು ಹರಾಜು ನಡೆಸಿದರು.

# ಮಹಿಳೆಯರ ಆರೋಗ್ಯ ಕಾಪಾಡುವುದು ನಮ್ಮೆಲ್ಲರ ಜವಾಬ್ದಾರಿ

**ಮೈಸೂರು:** ನಗರದ ವಿಜಯನಗರದಲ್ಲಿರುವ ಸೇವಾಯಾನಟ್ರಸ್ಟ್ ಹಾಗೂ ಜೆಎಸ್‌ಎಸ್‌ದಂತ ವೈದ್ಯಕೀಯಕಾಲೇಜುಇವರ ಸಹಯೋಗದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲಾಯಿತು.ಕಾರ್ಯಕ್ರಮಕ್ಕೆಜ್ಯೋತಿ ಬೆಳಗಿಸಿ ಚಾಲನೆ ನೀಡಿದ ಜೆಎಸ್‌ಎಸ್ ಮನೋವೈದ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥರು ಮತ್ತುಪ್ರಾಧ್ಯಾಪಕರಾದಡಾ. ಎಂ.ಕಿಶೋರ್‌ರವರು ಮಹಿಳಾ ಹಿರಿಯ ನಾಗರೀಕರ ಮಾನಸಿಕ ಆರೋಗ್ಯಕುರಿತು ಮಾತನಾಡಿ ಹಿರಿಯರಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಕಾರ ನೀಡುವುದು ನಮ್ಮೆಲ್ಲರಜವಾಬ್ದಾರಿ.ಇಂದುಆರೋಗ್ಯವೇ ಬಹಳ ಮುಖ್ಯವಾದಐಶ್ವರ್ಯವಾಗಿದೆ, ಪ್ರತಿಯೊಬ್ಬರುಆರೋಗ್ಯದಕಡೆ ಹೆಚ್ಚು ಗಮನವಹಿಸಬೇಕು, ಇಲ್ಲಿಆಶ್ರಯ ಪಡೆದಿರುವ ಹಿರಿಯರಿಗೆಆರೋಗ್ಯ ಸಮಸ್ಯೆಗಳ ಬಗ್ಗೆ ಚರ್ಚಿಸಿ ಪರಿಹಾರವನ್ನು ಸೂಚಿಸಿ, ತಪಾಸಣೆ ನಡೆಸಿಕೊಟ್ಟರು. ಸೇವಾಯಾನ ಸಂಸ್ಥೆಯು ಸಮಾಜ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ಬಗ್ಗೆ ಪ್ರಶಂಸೆಯ ಮಾತುಗಳನ್ನಾಡಿ ಸಮಾಜದಲ್ಲಿ ಹೆಣ್ಣು ಮಕ್ಕಳನ್ನು ಮುಖ್ಯ ವಾಹಿನಿಗೆ ತರುವ ಕೆಲಸವಾಗಬೇಕೆಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಶಾರದಾವಿಲಾಸ ಕಾಲೇಜಿನ ನಿವೃತ್ತ ಪ್ರಾಧ್ಯಾಪಕರಾದ ಪ್ರೊ.ಎ.ಶಶಿಕಲಾ ರವರು ಮಹಿಳಾ ಸಶಕ್ತ ಗೀತೆಗಳನ್ನು ಹಾಡಿ ಹಿರಿಯ ಜೀವಿಗಳ ಮನಸ್ಸಿಗೆ ಸ್ಫೂರ್ತಿತುಂಬಿದರು.ಸೇವಾಯಾನ ಸಂಸ್ಥೆಯಅಧ್ಯಕ್ಷರಾದ ಶ್ರೀಮತಿ ಪ್ರಭಾಮಣಿಎಲ್ಲರನ್ನು ಸ್ವಾಗತಿಸಿ ಮಾತನಾಡಿ,ಸಂಸ್ಥೆಯ ಸಾಮಾಜಿಕ ಸೇವಾ ಕಾರ್ಯಗಳನ್ನು ಯಾವುದೇ ಫಲಾಪೇಕ್ಷೆಇಲ್ಲದೆ ಸೇವೆಯನ್ನು ಮಾಡುತ್ತಿದ್ದೇವೆಎಂದುತಿಳಿಸಿಕೊಟ್ಟರು. ಮಾತೃಮಂಡಳಿ ಶಾಲೆಯ ನಿವೃತ್ತ ಮುಖ್ಯ ಶಿಕ್ಷಕರಾದ ಶುಭಾಮಣಿ ಹಿರಿಯ ಮಹಿಳೆಯರಿಗೆ ರಸಪ್ರಶ್ನೆಕಾರ್ಯಕ್ರಮ ನಡೆಸಿಕೊಟ್ಟು ವೃದ್ಧರು ಬಹಳ ಆಸಕ್ತಿ ಮತ್ತುಚಟುವಟಿಕೆಯಿಂದ ಭಾಗವಹಿಸಿದ್ದು ವಿಶೇಷವಾಗಿತ್ತು.ಕಾರ್ಯಕ್ರಮದಲ್ಲಿ ಸೇವಾಯಾನ ಸಂಸ್ಥೆಯ ಸಮಾಜ ಸೇವಕರಾದಕಿರಣ್, ಡಾ.ಸೌಮ್ಯ, ನಿವೃತ್ತ ಹಿರಿಯನರ್ಸ್‌ಚಂದ್ರವತಿ, ಹಿರಿಯರಾದ ವೇದ, ಸದಾಶಿವಪ್ಪ, ಚನ್ನಬಸಪ್ಪ, ಧರ್ಮದರ್ಶಿ ಮಂಜುನಾಥ್ ಹಾಗೂ ವೃದ್ಧರು ಭಾಗವಹಿಸಿದ್ದರು.



**ಮೈಸೂರಿನ ವಿಜಯನಗರದಲ್ಲಿರುವ ಸೇವಾಯಾನಟ್ರಸ್ಟ್ ಹಾಗೂ ಜೆಎಸ್‌ಎಸ್‌ದಂತ ವೈದ್ಯಕೀಯಕಾಲೇಜುಇವರ ಸಹಯೋಗದಲ್ಲಿಇಂದುಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನುಆಚರಿಸಲಾಯಿತು.ಜೆಎಸ್‌ಎಸ್ ಮನೋವೈದ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥರು ಮತ್ತು ಪ್ರಾಧ್ಯಾಪಕರಾದಡಾ.ಎಂ.ಕಿಶೋರ್‌ರವರುಜ್ಯೋತಿ ಬೆಳಗಿಸುತ್ತಿರುವುದು.ಶಾರದಾವಿಲಾಸ ಕಾಲೇಜಿನ ನಿವೃತ್ತ ಪ್ರಾಧ್ಯಾಪಕರಾದ ಪ್ರೊ.ಎ.ಶಶಿಕಲಾ, ಸೇವಾಯಾನ ಸಂಸ್ಥೆಯಅಧ್ಯಕ್ಷರಾದ ಶ್ರೀಮತಿ ಪ್ರಭಾಮಣಿ, ಮಾತೃಮಂಡಳಿ ಶಾಲೆಯ ನಿವೃತ್ತ ಮುಖ್ಯ ಶಿಕ್ಷಕರಾದ ಶುಭಾಮಣಿ,ಸೇವಾಯಾನ ಸಂಸ್ಥೆಯ ಸಮಾಜ ಸೇವಕರಾದಕಿರಣ್, ಡಾ.ಸೌಮ್ಯ, ನಿವೃತ್ತ ಹಿರಿಯ ನರ್ಸ್‌ಚಂದ್ರವತಿ, ಹಿರಿಯರಾದ ವೇದ, ಸದಾಶಿವಪ್ಪ, ಚನ್ನಬಸಪ್ಪ, ಧರ್ಮದರ್ಶಿ ಮಂಜುನಾಥ್ ಕಾಣಬಹುದು.**

# ಮಹಿಳಾ ದಿನದ ಸಂಭ್ರಮಾಚರಣೆ

**ಬೆಂಗಳೂರು:** ಮಹಿಳಾ ದಿನಾಚರಣೆಯ ಅಂಗವಾಗಿ ಡೆಲ್ಲಿ ಪಬ್ಲಿಕ್ ಸ್ಕೂಲ್ ಬೆಂಗಳೂರು ಉತ್ತರ ವಲಯದಲ್ಲಿ ಆಡಳಿತ ಮಂಡಳಿಯವರಿಂದ ಬೋಧಕೇತರ ಸಿಬ್ಬಂದಿ ವರ್ಗದವರಿಗೆ ವಿಶೇಷವಾದ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಸುಮಾರು 300ಕ್ಕೂ ಹೆಚ್ಚು ಸಿಬ್ಬಂದಿಗಳು ಇದರಲ್ಲಿ ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು. ಪ್ರಾರ್ಥನೆಯೊಂದಿಗೆ ಕಾರ್ಯಕ್ರಮವನ್ನು ಆರಂಭಿಸಲಾಯಿತು. ಶಾಲೆಯ ಉಪ ಪ್ರಾಂಶುಪಾಲರಾದ ಶ್ರೀಮತಿ ಗೀತ ಕಂದರಾಜೆಯವರು ಹಿತನುಡಿಗಳನ್ನು ನುಡಿದರು. ನಂತರ ಅವರ ನೇತೃತ್ವದಲ್ಲಿ ಅನೇಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಅವುಗಳಲ್ಲಿ ಅಂತ್ಯಾಕ್ಷರಿ, ಅಡುಗೆ ಸ್ಪರ್ಧೆ, ರಂಗೋಲಿ, ಹಲವು ರೀತಿಯ ಕ್ರೀಡಾಸ್ಪರ್ಧೆಗಳು ಹಾಗೂ ಉಡುಗೆ ತೊಡುಗೆಗಳ ಪ್ರದರ್ಶನದ ಸ್ಪರ್ಧೆಗಳನ್ನು ನಡೆಸಲಾಯಿತು. ಈ ಸ್ಪರ್ಧೆಗಳಲ್ಲಿ ವಿಜೇತರಾದ ಸುಮಾರು 40 ಕ್ಕೂ ಹೆಚ್ಚು ಸ್ಪರ್ಧಿಗಳಿಗೆ ಬಹುಮಾನವನ್ನು ವಿತರಿಸಲಾಯಿತು. ಏರೋಬಿಕ್ಸ್ ನೃತ್ಯ ಹಾಗೂ ಹತ್ತು ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಿದ ಸಿಬ್ಬಂದಿಯವರು ಮಹಿಳಾ ದಿನಾಚರಣೆಯನ್ನು ಅರ್ಥಗರ್ಭಿತವಾಗಿ ಸಂಭ್ರಮಿಸಿದ್ದು ವಿಶೇಷವಾಗಿ ಕಂಡುಬಂದಿತು. ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಸುಮತಿ ಮೇಡಂರವರು ಸಲ್ಲಿಸಿದ ವಂದನಾರ್ಪಣೆಯೊಂದಿಗೆ ಕಾರ್ಯಕ್ರಮವು ಅತ್ಯಂತ ಯಶಸ್ವಿಯಾಗಿ ಮುಕ್ತಾಯಗೊಂಡಿತು.



# ತೋಟಗಾರಿಕೆ ತರಬೇತಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲೆಯ ತೋಟಗಾರಿಕೆ ಇಲಾಖೆ ವತಿಯಿಂದ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್ ಬಾಗ್. ಬೆಂಗಳೂರು ಇಲ್ಲಿ 2025–26ನೇ ಸಾಲಿನಲ್ಲಿ ರೈತರ ಮಕ್ಕಳಿಗೆ ತೋಟಗಾರಿಕೆ ತರಬೇತಿಯನ್ನು (2025ರ ಮೇ 2 ರಿಂದ 2026ರ ಫೆಬ್ರವರಿ 28 ವರೆಗೆ) ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಕಚೇರಿಗೆ ಕೆಲಸದ ಸಮಯದಲ್ಲಿ ತೋಟಗಾರಿಕೆ ಉಪ ನಿರ್ದೇಶಕರು, (ಜಿಲ್ಲಾ ಪಂಚಾಯತ್) ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಲ್ಲಾ ಪಂಚಾಯತ್) ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ) ಅವರ ಕಚೇರಿಯಿಂದ ಪಡೆದುಕೊಳ್ಳಬಹುದು ಅಥವಾ ಇಲಾಖೆಯ ವೆಬ್ ಸೈಟ್ ನಲ್ಲಿ ಮಾಡಿಕೊಳ್ಳಬಹುದು. ಅರ್ಜಿ ಶುಲ್ಕ ಸಾಮಾನ್ಯ ಅಭ್ಯರ್ಥಿಗಳಿಗೆ ರೂ.30 ಮತ್ತು ಪರಿಶಿಷ್ಟ ಜಾತಿ ಮತ್ತು /ಪರಿಶಿಷ್ಟ ಪಂಗಡದ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ರೂ.15 ಗಳ ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ (ಐಪಿಒ) ಡಿಮ್ಯಾಂಡ್ ಡ್ರಾಫ್ಟ್ ಅನ್ನು ತೋಟಗಾರಿಕೆ ಉಪ ನಿರ್ದೇಶಕರು ಜಿಲ್ಲಾ ಪಂಚಾಯತ್ ಚಿಕ್ಕಬಳ್ಳಾಪುರ ರವರ ಹೆಸರಿನಲ್ಲಿ ಪಡೆದ ಅರ್ಜಿಯ ಜೊತೆಗೆ ಲಗತ್ತಿಸಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಏಪ್ರಿಲ್ 1 ರಂದು ಸಂಜೆ 5.30 ಗಂಟೆಯೊಳಗೆ ಈ ಕಚೇರಿಗೆ ಸಲ್ಲಿಸತಕ್ಕದ್ದು. ಅರ್ಹ ಅಭ್ಯರ್ಥಿಗಳಿಗೆ ಏಪ್ರಿಲ್ 8 ರಂದು ತೋಟಗಾರಿಕೆ ಉಪನಿರ್ದೇಶಕರ ಕಚೇರಿಯಲ್ಲಿ ಸಂದರ್ಶನ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಉಪ ನಿರ್ದೇಶಕರು, ಪಿ.ಆರ್. ಎಸ್.ತೋಟಗಾರಿಕೆ ಕ್ಷೇತ್ರ, ನಂದಿ ಕ್ರಾಸ್ ಚಿಕ್ಕಬಳ್ಳಾಪುರ ಅಥವಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿ.ಹೆಚ್.ಡಿ ಪದವಿ ಅಂಗೀಕಾರ

**ಮೈಸೂರು:** ಐಶ್ವರ್ಯ.ಎನ್ ಅವರು ಡಾ. ಪ್ರಕಾಶ್ ಬಿ ನಾಯಕ್ ಅವರ ಮಾರ್ಗದರ್ಶನದಲ್ಲಿ "Role of workplace Diversity, Inclusion and Equity on Employee Productivity in Higher Management Educational Institutions –A study"ಎಂಬ ವಾಣಿಜ್ಯ ವಿಷಯದಲ್ಲಿ ಸಂಶೋಧನೆ ನಡೆಸಿರುತ್ತಾರೆ ಮತ್ತು ಮಹಾಪ್ರಬಂಧವನ್ನು ಆಂಗ್ಲ ಭಾಷೆಯಲ್ಲಿ ಸಿದ್ಧಪಡಿಸಿದ್ದು, 2017 ರ ಮೈಸೂರು ವಿಶ್ವವಿದ್ಯಾನಿಲಯದ ಪಿಹೆಚ್‌ಡಿ ನಿಯಮಾವಳಿಯಡಿಯಲ್ಲಿ ಅಂಗೀಕರಿಸಲಾಗಿದೆ. ಅಭ್ಯರ್ಥಿಯು ಸದರಿ ಪಿಹೆಚ್‌ಡಿ ಪದವಿಯನ್ನು ಮುಂದೆ ನಡೆಯುವ ವಾರ್ಷಿಕ ಘಟಿಕೋತ್ಸವದಲ್ಲಿ (ಖುದ್ದಾಗಿ/ಗೈರುಹಾಜರಿಯಲ್ಲಿ) ಪಡೆಯಬಹುದಾಗಿದೆ ಎಂದು ಮೈಸೂರು ವಿಶ್ವ ವಿದ್ಯಾನಿಲಯದ ಕುಲಸಚಿವ(ಪರೀಕ್ಷಾಂಗ)ರಾದ ಪ್ರೊ.ಎನ್ ನಾಗರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮಗಳ ಮೂಲಭೂತ ಸೌಕರ್ಯಕ್ಕೆ ಹೆಚ್ಚಿನ ಒತ್ತು

**ಚಾಮರಾಜನಗರ:** ರಾಷ್ಟ್ರೀಯ ಹೆದ್ದಾರಿ ಕ್ರಾಸ್ ಬಳಿಯಿಂದ ಹುಲ್ಲೇಪುರ ಗ್ರಾಮಕ್ಕೆ ಹೋಗುವ ರಸ್ತೆಅಭಿವೃದ್ಧಿ ಕಾಮಗಾರಿಗೆ ಎಂಎಸ್‌ಐಎಲ್ ಅಧ್ಯಕ್ಷ, ಶಾಸಕ ಸಿ.ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

**ಹುಲ್ಲೇಪುರ ಗ್ರಾಮಕ್ಕೆ ಹೋಗುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ**

3ಕೋಟಿ ರೂ ವೆಚ್ಚದಲ್ಲಿ ಶೇ5050 ಅನುಪಾತ ಯೋಜನೆಯಡಿ ಉತ್ತಮ ರಸ್ತೆ ನಿರ್ಮಿಸಿಕೊಡಲು ಭೂಮಿಪೂಜೆ ನೆರವೇರಿಸಿದ್ದೇನೆ. ತಮ್ಮ ಕ್ಷೇತ್ರವ್ಯಾಪ್ತಿಯಲ್ಲಿ ಜನತೆಯ ಆಶಯಕ್ಕೆ ಬದ್ಧರಾಗಿ ಗ್ರಾಮಗಳಲ್ಲಿ ರಸ್ತೆ ಚರಂಡಿ, ಸಮುದಾಯ ಭವನ ಆಶ್ರಯಮನೆ ಗಂಗಾ ಕಲ್ಯಾಣ ಯೋಜನೆ ಸೇರಿದಂತೆ ಸರಕಾರ ಮಂಜೂರುಮಾಡುವ ಅನುದಾನ ಹಾಗೂ ಸೌಲಭ್ಯಗಳನ್ನು ಜನರಿಗೆ ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ, ಕಾಮಗಾರಿ ನಿರ್ವಹಣೆ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಗೆ ಒತ್ತು ನೀಡಬೇಕು ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಗ್ರಾಪಂ ಸದಸ್ಯ ಮಂಜು, ಮುಖಂಡರಾದ ದೊರೆಸ್ವಾಮಿ, ಕೃಷ್ಣಮೂರ್ತಿ, ಮಹದೇವಶೆಟ್ಟಿ, ಗ್ರಾಮಸ್ಥರು ಹಾಜರಿದ್ದರು.



**ಚಾಮರಾಜನಗರ. ರಾಷ್ಟ್ರೀಯ ಹೆದ್ದಾರಿ ಕ್ರಾಸ್ ಬಳಿಯಿಂದ ತಾಲ್ಲೂಕಿನ ಹುಲ್ಲೇಪುರ ಗ್ರಾಮಕ್ಕೆ ಹೋಗುವ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಎಂಎಸ್‌ಐಎಲ್ ಅಧ್ಯಕ್ಷ, ಶಾಸಕ ಸಿ.ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.**

# ನಿವೃತ್ತ ಅಂಗನವಾಡಿ ನೌಕರರಿಗೆ ಸನ್ಮಾನ

**ತಾಂಡವಪುರ:** ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಶನಿವಾರ ತಾಂಡವಪುರ ಗ್ರಾಮದಲ್ಲಿ ವಿಶೇಷ ಮಹಿಳಾ ಗ್ರಾಮ ಸಭೆ ಹಮ್ಮಿಕೊಳ್ಳುವ ಮೂಲಕ ಗ್ರಾಮದ ಅಂಗನವಾಡಿ ಕೇಂದ್ರಗಳಲ್ಲಿ ನೌಕರರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಮೂವರು ಮಹಿಳಾ ನೌಕರರನ್ನು ಗ್ರಾಮ ಪಂಚಾಯತಿ ವತಿಯಿಂದ ಸನ್ಮಾನಿಸಿ ಗೌರವಿಸಿ ಅಭಿನಂದಿಸಿದರು

ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಗ್ರಾಮ ಪಂಚಾಯತಿಯ ವತಿಯಿಂದ ಏರ್ಪಡಿಸಿದ್ದ ವಿಶೇಷ ಮಹಿಳಾ ಗ್ರಾಮ ಸಭೆಯ

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯತಿ ಯೋಜನೆ ಅಧಿಕಾರಿಗಳಾದ ಪ್ರಭುಸ್ವಾಮಿ ರವರು ಭಾಗವಹಿಸಿ ಮಾತನಾಡುತ್ತಾ ಎಲ್ಲಾ ರಂಗದಲ್ಲೂ ಪುರುಷರಿಗಿಂತ ಮಹಿಳೆಯರು ಕಡಿಮೆ ಇಲ್ಲ ಮಹಿಳೆಯರು ಕೂಡ ಸಮಾಜದಲ್ಲಿ ಸಮಸಮನಾಗಿ ಬದುಕಬೇಕು ಎಂಬ ಉದ್ದೇಶದಿಂದ ಸಂವಿಧಾನದ ಅಡಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೂಡ ಮಹಿಳೆಯರ ಅಭಿವೃದ್ಧಿಗೆ ವಿಶೇಷ ಯೋಜನೆಗಳನ್ನು ನೀಡುತ್ತಿವೆ ಅದರಲ್ಲೂ ನಮ್ಮ ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರವು ಮಹಿಳೆಯರು ಆರ್ಥಿಕವಾಗಿ ಮುಂದೆ ಬರಬೇಕು ಎಂಬ ಕಾರಣಕ್ಕೆ ಸರ್ಕಾರವು ಗ್ಯಾರಂಟಿ ಯೋಜನೆಗಳ ಅಡಿಯಲ್ಲಿ ಶಕ್ತಿ ಯೋಜನೆ ಗೃಹಲಕ್ಷ್ಮಿ ಯೋಜನೆ ಸೇರಿದಂತೆ ಇನ್ನೂ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು ಆ ಯೋಜನೆಗಳ ಉಪಯೋಗವನ್ನು ಪಡೆದುಕೊಂಡು ಸದುಪಯೋಗ ಮಾಡಿಕೊಂಡು ಸಮಾಜದಲ್ಲಿ ಮುಂದೆ ಬನ್ನಿ ಎಂದು ಸಲಹೆ ನೀಡಿದರು

ತಾಲೂಕುಪಂಚಾಯಿತಿಕಾರ್ಯನಿರ್ವಹಣಾಧಿಕಾರಿ ಜರಾಲ್ಡ್ ರಾಜೇಶ್ ಮಾತನಾಡಿ ನೂರಾರು ವರ್ಷಗಳ ಹಿಂದೇನೆ ಮಹಿಳೆಯರು ಪುರುಷರಿಗಿಂತ ಕಡಿಮೆ ಇಲ್ಲ ಎಂದು ಹಲವಾರು ರಂಗದಲ್ಲಿ ಸಾಧನೆ ಮಾಡಿ ತೋರಿಸಿದ್ದಾರೆ ಆದರಿಂದಲೇ ಇಂದು ಅಂತರಾಷ್ಟ್ರೀಯ ಮಹಿಳಾ ಮಹಿಳಾ ದಿನಾಚರಣೆಯ ವಿಶೇಷ ಗ್ರಾಮ ಸಭೆಯನ್ನು ಹಮ್ಮಿಕೊಳ್ಳುವ ಮೂಲಕ ಮಹಿಳೆಯರನ್ನು ಗೌರವಿಸಿ ಅವರಲ್ಲಿ ಜಾಗೃತಿ ಮೂಡಿಸಿ ಅವರನ್ನು ಸಹ ಮುಖ್ಯ ವಾಹಿನಿಗೆ ಕರೆ ತರುವ ಕಾರ್ಯಕ್ರಮ ಇದಾಗಿದ್ದು ಮಹಿಳೆಯರು ಸರ್ಕಾರದ ಯೋಜನೆಗಳನ್ನು ತಿಳಿದುಕೊಂಡು ಪಡೆದುಕೊಂಡು ಜಾಗುತ್ತರಾಗಿ ಶಬಲರಾಗಿ ಆರ್ಥಿಕವಾಗಿ ಮುಂದೆ ಬರಬೇಕು ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗಮ್ಮ ಜಿಲ್ಲಾ ಪಂಚಾಯತಿ ಯೋಜನೆ ಅಧಿಕಾರಿಗಳಾದ ಪ್ರಭುಸ್ವಾಮಿ ತಾಲೂಕು ಪಂಚಾಯತಿ ಕಾರ್ಯನಿರ್ವಾಧಿಕಾರಿ ಜರಾಲ್ಡ್ ರಾಜೇಶ್ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಬಗರ್ ಹುಕುಂ ಸಮಿತಿಯ ಸದಸ್ಯ ಯಬ್ಯಾ ರಾಜಣ್ಣ ಕಾರ್ಯದರ್ಶಿ ಕೆಕೆ ಮಾರಯ್ಯ ಹಿರಿಯ ಲೆಕ್ಕ ಸಹಾಯಕ ಎಸ್ ಪುಟ್ಟರಾಜು ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀಕಂಠ ಸ್ವಾಮಿ ಪ್ರಭುಸ್ವಾಮಿ ರೇವಮ್ಮ ಕೆಂಚೇಗೌಡ ಜಯಲಕ್ಷ್ಮಿ ಮಾಜಿ ಗ್ರಾಮಪಂಚ ಸದಸ್ಯ ಅಡಕನಹಳ್ಳಿ ಮಾದಪ್ಪ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ವಿವಿಧ ಸಂಘ ಸಂಸ್ಥೆಯ ಮಹಿಳಾ ಅಧಿಕಾರಿಗಳು ಆಶಾ ಮತ್ತು ಅಂಗನವಾಡಿ ಸಹಾಯಕರು ಮಹಿಳಾ ಸ್ವಸಹಾಯ ಸಂಘದವರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಇದೇ ವೇಳೆ ಮಾತನಾಡಿದ ಮಹಿಳೆಯರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾರಿಗೆ ತಂದಿರುವ ಗೃಹಲಕ್ಷ್ಮಿ ಯೋಜನೆ ರಾಜ್ಯದ ಮಧ್ಯಮ ವರ್ಗದ ಜನರಿಗೆ ಬಡ ಮಹಿಳೆಯರಿಗೆ ತುಂಬಾ ಅನುಕೂಲವಾಗಿದೆ ಕೆಲ ಮಹಿಳೆಯರು ಮಾಧ್ಯಮಗಳಲ್ಲಿ ನಮಗೆ ಈ ಯೋಜನೆ ಹಣ ಬೇಡ ಎಂದು ಹೇಳುತ್ತಿದ್ದಾರೆ ಆದರೆ ಈ ಯೋಜನೆಯಿಂದ ಶೇಕಡ 80 ರಷ್ಟು ಮಹಿಳೆಯರು ಜೀವನ ನಡೆಸಿಕೊಂಡು ಬರುತ್ತಿದ್ದಾರೆ ಈ ಯೋಜನೆ ತುಂಬಾ ಉಪಯೋಗವಾಗಿದೆ ಇದನ್ನು ನಿಲ್ಲಿಸಬಾರದು ಎಂದು ಮನವಿ ಮಾಡಿಕೊಂಡರು

ಮಹಿಳಾ ದಿನಾಚರಣೆ ಮತ್ತು ಮಹಿಳಾ ಗ್ರಾಮ ಸಭೆ ಯನ್ನು ಹಮ್ಮಿಕೊಳ್ಳಲಾಗಿತ್ತು.. ಮಾನ್ಯ ಅಕಔ ಮತ್ತು ಕಆ ಪ್ರಭುಸ್ವಾಮಿ ಸದಸ್ಯರುಗಳು ಕಆಔ ಸರ್ ಮತ್ತು ಪಂಚಾಯಿತಿ ಸಿಬ್ಬಂದಿಗಳು, ಓಖಐಒ ಖಿಕಒ ದಿವ್ಯ ಮೇಡಂ ಸಿಬ್ಬಂದಿಗಳು, ಒಃಎ, ಕೃಷಿ ಸಖಿ ಮತ್ತು ಪಶು ಸಖಿ ಹಾಗೂ ಸಂಜೀವಿನಿ ಒಕ್ಕೂಟದ ಮಹಿಳಾ ಸ್ವ ಸಹಾಯ ಸಂಘದ 120 ಕ್ಕೂ ಹೆಚ್ಚು ಸದಸ್ಯರುಗಳು ಭಾಗವಹಿಸಿದರು.



# ಅಕ್ಕಿಯ ಬದಲು ನೀಡುತ್ತಿದ ಡಿಬಿಟಿ ಹಣದ ಬದಲು ಅಕ್ಕಿ

**ಚಾಮರಾಜನಗರ:** ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ 5 ಕೆಜಿ ಅಕ್ಕಿಯ ಬದಲಾಗಿ ನೀಡಲಾಗುತ್ತಿದ್ದ ಹಣದ ಬದಲು ಫೆಬ್ರವರಿ ಮಾಹೆಯಿಂದಲೇ ಅನ್ವಯವಾಗುವಂತೆ ಹೆಚ್ಚುವರಿಯಾಗಿ 5 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ ಎಂದು ಆಹಾರ ಇಲಾಖೆ ತಿಳಿಸಿದೆ. ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ 5 ಕೆಜಿಯ ಅಕ್ಕಿ ಬದಲಾಗಿ ಪ್ರತಿ ಕೆಜಿಗೆ 34 ರೂ ರಂತೆ ಪ್ರತಿ ಸದಸ್ಯರಿಗೆ 170 ರೂ. ಗಳನ್ನು 2023ರ ಜುಲೈ ಮಾಹೆಯಿಂದ ಜನವರಿ 2025ರ ಮಾಹೆಗೆ ಪ್ರತಿ ತಿಂಗಳು ಡಿಬಿಟಿ ಮೂಲಕ ಹಣ ಜಮೆ ಮಾಡಲಾಗುತ್ತಿತ್ತು. ಪ್ರಸ್ತುತ ಫೆಬ್ರವರಿ 2025ರ ಮಾಹೆಯಿಂದಲೇ ಡಿಬಿಟಿ ಹಣದ ಬದಲಾಗಿ ಹೆಚ್ಚುವರಿಯಾಗಿ 5 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ.ಮಾರ್ಚ್ 2025ರ ಮಾಹೆಯಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿಯಲ್ಲಿ ಪ್ರತಿ ಸದಸ್ಯರಿಗೆ 5 ಕೆಜಿ ಅಕ್ಕಿಯ ಜೊತೆಗೆ ಅನ್ನಭಾಗ್ಯ ಯೋಜನೆಯ 5 ಕೆಜಿ ಅಕ್ಕಿ ಸೇರಿ ಒಟ್ಟು 10 ಕೆಜಿ ಅಕ್ಕಿಯನ್ನು ಪ್ರತಿ ಸದಸ್ಯರಿಗೆ ವಿತರಿಸಲಾಗುತ್ತದೆ. ಫೆಬ್ರವರಿ ಮತ್ತು ಮಾರ್ಚ್ ಮಾಹೆ ಸೇರಿ ಮಾರ್ಚ್ ತಿಂಗಳಿನಲ್ಲಿ ಅಂತ್ಯೋದಯ ಪಡಿತರ ಚೀಟಿದಾರರ ಒಂದರಿಂದ ಮೂವರು ಸದಸ್ಯರಿರುವ ಕುಟುಂಬಕ್ಕೆ 35 ಕೆಜಿ ಅಕ್ಕಿ, ನಾಲ್ಕು ಸದಸ್ಯರ ಕುಟುಂಬಕ್ಕೆ 45 ಕೆಜಿ, ಐವರು ಸದಸ್ಯರ ಕುಟುಂಬಕ್ಕೆ 65 ಕೆಜಿ, ಆರು ಸದಸ್ಯರ ಕುಟುಂಬಕ್ಕೆ 85 ಕೆಜಿ, ಏಳು ಸದಸ್ಯರ ಕುಟುಂಬಕ್ಕೆ 105 ಕೆಜಿ, ಎಂಟು ಸದಸ್ಯರ ಕುಟುಂಬಕ್ಕೆ 125 ಕೆಜಿ, ಒಂಭತ್ತು ಸದಸ್ಯರ ಕುಟುಂಬಕ್ಕೆ 145 ಕೆಜಿ, 10 ಸದಸ್ಯರ ಕುಟುಂಬಕ್ಕೆ 165 ಕೆಜಿ ಅಕ್ಕಿ ವಿತರಣೆ ಮಾಡಲಾಗುತ್ತದೆ. ಫೆಬ್ರವರಿ ಮತ್ತು ಮಾರ್ಚ್ ಮಾಹೆ ಸೇರಿ ಮಾರ್ಚ್ ತಿಂಗಳಿನಲ್ಲಿ ಬಿಪಿಎಲ್ ಪಡಿತರ ಚೀಟಿದಾರ ಕುಟುಂಬಕ್ಕೆ ಓರ್ವ ಸದಸ್ಯರಿಗೆ 15 ಕೆಜಿ ಅಕ್ಕಿ, ಇಬ್ಬರು ಸದಸ್ಯರ ಕುಟುಂಬಕ್ಕೆ 30 ಕೆಜಿ, ಮೂವರು ಸದಸ್ಯರ ಕುಟುಂಬಕ್ಕೆ 45 ಕೆಜಿ, ನಾಲ್ಕು ಸದಸ್ಯರ ಕುಟುಂಬಕ್ಕೆ 60 ಕೆಜಿ, ಐದು ಸದಸ್ಯರ ಕುಟುಂಬಕ್ಕೆ 75 ಕೆಜಿ, ಆರು ಸದಸ್ಯರ ಕುಟುಂಬಕ್ಕೆ 90 ಕೆಜಿ, ಏಳು ಸದಸ್ಯರ ಕುಟುಂಬಕ್ಕೆ 105 ಕೆಜಿ, ಎಂಟು ಸದಸ್ಯರ ಕುಟುಂಬಕ್ಕೆ 120 ಕೆಜಿ, ಒಂಭತ್ತು ಸದಸ್ಯರ ಕುಟುಂಬಕ್ಕೆ 135 ಕೆಜಿ ಹಾಗೂ 10 ಸದಸ್ಯರ ಕುಟುಂಬಕ್ಕೆ 150 ಕೆಜಿ ಅಕ್ಕಿ ವಿತರಣೆ ಮಾಡಲಾಗುತ್ತದೆ.



# ಯೋಗನರಸಿಂಹ ದೇವಸ್ಥಾನಕ್ಕೆ ನೀರಿನ ಮಡಕೆ ವಿತರಣೆ

**ಮೈಸೂರು:** ಮೈಸೂರಿನಲ್ಲಿ ಹಲವಾರು ಸಾಮಾಜಿಕ ಕಾರ್ಯ ಮಾಡುತ್ತ ಬಂದಿರುವ ಸಬ್ ಕಾ ಸಾತ್ ಸಂಸ್ಥೆಯು ಇಂದು ವಿಜಯನಗರದ ಯೋಗನರಸಿಂಹ ಸ್ವಾಮೀ ದೇವಸ್ಥಾನಕ್ಕೆ ಬೇಸಿಗೆ ಹಿನ್ನೆಲೆಯಲ್ಲಿ ದಣಿವರಿದು ಬರುವ ಭಕ್ತರ ಅನುಕೂಲಕ್ಕಾಗಿ ನೀರಿನ ಮಣ್ಣಿನ ಮಡಕೆಗಳನ್ನು ಕೊಡುಗೆಯಾಗಿ ನೀಡಿದರು. ಮಣ್ಣಿನ ಮಡಕೆಯ ನೀರು ತಂಪಾಗಿ ಇರುವುದರಿಂದ ಬೇಸಿಗೆಯಲ್ಲಿ ಭಕ್ತರಿಗೆ ಅನುಕೂಲವಾಗಿತ್ತದೆ ಎನ್ನುವುದು ಸಂಸ್ಥೆಯ ಆಶಯವಾಗಿದೆ,ಇದೆ ಸಂಧರ್ಭದಲ್ಲಿ ಯೋಗನರಸಿಂಹ ಸ್ವಾಮಿ ದೇವಸ್ಥಾನದ ಶ್ರೀನಿವಾಸನ್ ಗುರೂಜಿ, ಸಬ್ ಕಾ ಸಾತ್ ಸಂಸ್ಥೆಯ ಮನಿಷ್ ಮುನೋತ್, ನರೇಶ್ ಬಂಡಾರಿ, ಉಜ್ವಲ್ ಪಾಲರೇಚ, ಅನಿಲ್ , ಜನಕ್ ಸಿಂಗ್ ಭಾಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.




**ಮಹಾಲಕ್ಷ್ಮಿಪುರಂ ರಾಣಿ ಅಬ್ಬಕ್ಕ ಆಟದ ಮೈದಾನದಲ್ಲಿ ರಾಣಿ ಅಬ್ಬಕ್ಕ ಪ್ರತಿಷ್ಠಾನ ಹಮ್ಮಿಕೊಂಡಿದ್ದ ರಾಣಿ ಅಬ್ಬಕ್ಕ ಉತ್ಸವ 2025 ಕ್ರೀಡೋತ್ಸವ ಸಾಂಸ್ಕೃತಿಕ ವೈಭವ ಮತ್ತು ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಅನಂತ್ ಕುಮಾರ್ ತೇಜಸ್ವಿ, ಹಾಗೂ ರಾಣಿ ಅಬ್ಬಕ್ಕ ವಂಶಸ್ಥರಾದ ಅನಿತಾ ಸುರೇಂದ್ರ, ರವರಿಗೆ ವಿಧಾನಸಭಾ ಅಧ್ಯಕ್ಷ ಯು ಟಿ ಖಾದರ್ ಸನ್ಮಾನಿಸಿದರು . ಕಾರ್ಯಕ್ರಮದಲ್ಲಿ ಮಾಜಿ ಸಚಿವರು ಹಾಗೂ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯ, ಪಾಲಿಕೆ ಮಾಜಿ ಉಪ ಮೇಯರ್ ಗಳಾದ ಹೇಮಲತಾ ಗೋಪಾಲಯ, ಎಸ್ ಹರೀಶ್ ಕಾರ್ಮಿಕ ಮುಖಂಡ ಫೆಲಿಕ್ಸ್ ಡಿ ಸೋಜಾ ಭರತ್ ಬ್ಯಾಂಕ್ ಛೇರ್ಮನ್ ಸೂರ್ಯಕಾಂತ್ ಸುವರ್ಣ ಕಾರ್ಯಕ್ರಮದ ಆಯೋಜಕ ರಾಜೇಂದ್ರ, ಕುಮಾರ್ ಸ್ಥಳೀಯ ಮುಖಂಡರುಗಳಾದ ಬಿ ಡಿ ಶ್ರೀನಿವಾಸ್, ಪ್ರೀತಿ ಡಾ. ಮಂಜುನಾಥ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.**

# ದ್ವಾದಶ ಜ್ಯೋತಿರ್ಲಿಂಗಗಳ ದರ್ಶನ

**ನಾಗಮಂಗಲ:** ಶ್ರೀಕ್ಷೇತ್ರದ ಆದಿಶಕ್ತಿ ಭವನ, ಆದಿಚುಂಚನಗಿರಿ ಆವರಣದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ, ನಾಗಮಂಗಲ, ಮೈಸೂರು ಉಪವಲಯ ವತಿಯಿಂದ ಆಯೋಜಿಸಲಾಗಿರುವ ಭಾರತದ ಪ್ರಸಿದ್ಧ ದ್ವಾದಶ ಜ್ಯೋತಿರ್ಲಿಂಗಗಳ ದರ್ಶನ ಹಾಗೂ 21 ಅಡಿ ಎತ್ತರದ ಐಇಆ ಪ್ರಕಾಶಮಯ ಶಿವಲಿಂಗ ದರ್ಶನ ಉದ್ಘಾಟನೆ ಮಾಡಲಾಯಿತು ತಾಲೂಕಿನ ಆದಿಚುಂಚನಗಿರಿಯಲ್ಲಿ ಜಾತ್ರಾ ಮಹೋತ್ಸವದ ಅಂಗವಾಗಿ ಪ್ರಜಾಪಿತ ಬ್ರಹ್ಮಕುಮಾರಿ ಸಂಸ್ಥೆ ವತಿಯಿಂದ 21ಅಡಿ ಎತ್ತರದ ಶಿವಲಿಂಗ ದರ್ಶನ ಉದ್ಘಾಟನೆಯನ್ನು ಪರಮಪೂಜ್ಯ ಮಹಾಸ್ವಾಮೀಜಿಗಳವರು ನೆರವೇರಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು ಶ್ರೀ ಕ್ಷೇತ್ರ ಆದಿಚುಂಚನಗಿರಿ ಉಪಸ್ಥಿತರಿದ್ದರು.

# ರಾಷ್ಟ್ರೀಯ ಲೋಕ ಅದಾಲತ್

**ಮೈಸೂರು:** ಮಾನ್ಯ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ನವದೆಹಲಿ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ರವರ ನಿರ್ದೇಶನದಂತೆ ಮೈಸೂರು ಜಿಲ್ಲೆಯನ್ನೊಳಗೊಂಡಂತೆ ರಾಜ್ಯಾದ್ಯಂತ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿಯಿರುವ ಪ್ರಕರಣಗಳಲ್ಲಿ ಕಾನೂನಿನ ಪ್ರಕಾರ ರಾಜಿಯಾಗಬಹುದಾದ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸುವ ಉದ್ದೇಶದಿಂದ ರಾಷ್ಟ್ರೀಯ ಲೋಕ್ ಅದಾಲತ್ ನ್ನು ಹಮ್ಮಿಕೊಳ್ಳಲಾಗಿತ್ತು

ಮೈಸೂರು ನಗರ ಮತ್ತು ತಾಲ್ಲೂಕುಗಳಲ್ಲಿನ ನ್ಯಾಯಾಲಯಗಳಲ್ಲಿ ಒಟ್ಟು 1,22,125 ಪ್ರಕರಣಗಳು ವಿಚಾರಣೆಗೆ ಬಾಕಿಯಿದ್ದು, ಅವುಗಳ ಪೈಕಿ 61,193 ಸಿವಿಲ್ ಪ್ರಕರಣಗಳು ಹಾಗೂ 60,932 ಕ್ರಿಮಿನಲ್ ಪ್ರಕರಣಗಳಿದ್ದು, ಪ್ರಸ್ತುತ ಸದರಿ ಪ್ರಕರಣಗಳಲ್ಲಿ 37,816 ಪ್ರಕರಣಗಳನ್ನು ರಾಜಿಯಾಗಬಹುದಾದ ಪ್ರಕರಣಗಳಿದ್ದು, ಅವುಗಳ ಪೈಕಿ 21,646 ರಾಜಿ ಸಂಧಾನಕ್ಕಾಗಿ ತೆಗೆದುಕೊಳ್ಳಲಾಗಿತ್ತು. ರಾಜಿ ಸಂಧಾನಕ್ಕಾಗಿ ತೆಗೆದುಕೊಂಡ ಪ್ರಕರಣಗಳಲ್ಲಿ (ನ್ಯಾಯಾಲಯದಲ್ಲಿ ಬಾಕಿ ಇರುವ) 7,268 ಪ್ರಕರಣಗಳನ್ನು ಪ್ರಕರಣಗಳನ್ನು ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಇತ್ಯರ್ಥಪಡಿಸಲಾಗಿರುತ್ತದೆ.

ಈ ಬಾರಿ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಕೌಟುಂಬಿಕ ವಿವಾದದ ಪ್ರಕರಣಗಳಲ್ಲಿ ಮೈಸೂರು ನಗರ ಹಾಗೂ ಮೈಸೂರು ತಾಲ್ಲೂಕು ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ಒಟ್ಟು 41 ದಂಪತಿಗಳು ತಮ್ಮ ಮಧ್ಯದ ವಾಜ್ಯಗಳನ್ನು ಬಗೆಹರಿಸಿಕೊಂಡು ಒಂದಾಗಿರುತ್ತಾರೆ.

ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಟ್ಟಾರೆಯಾಗಿ 7,268 ನ್ಯಾಯಾಲಯದಲ್ಲಿ ಬಾಕಿಯಿದ್ದ ಪ್ರಕರಣಗಳು ತೀರ್ಮಾನವಾಗಿರುತ್ತದೆ. ಎಲ್ಲಾ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜಿ ಸಂಧಾನ ಮೂಲಕ ಒಟ್ಟು ರೂ.49,66,29,267/–ಗಳು ಇತ್ಯರ್ಥವಾಗಿರುತ್ತದೆ. ಈ ಯಶಸ್ಸಿಗೆ ಸಹಕರಿಸಿದ ವಕೀಲರ ಸಂಘದ ಪದಾಧಿಕಾರಿಗಳು, ಎಲ್ಲಾ ವಕೀಲರುಗಳು ಹಾಗೂ ಕಕ್ಷಿಗಾರರು, ಪೊಲೀಸ್ ಇಲಾಖೆಯನ್ನೊಳಗೊಂಡಂತೆ ಎಲ್ಲಾ ಇಲಾಖೆಗಳು ಹಾಗೂ ಮಾಧ್ಯಮ ಮಿತ್ರರುಗಳಿಗೆ ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀಮತಿ ಉಷಾರಾಣಿ ಕೃತಜ್ಞತೆಯನ್ನು ಸಲ್ಲಿಸಿದರು.



# ಸೇವಾ ಸಾಧಕ ಮಹಿಳೆಯರಿಗೆ ಸನ್ಮಾನ

**ಮೈಸೂರು:** ನಗರದ ಜನನಿ ಸೇವಾ ಟ್ರಸ್ಟ್ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಮಹಾನಗರಪಾಲಿಕೆ ಮಾಜಿ ಸದಸ್ಯರಾದ ದಿ.ಕೆ. ಕಮಲಮ್ಮ 15ನೇ ವರ್ಷದ ಸ್ಮರಣೆಯ ಪ್ರಯುಕ್ತ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ 13 ಮಹಿಳೆಯರನ್ನು ಶನಿವಾರ ಗೌರವಪೂರ್ವಕವಾಗಿ ಸನ್ಮಾನಿಸ ಲಾಯಿತು.

ನಗರದ ಪತ್ರಕರ್ತರ ಭವನದಲ್ಲಿ ಹಮ್ಮಿ ಕೊಂಡಿದ್ದ ಕಾರ್ಯಕ್ರಮದಲ್ಲಿ ದಾಸಪ್ಪ ವಿಚಾರ ಸಂಸ್ಥೆಯ ಕಾರ್ಯದರ್ಶಿ ಹಾಗೂ ಮಾಜಿ ಸಂಸದ ತುಳಸೀದಾಸಪ್ಪ ಅವರ ಪತ್ನಿ ಸರೋಜ ತುಳಸೀದಾಸ್ ಮತ್ತು ವಿಶ್ರಾಂತ ಪ್ರಾಧ್ಯಾಪಕ ರಾದ ಡಾ.ಎಸ್.ಪಿ.ಉಮಾದೇವಿ ಅವರು ಮಹಿಳೆಯರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ಅವರು, ಮನುಸ್ಮೃತಿಯ ಹಿಡಿತದಲ್ಲಿ ಸಿಲುಕಿ ಒದ್ದಾಡುತ್ತಿದ್ದ ಮಹಿಳೆಯರ ಸಬಲೀಕರಣ ಕ್ಕಾಗಿ ಶ್ರಮಿಸಿದವರಲ್ಲಿ ಇಬ್ಬರು ಮಹನೀಯರು ಚರಿತ್ರಾರ್ಹರಾಗಿದ್ದಾರೆ. ಆ ಪೈಕಿ 12ನೇ ಶತಮಾನದಲ್ಲಿ ಬಸವಣ್ಣ. 20ನೇ ಶತಮಾನದಲ್ಲಿ ಡಾ.ಬಿ.ಆರ್.ಅಂಬೇಡ್ಕರ್. ಅವರು ಮಹಿಳೆಯರ ಸಾಧನೆಗೆ ಸ್ಫೂರ್ತಿ ತುಂಬಿದ ಮಹಾನ್ ದಾರ್ಶನಿಕರಾಗಿದ್ದಾರೆ ಎಂದು ಹೇಳಿದರು.

**ಸನ್ಮಾನಿತರು:** ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಪೌರಕಾರ್ಮಿಕರಾದ ಈ.ಬನ್ನಮ್ಮ, ಸಮಾಜ ಸುಶೀಲ ನಂಜಪ್ಪ, ಸಹಕಾರಿ ಧುರೀಣರಾದ ರಾಜೇಶ್ವರಿ, ಸರ್ಕಾರಿ ಅಭಿ ಯೋಜಕರಾದ ಕೆ.ಬಿ.ಜಯಂತಿ, ಪೊಲೀಸ್ ಇಲಾಖೆಯ ಎಂ.ಬಿ.ಗೀತಾ, ಅಂಚೆ ಇಲಾ ಖೆಯ ಎಚ್.ಜಿ.ಗೀತಾ, ಅಂತಾರಾಷ್ಟ್ರೀಯ ಕ್ರೀಡಾಪಟು ಎಸ್.ಎಂ.ಉಮಾ, ಆಟೋರಿಕ್ಷಾ ಚಾಲಕರಾದ ಸೌಮ್ಯ, ವಾರ್ತಾ ಇಲಾಖೆ ಯ ಗಾಯತ್ರಿ, ಪ್ರಾಥಮಿಕ ಆರೋಗ್ಯ ಸಂರಕ್ಷಣಾಧಿಕಾರಿ ಅನಸೂಯ, ಯೋಗ ಶಿಕ್ಷಕರಾದ ಎಂ.ಕೆ. ಶೋಭಾ, ಹರಿಕಥಾ ವಿದ್ವಾಂಸರಾದ ಮಾಲಿನಿ ಅಯ್ಯರ್, ಸಾಹಸ ಮಹಿಳೆ ರಶ್ಮಿ ರಾಘವೇಂದ್ರ, ಅವರನ್ನು ಸನ್ಮಾನಿಸಲಾಯಿತು. ಮೊದಲಿಗೆ ದಿ.ಕಮಲಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಲಾಯಿತು. ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ರಾಜ್ಯ ಉಪಾಧ್ಯಕ್ಷರಾದ ಡಾ.ಸುಜಾತ ಎಸ್.ರಾವ್, ಜನನಿ ಸೇವಾ ಟ್ರಸ್ಟ್‌ನ ಅಧ್ಯಕ್ಷ ಎಂ.ಕೆ.ಅಶೋಕ, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್, ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಆರ್.ಸೌಮ್ಯ ಅಶೋಕ, ಆರ್.ನಂದಿನಿ, ಗೌರವ್ ಸುಧಾ ಮುರಳಿ ಮತ್ತಿತರರು ಹಾಜರಿದ್ದರು.



ಸಂಜೆ ಮುಗಿಲು
ಸೋಮವಾರ 10.3.2025

# ಸಂಜೆ ಟಿಪ್ಸ್

## ಬ್ಯಾಂಕರ್ಸ್ ಕನ್ನಡಿಗರ ಬಳಗದಿಂದ ವಿದ್ಯಾರ್ಥಿಗಳಿಗೆ ಪುಸ್ತಕ ಉಡುಗೊರೆ

ರಾಯಚೂರು ಜಿಲ್ಲೆಯ ಗಿಲ್ಲೆಸೂಗೂರು ಗ್ರಾಮದ ಸರಕಾರಿ ಪ್ರೌಢಶಾಲೆಗೆ ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗದ ವತಿಯಿಂದ ಕನ್ನಡ ಪುಸ್ತಕಗಳನ್ನು ಉಡುಗೊರೆಯಾಗಿ ನೀಡಲಾಯಿತು. ಪಂಜಾಬ್ ಮತ್ತು ಸಿಂಧ್ ಬ್ಯಾಂಕ್ ನ ನಿವೃತ್ತ ಕಾರ್ಯನಿರ್ವಾಹಕ ನಿರ್ದೇಶಕ ಕೊಳ್ಳೇಗಾಲ ರಾಘವೇಂದ್ರ ರವರು ಪುಸ್ತಕಗಳನ್ನು ಶಾಲೆಯ ಮುಖ್ಯ ಉಪಾಧ್ಯಾಯಿನಿ ಲಕ್ಷ್ಮೀ ರವರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಬಳಗದ ಅಧ್ಯಕ್ಷ ಶ್ರೀ ಎಂ ವೆಂಕಟೇಶ ಶೇಷಾದ್ರಿ, ರವರು ಉಪಸ್ಥಿತರಿದ್ದರು.



## ನಿಮಗಿದು ಗೊತ್ತೇ?

**ಎಂ. ವೆಂಕಟೇಶ್ ಶೇಷಾದ್ರಿ**

**60. ಶ್ರೀ ಮಾಸ್ತಿ ವೆಂಕಟೇಶ ಅಯ್ಯಂಗಾರ್ ರವರು ಅವರೇ ನಡೆಸುತ್ತಿದ್ದ ಪತ್ರಿಕೆಯ ಹೆಸರೇನು ?**

ಉತ್ತರ : ಜೀವನ

## ಮಟನ್ ಬೋಟಿಗೊಜ್ಜು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬೋಟಿ-500 ಗ್ರಾಂ, ತುರಿದ ತೆಂಗಿನಕಾಯಿ- 1 ಚಮಚ, ಕೊತ್ತಂಬರಿ ಪುಡಿ- 1 ಚಮಚ, ಅರಿಶಿನ ಪುಡಿ-ಅರ್ಧ ಚಮಚ, ಶುಂಠಿ-ಬೆಳ್ಳುಳ್ಳಿ ಪೇಸ್ಟ್ -1 ಚಮಚ, ಗರಂ ಮಸಾಲಾ ಪುಡಿ-2 ಚಮಚ, ಎಣ್ಣೆ - 1 ಚಮಚ, ಕೆಂಪು ಮೆಣಸಿನ ಪುಡಿ- 1 ಚಮಚ, ಕಟ್ ಮಾಡಿದ ಕೊತ್ತಂಬರಿ ಸೊಪ್ಪು -1 ಕಪ್, ಕಟ್ ಮಾಡಿದ ಈರುಳ್ಳಿ - 1 ಕಪ್, ಲವಂಗ - 2, ಏಲಕ್ಕಿ - 1, ಚಿಕ್ಕ ಗಾತ್ರದ ದಾಲ್ಚಿನ್ನಿ - 1, ಅಗತ್ಯವಿರುವಷ್ಟು ನೀರು, ರುಚಿಗೆ ತಕ್ಕಷ್ಟು ಉಪ್ಪು.

### ಮಾಡುವ ವಿಧಾನ

ಮೊದಲಿಗೆ ಬಿಸಿಯಾದ ನೀರಿನಲ್ಲಿ ಬೋಟಿಯನ್ನು ಚೆನ್ನಾಗಿ ಸ್ವಚ್ಛಗೊಳಿಸಿ, ಕಟ್ ಮಾಡಿಕೊಂಡು ಪಕ್ಕಕ್ಕೆ ಇಟ್ಟುಕೊಳ್ಳಬೇಕು. ಕಟ್ ಮಾಡಿಕೊಂಡಿದ್ದ ಬೋಟಿಗೆ ಉಪ್ಪು, ಸ್ವಲ್ಪ ಅರಿಶಿನ ಬೆರೆಸಿ ಕುಕ್ಕರ್ನಲ್ಲಿ 5 ವಿಜಿಲ್ ಕೂಗಿಸಿಕೊಳ್ಳಬೇಕು. ಬಳಿಕ ಬೇರೆ ಪ್ಯಾನ್ಗೆ ಎಣ್ಣೆ ಹಾಕಿ, ಅದಕ್ಕೆ ಲವಂಗ, ದಾಲ್ಚಿನ್ನಿ, ಏಲಕ್ಕಿ ಬೀಜಗಳನ್ನು ಸೇರಿಸಿ ಫ್ರೈ ಮಾಡಿಕೊಳ್ಳಬೇಕು. ನಂತರ ಕಟ್ ಮಾಡಿದ ಈರುಳ್ಳಿ, ಶುಂಠಿ ಬೆಳ್ಳುಳ್ಳಿ ಪೇಸ್ಟ್, ಅರಿಶಿನ ಪುಡಿ, ಬೋಟಿ ಮತ್ತು ಉಪ್ಪು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಅದಕ್ಕೆ ನೀರು ಹಾಕಿ ಬೇಯಿಸಿಕೊಳ್ಳಬೇಕು.

ನಂತರ ಬೋಟಿ ಗೊಜ್ಜುಗೆ ಕೊತ್ತಂಬರಿ ಪುಡಿ, ತೆಂಗಿನಕಾಯಿ ತುರಿ, ಕೆಂಪು ಮೆಣಸಿನ ಪುಡಿ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಬೇಕು. ನಂತರ ಗರಂ ಮಸಾಲಾ ಪುಡಿ, ಕೊತ್ತಂಬರಿ ಸೊಪ್ಪುಗಳನ್ನು ಸೇರಿಸಿ ಕೊಂಚ ನೀರು ಬೆರಸಿ ಚೆನ್ನಾಗಿ ಕುದಿಸಿದರೆ ಬೋಟಿ ಗೊಜ್ಜು ಸವಿಯಲು ಸಿದ್ಧವಾಗಿರುತ್ತದೆ.

# ಕನ್ನಡ ಸಿನಿಮಾದಲ್ಲಿ ಬಾಲಿವುಡ್‌ನ ಖ್ಯಾತ ನಿರ್ದೇಶಕ ಅನುರಾಗ್ ಕಶ್ಯಪ್!

ದಕ್ಷಿಣ ಸಿನಿರಂಗದತ್ತ ಬಾಲಿವುಡ್ ತಾರಾದಂಡು ಒಬ್ಬೊಬ್ಬರಾಗಿ ಹೆಜ್ಜೆ ಹಾಕುತ್ತಿರುವುದು ಹೊಸ ವಿಷಯವಲ್ಲ. ಈಗಾಗಲೇ ಅನೇಕ ಸಿನಿಮೇಕರ್ಸ್, ಸ್ಟಾರ್ಸ್ ಕಾಲಿವುಡ್, ಸ್ಯಾಂಡಲ್ ವುಡ್, ಟಾಲಿವುಡ್ ನಲ್ಲಿ ಧೂಳ್ ಎಬ್ಬಿಸುತ್ತಿದ್ದಾರೆ. ಇದೀಗ ಹೊಸ ಸೇರ್ಪಡೆ ಬಾಲಿವುಡ್ ಖ್ಯಾತ ನಿರ್ದೇಶಕ ಅನುರಾಗ್ ಕಶ್ಯಪ್.

ಅನುರಾಗ್ ಕಶ್ಯಪ್ ದಕ್ಷಿಣದ ಕಡೆಗೆ ಬಂದಾಗಿದೆ. ತಮಿಳಿನ ಮಹಾರಾಜ ಚಿತ್ರದಲ್ಲಿ ಅದ್ಭುತ ಪಾತ್ರದಲ್ಲಿ ಗಮನಸೆಳೆದಿದ್ದಾರೆ.ಈ ಮೂಲಕ ತಮಿಳು ಪ್ರೇಕ್ಷಕರನ್ನ ರಂಜಿಸಿದ್ದಾರೆ. ತೆಲುಗಿನ ಡಕಾಯಿತ್ ಚಿತ್ರದಲ್ಲಿ ಕಪಟ ಪೊಲೀಸ್ ಆಫೀಸರ್ ನಟಿಸಿರುವ ಅವರೀಗ ಕನ್ನಡ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಹಾಸ್ಯ ನಟ-ನಿರ್ದೇಶಕ ಸುಜಯ್ ಶಾಸ್ತ್ರಿ ಈ ಚಿತ್ರವನ್ನ ಡೈರೆಕ್ಷನ್ ಮಾಡುತ್ತಿದ್ದಾರೆ. ಈ ಮೂಲಕ ಒಂದು ಒಳ್ಳೆ ಕಥೆಯನ್ನ ಹೇಳುತ್ತಿದ್ದಾರೆ.

8 ಸಿನಿಮಾದ ಟೈಟಲ್ ಲಾಂಚ್ ಕಾರ್ಯಕ್ರಮ ಬೆಂಗಳೂರಿನಲ್ಲಿ ನಿನ್ನೆ ನಡೆಯಿತು. ಈ ವೇಳೆ ನಿರ್ದೇಶಕ ಕಂ ನಟ ಅನುರಾಗ್ ಕಶ್ಯಪ್ ಮಾತನಾಡಿ, ಇದೊಂದು ಎಮೋಷನಲ್ ಕಥೆ. ಜೀವನ ಎಲ್ಲರಿಗೂ ಎರಡನೇ ಅವಕಾಶ ನೀಡುತ್ತದೆ. ಈ ಚಿತ್ರ ಕೂಡ ಅದನ್ನೇ ಹೇಳುತ್ತದೆ. ಅರವಿಂದ್ ಹಾಗೂ ಸುಜಯ್ ಶಾಸ್ತ್ರೀಗೆ ಧನ್ಯವಾದ ಎಂದರು.

ಕನ್ನಡದ '8' ಎಂಬ ಚಿತ್ರದಲ್ಲಿ ಅನುರಾಗ್ ಕಶ್ಯಪ್ ನಟಿಸುತ್ತಿದ್ದಾರೆ. ಹಾಸ್ಯನಟ ಸುಜಯ್ ಶಾಸ್ತ್ರೀ ಈ ಚಿತ್ರದ ಸಾರಥಿ. ಎವಿಆರ್ ಎಂಟರ್‌ಟೈನ್‌ಮೆಂಟ್ ಬ್ಯಾನರ್ ಅಡಿಯಲ್ಲಿ ಅರವಿಂದ್ ವೆಂಕಟೇಶ್ ರೆಡ್ಡಿ ಚಿತ್ರಕ್ಕೆ ಹಣ ಹೂಡುತ್ತಿದ್ದಾರೆ.ಫುಟ್‌ಬಾಲ್ ಆಟದ ಸುತ್ತ ನಡೆಯುವ ಕಥೆ '8' ಚಿತ್ರದಲ್ಲಿದೆ.

ಕನ್ನಡ ಚಿತ್ರರಂಗಕ್ಕೆ ಸದಾ ಅಭಿರುಚಿ ಸಿನಿಮಾಗಳನ್ನು ನೀಡುವ ಉದ್ದೇಶದಿಂದ ಶುರುವಾಗಿರುವ ಎವಿಆರ್ ಚೊಚ್ಚಲ ಕಾಣಿಕೆ 8. ಅರವಿಂದ್ ರೆಡ್ಡಿ ನಿರ್ಮಾಣದಲ್ಲಿ ಈ ಸಿನಿಮಾ ಮೂಡಿ ಬರಲಿದೆ. ಈ ಚಿತ್ರದ ಜೊತೆಗೆ ಸಿಂಪಲ್ ಸುನಿ ಜೊತೆಗೂ ಎವಿಆರ್ ಕೈ ಜೋಡಿಸಿದೆ. ಬಿಗ್ ಬಾಸ್ ಖ್ಯಾತಿಯ ಮಹೇಶ್ ಕಾರ್ತಿಕ್ ನಾಯಕನಾಗಿ ನಟಿಸಲಿರುವ ಈ ಸಿನಿಮಾ ಈಗಾಗಲೇ ಘೋಷಣೆಯಾಗಿದೆ. ಸದ್ಯ 8 ಸಿನಿಮಾದ ಚಿತ್ರೀಕರಣ ಬೆಂಗಳೂರಿನಲ್ಲಿ ಭರದಿಂದ ಸಾಗುತ್ತಿದೆ.






## ಮಶ್ರೂಮ್ ಲಾಭಗೊತ್ತೇ?



ಮಶ್ರೂಮ್ ತುಂಬಾ ಟೇಸ್ಟಿ ಮತ್ತು ಪೌಷ್ಟಿಕಾಂಶದ ಆಹಾರವಾಗಿದೆ. ಇದನ್ನು ಅನೇಕ ಪಾಕವಿಧಾನಗಳಲ್ಲಿ ಸೇರಿಸಲಾಗಿದೆ. ಆದಾಗ್ಯೂ ನಮ್ಮ ದೇಹಕ್ಕೆ ಬಹಳ ಅವಶ್ಯಕವಾದ ಇಂತಹ ಅನೇಕ ಪೋಷಕಾಂಶಗಳು ಇದರಲ್ಲಿ ಕಂಡುಬರುತ್ತವೆ. ಇದರಿಂದ ಆರೋಗ್ಯಕ್ಕೆ ಅಪಾರ ಪ್ರಯೋಜನಗಳಿವೆ.

ಪೋಷಕಾಂಶಗಳಲ್ಲಿ ಸಮೃದ್ಧವಾಗಿದೆ. ಅಣಬೆಯಲ್ಲಿ ಪ್ರೋಟೀನ್, ವಿಟಮಿನ್, ಮಿನರಲ್ಸ್ ಮತ್ತು ಆ?ಯಂಟಿಆಕ್ಸಿಡೆಂಟ್ ಗಳು ಹೇರಳವಾಗಿದ್ದು, ದೇಹಕ್ಕೆ ಸರಿಯಾದ ಪೋಷಣೆಯನ್ನು ನೀಡುತ್ತದೆ.

ಮಶ್ರೂಮ್ ಸೇವಿಸುವುದರಿಂದ ತೂಕ ನಿಯಂತ್ರಣದಲ್ಲಿರುತ್ತದೆ. ಮಶ್ರೂಮ್ ಕಡಿಮೆ ಕ್ಯಾಲೋರಿ ಆಹಾರವಾಗಿದೆ ಮತ್ತು ಉತ್ತಮ ಪ್ರಮಾಣದ ಫೈಬರ್ ಅನ್ನು ಹೊಂದಿರುತ್ತದೆ. ಇದು ತೂಕವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

ಹೃದಯದ ಆರೋಗ್ಯಕ್ಕೆ ಅಣಬೆ ಉತ್ತಮ ಆಹಾರ. ಪೊಟ್ಯಾಸಿಯಮ್ ಮತ್ತು ಕಬ್ಬಿಣವು ಅಣಬೆಗಳಲ್ಲಿ ಕಂಡುಬರುತ್ತದೆ. ಇದು ಹೃದಯದ ಆರೋಗ್ಯವನ್ನು ಸುಧಾರಿಸುತ್ತದೆ ಮತ್ತು ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

ಅಣಬೆಯಲ್ಲಿ ವಿಟಮಿನ್ ಸಿ, ವಿಟಮಿನ್ ಡಿ ಮತ್ತು ಸತುವು ಇದ್ದು ಇದು ರೋಗ ನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ. ಅಣಬೆಗಳ ಸೇವನೆಯು ಇನ್ಸುಲಿನ್ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಮತ್ತು ಮಧುಮೇಹದ ಅಪಾಯವನ್ನು ಕಡಿಮೆ ಮಾಡುತ್ತದೆ.

**ಹೆಲ್ತ್ ಟಿಪ್ಸ್**

ಅಣಬೆಗಳಲ್ಲಿ ಉತ್ತಮ ಪ್ರಮಾಣದ ಉತ್ಕರ್ಷಣ ನಿರೋಧಕಗಳಿರುವ ಕಾರಣ, ಅವು ಚರ್ಮದ ಆರೋಗ್ಯಕ್ಕೆ ಉತ್ತಮ. ಇದರಿಂದಾಗಿ ವಯಸ್ಸಾದಂತೆ ಕಾಣುವುದನ್ನು ಮತ್ತು ಚರ್ಮದ ಸುಕ್ಕನ್ನು ತಡೆಗಟ್ಟುತ್ತದೆ. ಅಣಬೆಯಲ್ಲಿರುವ ಬೀಟಾ-ಗ್ಲುಕನ್ ಎಂಬ ಅಂಶವು ಕ್ಯಾನ್ಸರ್ ವಿರುದ್ಧ ರೋಗನಿರೋಧಕ ಶಕ್ತಿಯನ್ನು ಒದಗಿಸಲು ಸಹಾಯ ಮಾಡುತ್ತದೆ. ಅಣಬೆಗಳು ಉತ್ತಮ ಪ್ರಮಾಣದ ವಿಟಮಿನ್ ಡಿ ಮತ್ತು ಕ್ಯಾಲ್ಸಿಯಂ ಅನ್ನು ಹೊಂದಿರುತ್ತವೆ, ಇದು ಮೂಳೆಗಳನ್ನು ಬಲಪಡಿಸುತ್ತದೆ. ಮಶ್ರೂಮ್ ಕೀಟನಾಶಕಗಳು ಮತ್ತು ಇತರ ಸೂಕ್ಷ್ಮ ಜೀವಿಗಳಿಂದ ಮುಕ್ತವಾಗಿದೆ. ಇದರಿಂದಾಗಿ ಇದು ಕಡಿಮೆ ಅಪಾಯದ ಆಹಾರವೆಂದು ಪರಿಗಣಿಸಲಾಗಿದೆ. ಅಣಬೆಯಲ್ಲಿರುವ ಉತ್ತಮ ಪ್ರಮಾಣದ ಫೈಬರ್ ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ ಮತ್ತು ಮಲಬದ್ಧತೆ ಮತ್ತು ಗ್ಯಾಸ್ ಸಮಸ್ಯೆಗಳಿಂದ ನಿಮ್ಮನ್ನು ರಕ್ಷಿಸುತ್ತದೆ.

## ನೈಲ್ ಆರ್ಟ್

### ಬ್ಯೂಟಿ ಟಿಪ್ಸ್



ದಿನಕ್ಕೊಂದು ಹೊಸ ಸ್ಟೈಲ್, ಹೊಸ ಫ್ಯಾಷನ್ ಬರುತ್ತಲೇ ಇರುತ್ತೆ. ಕಾಂಪಿಟೇಟಿವ್ ಜಗತ್ತಿನಲ್ಲಿ ಬ್ಯೂಟಿಗೂ ಹೆಚ್ಚು ಮಹತ್ವ ಇರೋದ್ರಿಂದ ಸಲೀಸಾಗಿ ನೀರೆಯರು ಹೊಸ ಫ್ಯಾಷನ್ಗಳತ್ತ ಮುಖ ಮಾಡುತ್ತಾರೆ. ಹೆಣ್ಣಿನ ಅಂದ ಹೆಚ್ಚಿಸಲು ಕೇವಲ ಮುಖದ ಅಂದ ಮಾತ್ರವಲ್ಲ ಈಗ ಹೊಸದೊಂದು ಟ್ರೆಂಡ್ ಕೂಡ ಶುರುವಾಗಿದೆ.

ಇತ್ತೀಚಿನ ದಿನಗಳಲ್ಲಿ ನೈಲ್ ಆರ್ಟ್ ಹೆಣ್ಣು ಮಕ್ಕಳನ್ನ ತನ್ನೆಡೆ ಸೆಳೆಯುತ್ತಿದೆ. ನವಿರಾದ ಕೈ ಅಥವ ಕಾಲು ಬೆರಳಿನ ಉಗುರುಗಳಿಗೆ ಬಣ್ಣ ಹಚ್ಚಿ ಅದಕ್ಕೊಂದಿಷ್ಟು ಅಲಂಕಾರ ಮಾಡಿದ್ರೆ ಅದು ಮತ್ತಷ್ಟು ಮೋಹಕವಾಗಿ ಕಾಣುತ್ತದೆ. ಕೈಗಳ ಮತ್ತು ಕಾಲುಗಳ ಅಂದ ಹೆಚ್ಚಾಗಿರಬೇಕೆಂದ್ರೆ ನೈಲ್ಗಳು ಕಲರ್ಫುಲ್ ಆಗಿರಬೇಕು. ಈ ಮೊದಲು ಉಗುರಿಗೆ ಬಣ್ಣ ಹಚ್ಚುತ್ತಿದ್ದು, ಆ ಬಣ್ಣ ಅಳಿಸಿದಾಗ ಅಥವಾ ಬೇರೆ ಬಣ್ಣದ ಮೇಲೆ ಆಸೆ ಆದಾಗ ಹೊಸ ಬಣ್ಣವನ್ನ ಹಚ್ಚುತ್ತಿದ್ದರು. ಇದೀಗ ಈ ಟ್ರೆಂಡ್ ಬದಲಾಗಿದ್ದು, ಮಹಿಳೆಯರು ನೈಲ್ ಆರ್ಟ್ಗೆ ಮೊರೆ ಹೋಗುತ್ತಿದ್ದು ಮಿಕ್ಸ್ ಅಂಡ್ ಮ್ಯಾಚ್ನ ಕಾನ್ಸೆಪ್ಟ್ ಕೂಡ ಟ್ರೆಂಡ್ನಲ್ಲಿದೆ. ಕ್ಯೂಟ್ ಹಾರ್ಟ್, ಕಲರ್ಫುಲ್ ಬ್ರೈಡಲ್ ಡಿಸೈನ್ಗಳು, ಬಟರ್ ಫ್ಲೈ ಡಿಸೈನ್, ಡೈಮಂಡ್ ಆರ್ಟ್, ಎಂಗೇಜ್ಮೆಂಟ್ ಆರ್ಟ್ ಹೀಗೆ ನಾನಾ ರೀತಿಯ ಡೈನ್ಸು ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಟ್ರೆಂಡ್ನಲ್ಲಿದ್ದು, ಫ್ಯಾಷನ್ ಲೋಕದಲ್ಲಿ ಮೋಡಿ ಮಾಡ್ತಿವೆ.

# 100 ಕೋಟಿ ಮೀರಿ ಬೆಳೆದ ಅಮೃತಾಂಜನ್ ಸಂಸ್ಥೆ ಅಧೀನದ ಬ್ರ್ಯಾಂಡ್ ಕಾಂಫಿ




ನೋವು ನಿರ್ವಹಣಾ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಅಮೃತಂಜನ್ ಹೆಲ್ತ್ ಕೇರ್ ಸಂಸ್ಥೆಯು ಸ್ತ್ರೀಯರಿಗೆ ಅವಶ್ಯವಿರುವ ಉನ್ನತ ಗುಣಮಟ್ಟದ ಮುಟ್ಟಿನ ನೈರ್ಮಲ್ಯ ಉತ್ಪನ್ನಗಳು ಕೈಗೆಟಕುವ ರೀತಿಯಲ್ಲಿ ದೊರೆಯುವಂತೆ ಮಾಡುವುದು ಅತ್ಯವಶ್ಯ ಎಂಬುದನ್ನು ಮನಗಂಡು 2011 ರಲ್ಲಿ 'ಕಾಂಫಿ' ಬ್ರ್ಯಾಂಡ್ ಅನ್ನು ಆರಂಭಿಸಿತು. ಇಂದು ಇದೇ ಕಾಂಫಿ ಬ್ರಾಂಡ್ ರೂ.100 ಕೋಟಿ ಬ್ರಾಂಡ್ ಆಗಿ ಬೆಳೆದಿದ್ದು, ಸ್ಯಾನಿಟರಿ ನ್ಯಾಪ್ ಕಿನ್ಗಳು, ಟ್ಯಾಂಪೂನ್ಗಳು, ಮುಟ್ಟಿನ ಕಪ್ ಗಳು ಮತ್ತು ಪಿರಿಯಡ್ ಪೇನ್ ರೋಲ್ ಆನ್ ಗಳು ಸೇರಿದಂತೆ ಬಹಳಷ್ಟು ಮುಟ್ಟಿನ ನೈರ್ಮಲ್ಯ ಕಾಪಾಡುವ ಉತ್ಪನ್ನಗಳನ್ನು ಸ್ಪರ್ಧಾತ್ಮಕ ಬೆಲೆಯಲ್ಲಿ ಲಕ್ಷಾಂತರ ಮಹಿಳೆಯರಿಗೆ ಒದಗಿಸುತ್ತಿದೆ. ಮುಟ್ಟಿನ ಪ್ರಕ್ರಿಯೆಯನ್ನು ಎದುರಿಸುವ ಭಾರತದ 355 ಮಿಲಿಯನ್ ಮಹಿಳೆಯರಲ್ಲಿ ಕೇವಲ ಶೇ.36ರಷ್ಟು ಮಹಿಳೆಯರು ಮಾತ್ರವೇ ಪ್ರಸ್ತುತ ಸ್ಯಾನಿಟರಿ ನ್ಯಾಪ್ ಕಿನ್ ಗಳನ್ನು ಬಳಸುತ್ತಾರೆ. ಈ ಅಂಕಿ ಅಂಶಗಳ ಪ್ರಕಾರ ಬಹಳಷ್ಟು ಮಹಿಳೆಯರು ಮತ್ತು ಹುಡುಗಿಯರು, ಅದರಲ್ಲೂ ವಿಶೇಷವಾಗಿ ಗ್ರಾಮೀಣ ಪ್ರದೇಶಗಳ ಮಂದಿಗೆ ಗುಣಮಟ್ಟದ ಮುಟ್ಟಿನ ನೈರ್ಮಲ್ಯ ಕಾಪಾಡುವ ಉತ್ಪನ್ನಗಳ ಲಭ್ಯತೆ ಬಹಳ ಕಡಿಮೆ ಇದೆ. ಕಾಂಫಿ ಬ್ರಾಂಡ್ ಅಂತಹ ಮಹಿಳೆಯರಿಗೆ ನೆರವಾಗುವ ನಿಟ್ಟಿನಲ್ಲಿ ಮುಂದೆ ಸಾಗುತ್ತಿದೆ ಮತ್ತು ಅವರ ಅಗತ್ಯಗಳನ್ನು ಪರಿಹರಿಸಲು ಕಾರ್ಯ ನಿರ್ವಹಿಸುತ್ತಿದೆ.

ಸ್ತ್ರೀ ನೈರ್ಮಲ್ಯ ಉತ್ಪನ್ನಗಳ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಬೆಲ್ಲಾ ಪ್ರೀಮಿಯರ್ ಹ್ಯಾಪಿ ಹೈಜೀನ್ ಕೇರ್ ಪ್ರೈವೇಟ್ ಲಿಮಿಟೆಡ್ ಜೊತೆಗೆ ಸಹಯೋಗ ಮಾಡಿಕೊಂಡಿರುವ ಕಾಂಫಿ ಸಂಸ್ಥೆಯು ಉತ್ತರ ಅಮೆರಿಕಾದಿಂದ ಆಮದು ಮಾಡಿಕೊಂಡ ಕಚ್ಚಾ ವಸ್ತುಗಳನ್ನು ಬಳಸಿಕೊಂಡು ಭಾರತದ ಇತರ ಪ್ರಮುಖ ಮುಟ್ಟಿನ ನೈರ್ಮಲ್ಯ ಬ್ರ್ಯಾಂಡ್ ಗಳಿಗಿಂತ ಶೇ.80ರಷ್ಟು ಉತ್ತಮ ಹೀರಿಕೊಳ್ಳುವಿಕೆಯನ್ನು ಸಾಧ್ಯಗೊಳಿಸುವ ಉತ್ತಮ ಗುಣಮಟ್ಟದ ಉತ್ಪನ್ನವನ್ನು ಅಭಿವೃದ್ಧಿಪಡಿಸಿದೆ. ಆದರೆ ಈ ವಿಚಾರದಲ್ಲಿ ತಾಂತ್ರಿಕ ಅಭಿವೃದ್ಧಿ ಸಾಧಸಿದರೆ ಮಾತ್ರ ಸಾಕಾಗುವುದಿಲ್ಲ, ಕೈಗೆಟುಕುವಂತೆ ಮಾಡುವುದೂ ಬಹಳ ಅಗತ್ಯವಿದೆ. ಹಾಗಾಗಿ ಕಾಂಫಿ ಸಂಸ್ಥೆಯು ಸ್ಪರ್ಧಾತ್ಮಕ ಬೆಲೆಯಲ್ಲಿ ಈ ಉತ್ಪನ್ನಗಳನ್ನು ಒದಗಿಸುತ್ತಿದ್ದು, ಅದರಿಂದಾಗಿ ವಿವಿಧ ರೀತಿಯ ಆರ್ಥಿಕ ಹಿನ್ನೆಲೆಯ ಮಹಿಳೆಯರಿಗೆ ಗುಣಮಟ್ಟದ ಮುಟ್ಟಿನ ನೈರ್ಮಲ್ಯ ಉತ್ಪನ್ನಗಳನ್ನು ಪಡೆಯುವುದು ಸಾಧ್ಯವಾಗಿದೆ.

ಈ ಕುರಿತು ಮಾತನಾಡಿರುವ ಅಮೃತಾಂಜನ್ ಹೆಲ್ತ್ ಕೇರ್ ಲಿಮಿಟೆಡ್ ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕರಾದ ಎಸ್. ಸಂಭು ಪ್ರಸಾದ್ ಅವರು, ಕಾಂಫಿ ಇಂದು ಒಂದು ಶತಕೋಟಿ ರೂಪಾಯಿ (? 100 ಕೋಟಿ) ಬ್ರಾಂಡ್ ಆಗಿ ಬೆಳೆದಿರುವುದು ಹೆಮ್ಮೆಯ ವಿಚಾರವಾಗಿದೆ. ನಮ್ಮ ವಿಶಿಷ್ಟ ವಿನ್ಯಾಸದ ಸ್ಯಾನಿಟರಿ ಪ್ಯಾಡ್ ಗಳನ್ನು ನಮ್ಮ ಮಹಿಳೆಯರು ಉತ್ತಮ ರೀತಿಯಲ್ಲಿ ಸ್ವೀಕರಿಸಿರುವುದರಿಂದ ಮುಟ್ಟಿನ ನೈರ್ಮಲ್ಯ ಉತ್ಪನ್ನ ವ್ಯವಹಾರವು ಉತ್ತಮ ಅಭಿವೃದ್ಧಿಯನ್ನು ಕಾಣುತ್ತಿದೆ. ಸ್ಯಾನಿಟರಿ ನ್ಯಾಪ್ ಕಿನ್ ವ್ಯಾಪಾರವನ್ನು ಬೆಳೆಸುವ ನಮ್ಮ ಕಾರ್ಯತಂತ್ರಕ್ಕೆ ಅನುಗುಣವಾಗಿ ನಾವು ವಿಶ್ವ ದರ್ಜೆಯ ಸ್ಯಾನಿಟರಿ ನ್ಯಾಪ್ ಕಿನ್ ಉತ್ಪಾದನಾ ಘಟಕವನ್ನು ನಿರ್ಮಿಸಲು ಹೂಡಿಕೆ ಮಾಡುತ್ತಿದ್ದೇವೆ. ಯಾವಾಗಲೂ ಉನ್ನತ ಮತ್ತು ಕೈಗೆಟುಕುವ ದರದ ಮುಟ್ಟಿನ ನೈರ್ಮಲ್ಯ ಉತ್ಪನ್ನವನ್ನು ಪ್ರತೀ ಮಹಿಳೆಗೆ ಲಭ್ಯವಾಗಿಸುವಂತೆ ಮಾಡುವುದು ನಮ್ಮ ಧ್ಯೇಯವಾಗಿದೆ ಎಂದು ಹೇಳಿದರು. ಮಾತು ಮುಂದುವರಿಸಿದ ಅವರು, ''ಪ್ರಾಜೆಕ್ಟ್ ದಿಶಾದಂತಹ ತಳಮಟ್ಟದ ಯೋಜನೆಗಳ ಮೂಲಕ ನಾವು ಮುಟ್ಟಿನ ನೈರ್ಮಲ್ಯದ ಅವಶ್ಯಕತೆ ಕುರಿತ ಜಾಗೃತಿಯನ್ನು ಉಂಟು ಮಾಡಲು ಬದ್ಧರಾಗಿದ್ದೇವೆ. ವಿಶೇಷವಾಗಿ ಈ ನಿಟ್ಟಿನಲ್ಲಿ ಆತ್ಮವಿಶ್ವಾಸ ಮತ್ತು ಘನತೆಯಿಂದ ಮುಂದುವರಿಯಲು ಮಹಿಳೆಯರಿಗೆ ಅನುವು ಮಾಡಿ ಕೊಡುತ್ತೇವೆ. ಇ-ಕಾಮರ್ಸ್ ಪ್ಲಾಟ್ ಫಾರ್ಮ್ ಗಳ ಮೂಲಕ ನಮ್ಮ ಆನ್ ಲೈನ್ ಉಪಸ್ಥಿತಿಯನ್ನು ವಿಸ್ತರಿಸುವ ಮೂಲಕ ನಾವು ಡಿಜಿಟಲ್ ಬದಲಾವಣೆಗೆ ಮತ್ತು ತಂತ್ರಜ್ಞಾನ ಅಭಿವೃದ್ಧಿಗೆ ನಮ್ಮನ್ನು ನಾವು ಒಡ್ಡಿಕೊಳ್ಳುತ್ತಿದ್ದೇವೆ. ನಮ್ಮ ಸಾಮಾಜಿಕ ಮಾಧ್ಯಮ ಜಾಲತಾಣವನ್ನು ಉತ್ತಮ ರೀತಿಯಲ್ಲಿ ಬಳಸಿಕೊಳ್ಳಲಿದ್ದೇವೆ ಮತ್ತು ಕಾಂಫಿ ಪೀರಿಯಡ್ ಟ್ರ್ಯಾಕರ್ ನಂತಹ ಆಪ್ ಗಳನ್ನು ಅನಾವರಣ ಮಾಡುವ ಮೂಲಕ ಗ್ರಾಹಕರೊಂದಿಗೆ ನಾವು ನಮ್ಮ ಸಂಪರ್ಕವನ್ನು ಉತ್ತಮಗೊಳಿಸಲಿದ್ದೇವೆ ಎಂದು ಹೇಳಿದರು.

## ರಾಶಿ ಭವಿಷ್ಯ

**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com



**ಮೇಷ:** ವ್ಯಾಪಾರದಲ್ಲಿ ಧನ ಲಾಭ, ಪುಣ್ಯಕ್ಷೇತ್ರ ದರ್ಶನ, ಕೃಷಿಯಲ್ಲಿ ಉತ್ತಮ ಲಾಭ, ವಿರೋಧಿಗಳಿಂದ ತೊಂದರೆ.

**ವೃಷಭ:** ಮಕ್ಕಳ ಭಾವನೆಗಳನ್ನ ಗೌರವಿಸಿ, ಸ್ಥಿರಾಸ್ತಿ ಖರೀದಿ ಆಲೋಚನೆ, ಪರರಿಂದ ತೊಂದರೆ, ಹಣಕಾಸು ವಿಚಾರದಲ್ಲಿ ಜಾಗೃತೆ.

**ಮಿಥುನ:** ತಾಳ್ಮೆ ಅಗತ್ಯ, ಶ್ರಮಕ್ಕೆ ತಕ್ಕ ಫಲ, ರಾಜಕೀಯ ವ್ಯಕ್ತಿಗಳಿಗೆ ಉತ್ತಮ, ಬಡವರಿಗೆ ಸಹಾಯ ಮಾಡಿ, ಇಷ್ಟಾರ್ಥಗಳು ಸಿದ್ಧಿಸುತ್ತವೆ.

**ಕಟಕ:** ಅಮೂಲ್ಯ ವಸ್ತುಗಳ ನಷ್ಟ, ತಾಳ್ಮೆ ಕಳೆದುಕೊಳ್ಳಬೇಡಿ, ಅಪರಿಚಿತರ ವಿಚಾರದಲ್ಲಿ ಎಚ್ಚರಿಕೆ, ಕೈಗಾರಿಕೋದ್ಯಮಗಳಿಗೆ ಯಶಸ್ಸು.

**ಸಿಂಹ:** ಕುಟುಂಬದ ಮುಖ್ಯಸ್ಥರಿಗೆ ಅನಾರೋಗ್ಯ, ಕೆಲಸ ಕಾರ್ಯಗಳಲ್ಲಿ ಜಯ, ಚಂಚಲ ಸ್ವಭಾವ, ಅಧಿಕ ಖರ್ಚು, ವೈರಿಗಳಿಂದ ದೂರವಿರಿ.

**ಕನ್ಯಾ:** ಕೆಲಸ ಕಾರ್ಯಗಳಲ್ಲಿ ಅಡೆತಡೆ, ಅಪವಾದಗಳಿಂದ ಮುಕ್ತಿ, ಹಣಕಾಸು ವಿಚಾರದಲ್ಲಿ ತಗಾದೆ, ಕೊಟ್ಟ ಹಣ ವಾಪಸ್ಸು ನೀಡುವುದಿಲ್ಲ.

**ತುಲಾ:** ಪತಿ ಪತ್ನಿಯರಲ್ಲಿ ಭಿನ್ನಾಭಿಪ್ರಾಯ, ಮಾನಸಿಕ ನೆಮ್ಮದಿ, ಸ್ತ್ರೀ ವಿಚಾರದ ಅಪವಾದ ದೂರವಾಗುವುದು, ಹಿರಿಯರಿಗೆ ಗೌರವ ನೀಡಿ.

**ವೃಶ್ಚಿಕ:** ವ್ಯವಹಾರದಲ್ಲಿ ಅನುಕೂಲ, ಮಕ್ಕಳೊಂದಿಗೆ ದೂರದ ಪ್ರಯಾಣ, ಉದ್ಯೋಗದಲ್ಲಿ ಉತ್ತಮ, ಆರೋಗ್ಯದ ಬಗ್ಗೆ ಕಾಳಜಿ ವಹಿಸಿ.

**ಧನಸ್ಸು:** ಕೆಲಸಗಳಲ್ಲಿ ಮಂದಗತಿ, ಆಕಸ್ಮಿಕ ಧನ ಲಾಭ, ಸ್ಥಿರಾಸ್ತಿ ಖರೀದಿ, ಮನಕ್ಲೇಶ, ಮಾರಾಟ ಪ್ರತಿನಿಧಿಗಳಿಗೆ ಉತ್ತಮ.

**ಮಕರ:** ಅಕಾಲ ಭೋಜನ, ನಿದ್ರಾ ಭಂಗ, ಉದ್ಯೋಗ ದೊರಕುವ ಸಾಧ್ಯತೆ, ಸ್ಥಳ ಬದಲಾವಣೆ, ಇಷ್ಟಾರ್ಥ ಸಿದ್ಧಿ, ಆದಾಯಕ್ಕಿಂತ ಖರ್ಚು ಹೆಚ್ಚು.

**ಕುಂಭ:** ಯೋಚಿಸಿ ಕೆಲಸ ಆರಂಭಿಸಿ, ದ್ರವ್ಯ ಲಾಭ, ಕೆಲಸಗಳಲ್ಲಿ ಅಧಿಕ ಒತ್ತಡ, ವಿಶ್ರಾಂತಿ ಬಯಸುವಿರಿ, ವಿದ್ಯಾರ್ಥಿಗಳಲ್ಲಿ ಪ್ರಗತಿ.

**ಮೀನ:** ಪಿತ್ರಾರ್ಜಿತ ಆಸ್ತಿ ಲಭ್ಯ, ಕೃಷಿಕರಿಗೆ ಲಾಭ, ಪ್ರೇಮಿಗಳಿಗೆ ಕುಟುಂಬದವರ ಸಹಕಾರ, ಮಿತ್ರರಿಂದ ದ್ರೋಹ.

## ಅಂತರರಾಷ್ಟ್ರೀಯ ಮಹಿಳಾ ನ್ಯಾಯಾಧೀಶರ ದಿನ

ಸಾರ್ವಜನಿಕ ಜೀವನದಲ್ಲಿ ಮಹಿಳೆಯರು ಹೆಚ್ಚಿನ ಭಾಗವಹಿಸುವಿಕೆಯ ಹೊರತಾಗಿಯೂ, ನಿರ್ಧಾರ ತೆಗೆದುಕೊಳ್ಳುವ ಸ್ಥಾನಗಳಲ್ಲಿ ಮಹಿಳೆಯರ ಪ್ರಾತಿನಿಧ್ಯ ಇನ್ನೂ ಕಡಿಮೆಯಾಗಿದೆ. ಸತ್ಯದಲ್ಲಿ, ಐತಿಹಾಸಿಕವಾಗಿ ನ್ಯಾಯಾಲಯದಲ್ಲಿ, ವಿಶೇಷವಾಗಿ ಉನ್ನತ ನಾಯಕತ್ವ ಮಟ್ಟದಲ್ಲಿ ಮಹಿಳೆಯರ ಪ್ರಾತಿನಿಧ್ಯ ಕಡಿಮೆಯಾಗಿದೆ. ಮಹಿಳೆಯರನ್ನು ಯಾವಾಗಲೂ ಪುರುಷರಿಗಿಂತ ಕೀಳು ಎಂದು ಭಾವಿಸಲಾಗಿದೆ ಮತ್ತು ಆದ್ದರಿಂದ ಜೀವನದ ವಿವಿಧ ಕ್ಷೇತ್ರಗಳಲ್ಲಿ ಸಮಾನ ಪ್ರಾತಿನಿಧ್ಯವನ್ನು ನೀಡಲಾಗಿಲ್ಲ. ಆದರೆ ಈಗ ವಿಷಯಗಳು ಬದಲಾಗಿವೆ ಮತ್ತು ಅವರು ಹಾಗೆಯೇ ಮುಂದುವರೆದಿದ್ದಾರೆ. ಕಳೆದ ವರ್ಷ, ದೋಹಾದಲ್ಲಿ ನಡೆದ ಗಟಔಆಅ ಗ್ಲೋಬಲ್ ಜುಡಿಷಿಯಲ್ ಇಂಟೆಗ್ರಿಟಿ ನೆಟ್ವರ್ಕ್ನ ಎರಡನೇ ಉನ್ನತ ಮಟ್ಟದ ಸಭೆಯಲ್ಲಿ, ಅಧ್ಯಕ್ಷೆ ವನೆಸ್ಸಾ ರೂಯಿಜ್ ಮತ್ತು ಕತಾರ್ನ ಮುಖ್ಯ ನ್ಯಾಯಾಧೀಶರು ಜಂಟಿಯಾಗಿ ಮಹಿಳಾ ನ್ಯಾಯಾಧೀಶರ ಸಾಧನೆಗಳನ್ನು ಗೌರವಿಸುವ ಅಂತರರಾಷ್ಟ್ರೀಯ ದಿನದ ಕಲ್ಪನೆಯನ್ನು ಪ್ರಸ್ತಾಪಿಸಿದರು. ವಿಶ್ವಸಂಸ್ಥೆಯಲ್ಲಿ ಕತಾರ್ನ ಖಾಯಂ ಪ್ರತಿನಿಧಿಯಾಗಿರುವ ಹರ್ ಎಕ್ಸೆಲೆನ್ಸಿ ಅಲಿಯಾ ಅಹ್ಮದ್ ಎಸ್. ಅಲ್-ಥಾನಿ, ವಿಶ್ವಸಂಸ್ಥೆಯಲ್ಲಿ ಕರಡು ರಚನೆಯ ಮಾತುಕತೆಗಳನ್ನು ಪರಿಣಿತವಾಗಿ ಮೇಲ್ವಿಚಾರಣೆ ಮಾಡಿದರು.

ಪೀಠದಲ್ಲಿ ಸಮಾನ ಸಂಖ್ಯೆಯ ಪುರುಷರು ಮತ್ತು ಮಹಿಳೆಯರು ಇರುವುದು ನ್ಯಾಯಾಂಗದ ನಿಷ್ಪಕ್ಷಪಾತ ತೀರ್ಪುಗಳನ್ನು ನೀಡುವ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಮಹಿಳಾ ನ್ಯಾಯಾಧೀಶರು ನ್ಯಾಯಾಂಗಕ್ಕೆ ವಿವಿಧ ದೃಷ್ಟಿಕೋನಗಳು ಮತ್ತು ಅನುಭವಗಳನ್ನು ನೀಡುತ್ತಾರೆ, ಅವರು ಸೇವೆ ಸಲ್ಲಿಸುವ ಸಮಾಜವನ್ನು ಚಿತ್ರಿಸುವಾಗ ಮಾನವ ಹಕ್ಕುಗಳು ಮತ್ತು ಕಾನೂನಿನ ನಿಯಮವನ್ನು ರಕ್ಷಿಸುವ ನ್ಯಾಯಾಂಗದ ಸಾಮರ್ಥ್ಯದಲ್ಲಿ ಸಾರ್ವಜನಿಕ ವಿಶ್ವಾಸವನ್ನು ಬಲಪಡಿಸುತ್ತಾರೆ. ನಾಯಕತ್ವದ ಸ್ಥಾನಗಳಲ್ಲಿರುವ ಮಹಿಳೆಯರು ಸಹಾನುಭೂತಿ ಜಾಲಗಳನ್ನು ನಾಶಮಾಡಲು ಸಹಾಯ ಮಾಡುತ್ತಾರೆ, ಇದು ಭ್ರಷ್ಟಾಚಾರವನ್ನು ಎದುರಿಸಲು ಸಹಾಯ ಮಾಡುತ್ತದೆ.

ಮಹಿಳಾ ನ್ಯಾಯಾಧೀಶರನ್ನು ಹಿಂದೆ ನಿಷೇಧಿಸಲಾಗಿದ್ದ ಸೆಟ್ಟಿಂಗ್ಗಳಲ್ಲಿ ಅವರನ್ನು ಸೇರಿಸಿಕೊಳ್ಳುವುದು ನ್ಯಾಯಾಂಗ ವ್ಯವಸ್ಥೆಗಳನ್ನು ಹೆಚ್ಚು ಪಾರದರ್ಶಕ, ಸಂಯೋಜಿಸುವ ಮತ್ತು ಅವರು ಪ್ರಭಾವ ಬೀರುವ ಜನರ ಜೀವನವನ್ನು ಮಾದರಿಯಾಗಿ ನೋಡುವ ಕಡೆಗೆ ಸಕಾರಾತ್ಮಕ ಹೆಜ್ಜೆಯಾಗಿದೆ. ಈ ದಿನವನ್ನು ಸ್ಮರಿಸುವ ಮೂಲಕ ನ್ಯಾಯಾಂಗ ವ್ಯವಸ್ಥೆಗಳು, ವ್ಯವಸ್ಥಾಪಕ ಮತ್ತು ನಾಯಕತ್ವ ಸಂಸ್ಥೆಗಳು ಮತ್ತು ಇತರ ಹಂತಗಳಲ್ಲಿ ಮಹಿಳೆಯರ ಪ್ರಗತಿಗಾಗಿ ಸಂಬಂಧಿತ ಮತ್ತು ಯಶಸ್ವಿ ರಾಷ್ಟ್ರೀಯ ನೀತಿಗಳು ಮತ್ತು ಯೋಜನೆಗಳನ್ನು ಸ್ಥಾಪಿಸಲು ಮತ್ತು ಕಾರ್ಯಗತಗೊಳಿಸಲು ನಮ್ಮ ಬದ್ಧತೆಯನ್ನು ನಾವು ಪುನರುಚ್ಚರಿಸುತ್ತೇವೆ.

# ಚಿನ್ನದ ದರದಲ್ಲಿ ಯಥಾಸ್ಥಿತಿ

**ಬೆಂಗಳೂರು:** ಕೆಲವು ದಿನಗಳಿಂದ ಏರಿಕೆಯಾಗುತ್ತಿದ್ದ ಚಿನ್ನದ ದರ ಮಾ. 9 ಯಥಾಸ್ಥಿತಿ ಕಾಯ್ದುಕೊಂಡಿದೆ. ಭಾನುವಾರ ಬೆಂಗಳೂರಿನಲ್ಲಿ 22 ಕ್ಯಾರಟ್ 1 ಗ್ರಾಂ ಚಿನ್ನಕ್ಕೆ 8,040 ರೂ. ಇದ್ದರೆ, 24 ಕ್ಯಾರಟ್ನ 1 ಗ್ರಾಂ ಚಿನ್ನಕ್ಕೆ 8,771 ರೂ. ಪಾವತಿಸಬೇಕು. 22 ಕ್ಯಾರಟ್ನ 8 ಗ್ರಾಂ ಚಿನ್ನ 64,320 ರೂ. ಬೆಲೆ ಬಾಳಿದರೆ, 10 ಗ್ರಾಂಗೆ ನೀವು 80,400 ರೂ. ಮತ್ತು 100 ಗ್ರಾಂಗೆ 8,04,000 ರೂ. ನೀಡಬೇಕಾಗುತ್ತದೆ. ಇನ್ನು 24 ಕ್ಯಾರಟ್ನ 8 ಗ್ರಾಂ ಚಿನ್ನ70,168 ರೂ. ಬೆಲೆ ಬಾಳಿದರೆ, 10 ಗ್ರಾಂಗೆ ನೀವು 87,710 ರೂ. ಮತ್ತು 100 ಗ್ರಾಂಗೆ 8,77,100 ರೂ. ಪಾವತಿಸಬೇಕಾಗುತ್ತದೆ. ಇತ್ತ ಬೆಳ್ಳಿ ದರ ಬೆಂಗಳೂರಿನಲ್ಲಿ ಇಂದು ಯಥಾಸ್ಥಿತಿ ಕಾಯ್ದುಕೊಂಡಿದೆ. ಬೆಳ್ಳಿ 1 ಗ್ರಾಂನ ಬೆಲೆ 99.10 ರೂ., 8 ಗ್ರಾಂಗೆ 792.20 ರೂ., 10 ಗ್ರಾಂ.ಗೆ 991 ಮತ್ತು 1 ಕೆಜಿಗೆ 99,100 ರೂ. ಇದೆ.

**ವಿವಿಧ ನಗರಗಳಲ್ಲಿನ ಚಿನ್ನದ ಬೆಲೆ ಇಂದಿನ ಚಿನ್ನದ ರೇಟ್**

| ನಗರ | 22 ಕ್ಯಾರಟ್ (1 ಗ್ರಾಂ) | 24 ಕ್ಯಾರಟ್ (1 ಗ್ರಾಂ) |
|---|---|---|
| ಚೆನ್ನೈ | 8,040 ರೂ. | 8,771 ರೂ. |
| ಮುಂಬೈ | 8,040 ರೂ. | 8,771 ರೂ. |
| ದಿಲ್ಲಿ | 8,055 ರೂ. | 8,786 ರೂ. |
| ಕೋಲ್ಕತಾ | 8,040 ರೂ. | 8,771 ರೂ. |
| ಹೈದರಾಬಾದ್ | 8,040 ರೂ. | 8,771 ರೂ. |

# ನುಚ್ಚಕ್ಕಿ ಮೇಲಿನ ರಫ್ತು ನಿಷೇಧ ತೆರವು



**ದೆಹಲಿ:** ನುಚ್ಚಕ್ಕಿ ರಫ್ತಿನ ಮೇಲಿನ ನಿಷೇಧವನ್ನು ಕೇಂದ್ರ ಸರಕಾರ ತೆರವುಗೊಳಿಸಿದೆ. ಈ ನಿರ್ಧಾರದಿಂದ ಜಾಗತಿಕ ಅಕ್ಕಿ ಬೆಲೆಯಲ್ಲಿ ತೀವ್ರ ಇಳಿಕೆಯಾಗುವ ಸಾಧ್ಯತೆ ಇದೆ.

ಜಗತ್ತಿನ ಅತಿದೊಡ್ಡ ಅಕ್ಕಿ ರಫ್ತುದಾರ ಭಾರತ ಅಂತರ ರಾಷ್ಟ್ರೀಯ ಮಾರುಕಟ್ಟೆಗೆ 10 ಲಕ್ಷ ಮೆಟ್ರಿಕ್ ಟನ್ ನುಚ್ಚಕ್ಕಿಯನ್ನು ಪೂರೈಸಬಹುದಾಗಿದೆ ಎಂದು ತಜ್ಞರು ಅಂದಾಜಿಸಿದ್ದಾರೆ.

ವಿದೇಶಿ ವ್ಯಾಪಾರದ ಮಹಾ ನಿರ್ದೇಶಕರು (ಡಿಜಿಎಫ್‌ಟಿ) ಮಾರ್ಚ್ 7ರ ಅಧಿಸೂಚನೆಯಲ್ಲಿ ಕೂಡಲೇ ಜಾರಿಗೆ ಬರುವಂತೆ ನುಚ್ಚಕ್ಕಿಯ ರಫ್ತು ನೀತಿಯನ್ನು 'ನಿಷೇಧ'ದಿಂದ 'ಮುಕ್ತ' ಮಾರಾಟಕ್ಕೆ ತಿದ್ದುಪಡಿ ಮಾಡಿದ್ದಾರೆ. 2022 ಸೆಪ್ಟಂಬರ್‌ನಿಂದ ಈ ನಿರ್ಬಂಧ ಜಾರಿಯಲ್ಲಿತ್ತು.

ನುಚ್ಚಕ್ಕಿ ರಫ್ತಿಗೆ ಭಾರತ ಶೇ. 100ರಷ್ಟು ಅನುಮತಿ ನೀಡಲಿದೆ, ಇದನ್ನು ನಿರ್ಬಂಧಿತ ವರ್ಗದಿಂದ ತೆಗೆದು ಹಾಕಲಿದೆ ಎಂದು ವಾಣಿಜ್ಯ ಹಾಗೂ ಕೈಗಾರಿಕೆ ಸಚಿವಾಲಯ ತನ್ನ ಅಧಿಸೂಚನೆಯಲ್ಲಿ ತಿಳಿಸಿದೆ. ಎಲ್ ನಿನೋ ಪ್ರಭಾವದಿಂದ ಮುಂಗಾರು ದುರ್ಬಲಗೊಳ್ಳಬಹುದು. ಇದು 2023ರಲ್ಲಿ ಅಕ್ಕಿ ಉತ್ಪಾದನೆಯ ಇಳಿಕೆಗೆ ಕಾರಣವಾಗಬಹುದು ಎಂದು ಆತಂಕಪಡಲಾಗಿತ್ತು. ಈ ಹಿನ್ನೆಲೆಯಲ್ಲಿ ಆರಂಭದಲ್ಲಿ ನುಚ್ಚಕ್ಕಿ ರಫ್ತಿಗೆ ನಿಷೇಧ ಹೇರಲಾಗಿತ್ತು. ಆದರೆ, 2024ರಲ್ಲಿ ಸುರಿದ ಹೆಚ್ಚುವರಿ ಮಳೆಯಿಂದಾಗಿ ಬಂಪರ್ ಬೆಳೆ ಬಂದಿತ್ತು. ಇದು ನಿರ್ಬಂಧವನ್ನು ಸಡಿಸಲಿಸಲು ಸರಕಾರವನ್ನು ಪ್ರೇರೇಪಿಸಿತು.

## ಸಿರಿಯಾದಲ್ಲಿ ರಣಭೀಕರ ಸಂಘರ್ಷ

**ಡಮಾಸ್ಕಸ್:** ಮಧ್ಯಪ್ರಾಚ್ಯ ದೇಶವಾದ ಸಿರಿಯಾದಲ್ಲಿ ಸಂಘರ್ಷ ಕ್ರೂರಮಟ್ಟ ತಲುಪಿದೆ. ಸಿರಿಯನ್ ಭದ್ರತಾ ಪಡೆಗಳು ಮತ್ತು ಪದಚ್ಯುತ ಅಧ್ಯಕ್ಷ ಬಶರ್ ಅಸದ್ ಬೆಂಬಲಿಗರ ನಡುವೆ ಎರಡು ದಿನಗಳಿಂದ ನಡೆಯುತ್ತಿರುವ ಘರ್ಷಣೆಯಲ್ಲಿ 1 ಸಾವಿರಕ್ಕೂ ಅಧಿಕ ಮಂದಿ ಸಾವಿಗೀಡಾಗಿದ್ದಾರೆ ಎಂಬ ಆಘಾತಕಾರಿ ಅಂಶವನ್ನು ಯುದ್ಧದ ಮೇಲ್ವಿಚಾರಣಾ ತಂಡ ನೀಡಿದೆ. ಲಟಾಕಿಯಾ, ಟಾರ್ಟಸ್ ಮತ್ತು ಹಮಾ ಪ್ರಾಂತ್ಯಗಳಲ್ಲಿ ಹೆಚ್ಚಿನ ಸಂಘರ್ಷ ನಡೆದಿದೆ. ಶುಕ್ರವಾರ ಎರಡೂ ಕಡೆಗಳಿಂದ ಹಿಂಸಾಚಾರ ಭುಗಿಲೆದ್ದಿದೆ. ಇದು ಶನಿವಾರಕ್ಕೂ ವಿಸ್ತರಣೆಯಾಗಿ ಸಾವಿನ ಸಂಖ್ಯೆ 1 ಸಾವಿರ ದಾಟಿದೆ. ಹಲವರು ಗಾಯಗೊಂಡಿದ್ದಾರೆ ಎಂದು ಬ್ರಿಟನ್ ಮೂಲದ ಸಿರಿಯನ್ ಮಾನವ ಹಕ್ಕುಗಳ ವೀಕ್ಷಣಾಲಯದ ವರದಿ ಹೇಳಿದೆ. ಸಂಘರ್ಷದಲ್ಲಿ 745 ನಾಗರಿಕರು ಸಾವನ್ನಪ್ಪಿದ್ದರೆ, ತುಂಬಾ ಹತ್ತಿರದಿಂದ ನಡೆದ ಗುಂಡಿನ ದಾಳಿಯಲ್ಲಿ 125 ಸರ್ಕಾರಿ ಭದ್ರತಾ ಪಡೆ ಸಿಬ್ಬಂದಿ, ಅಸ್ಸಾದ್ಗೆ ಸಂಬಂಧಿಸಿದ 148 ಉಗ್ರರು ಸಾವನ್ನಪ್ಪಿದ್ದಾರೆ. ಇದು ಸಿರಿಯಾದ 14 ವರ್ಷಗಳ ಸಂಘರ್ಷದಲ್ಲಿ ಅತ್ಯಂತ ಭೀಕರ ಎಂದು ಮೇಲ್ವಿಚಾರಣಾ ತಂಡ ಮಾಹಿತಿ ನೀಡಿದೆ. ಹತ್ಯೆಗೊಳಗಾದ ನಾಗರಿಕರಲ್ಲಿ ಹೆಚ್ಚಿನವರು ಅಲಾವೈಟ್ ಸಮುದಾಯಕ್ಕೆ ಸೇರಿದ ಧಾರ್ಮಿಕ ಅಲ್ಪಸಂಖ್ಯಾತರಾಗಿದ್ದಾರೆ. ಸಿರಿಯಾದಲ್ಲಿ ಕಳೆದ ಮೂರು ತಿಂಗಳ ಹಿಂದಷ್ಟೇ ರಚನೆಯಾಗಿರುವ ಮಧ್ಯಂತರ ಸರ್ಕಾರವು ಸಂಘರ್ಷಪೀಡಿತ ನಗರಗಳಲ್ಲಿ ಹೆಚ್ಚುವರಿ ಭದ್ರತಾ ಪಡೆಗಳನ್ನು ನಿಯೋಜಿಸಿದೆ. ಆದಾಗ್ಯೂ, ಮಾಜಿ ಆಡಳಿತಗಾರ ಬಶರ್ ಅಲ್ ಅಸ್ಸಾದ್ಗೆ ಬೆಂಬಲಿಗರು ಮಾರಣಹೋಮ ನಡೆಸುತ್ತಿದ್ದಾರೆ.





# ಮಹಿಳಾ ನಾಯಕಿಯರ ಸಾಧನೆಗಳ ಸಂಭ್ರಮಾಚರಣೆ: ಮಣಿಪಾಲ್ ಆಸ್ಪತ್ರೆಯಿಂದ ಉದ್ಯಮಿಗಳಿಗೆ ಸನ್ಮಾನ

**ಬೆಂಗಳೂರು:** ಮಣಿಪಾಲ್ ಹಾಸ್ಪಿಟಲ್ಸ್, ಬೆಂಗಳೂರಿನ ಮಹಿಳಾ ಉದ್ಯಮಿಗಳ ಶಕ್ತಿ, ಯಶಸ್ಸು, ಮತ್ತು ಸಾಧನೆಗಳನ್ನು ಗುರುತಿಸಿ ಅವರನ್ನು ಸನ್ಮಾನಿಸಲು ಒಂದು ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ 2025 ರ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಿತು. ಈ ಸ್ಫೂರ್ತಿದಾಯಕ ಕಾರ್ಯಕ್ರಮವು ಮಣಿಪಾಲ ಕಮ್ಯುನಿಟಿ ಕನೆಕ್ಟ್ ಉಪಕ್ರಮದ ಅಡಿಯಲ್ಲಿ ಬರುವ ಮಣಿಪಾಲ ಸಖಿಯ ಭಾಗವಾಗಿತ್ತು.

ಮಣಿಪಾಲ್ ಹಾಸ್ಪಿಟಲ್ಸ್ ವ್ಯಕ್ತಿಯ ಯೋಗಕ್ಷೇಮಕ್ಕೆ ಸಮುದಾಯವು ತುಂಬಾ ಮುಖ್ಯ ಎಂದು ನಂಬುತ್ತದೆ. ಮಣಿಪಾಲ್ ಕಮ್ಯುನಿಟಿ ಕನೆಕ್ಟ್ ಕಾರ್ಯಕ್ರಮವು ಆರೋಗ್ಯ ಸೇವೆಗಳ ಜೊತೆಗೆ ಅರ್ಥಪೂರ್ಣ ಸಂಪರ್ಕಗಳನ್ನು ನಿರ್ಮಿಸಲು ಸಹಾಯ ಮಾಡುತ್ತದೆ. ಈ ಉಪಕ್ರಮವು ಜನರು ಭಾವನಾತ್ಮಕ ಬೆಂಬಲ, ನಿಜಜೀವನದಲ್ಲಿ ಸಹಾಯ ಮತ್ತು ಆರೋಗ್ಯ ಮತ್ತು ಸ್ವಾಸ್ಥ್ಯದ ಮೇಲೆ ಕೇಂದ್ರೀಕರಿಸುವಾಗ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶಗಳನ್ನು ನೀಡುವ ಮೂಲಕ ಬಲವಾದ ಸಮುದಾಯಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ.

ಎಂಸಿಸಿಯ ಭಾಗವಾಗಿರುವ ಮಣಿಪಾಲ್ ಸಖಿ, ಜೀವನದ ಎಲ್ಲಾ ಹಂತದಲ್ಲಿರುವ ಮಹಿಳೆಯರನ್ನು ಸಬಲೀಕರಣಗೊಳಿಸಲು ವಿನ್ಯಾಸಗೊಳಿಸಲಾದ ಕ್ರಿಯಾತ್ಮಕ ನೆಟ್‌ವರ್ಕಿಂಗ್ ವೇದಿಕೆಯಾಗಿದೆ. ಇದು ಅವರಿಗೆ ತಮ್ಮನ್ನು ತಾವು ವ್ಯಕ್ತಪಡಿಸಲು, ಪ್ರತಿಭೆಯನ್ನು ಹಂಚಿಕೊಳ್ಳಲು, ಸಾಧನೆಗಳನ್ನು ಆಚರಿಸಲು ಮತ್ತು ಪರಸ್ಪರ ಬೆಂಬಲಿಸಲು ಒಂದು ಸ್ಥಳವನ್ನು ಒದಗಿಸುತ್ತದೆ. ಈ ವೇದಿಕೆಯು ಕೇವಲ ನೆಟ್‌ವರ್ಕಿಂಗ್ಗೆ ಮಾತ್ರವಲ್ಲದೆ ಮಹಿಳೆಯರಿಗೆ ಪ್ರಮುಖ ಆರೋಗ್ಯ ವಿಷಯಗಳ ಬಗ್ಗೆ ಚರ್ಚಿಸಲು, ವೈದ್ಯಕೀಯ ತಜ್ಞರಿಂದ ಸಲಹೆ ಪಡೆಯಲು ಮತ್ತು ಮಣಿಪಾಲ್ ಆಸ್ಪತ್ರೆಗಳ ಸಮುದಾಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಸಹಾಯ ಮಾಡುತ್ತದೆ.ವಿವಿಧ ಕ್ಷೇತ್ರಗಳಲ್ಲಿ ಬದಲಾವಣೆ ತರುತ್ತಿರುವ 50 ಕ್ಕೂ ಹೆಚ್ಚು ಸ್ಫೂರ್ತಿದಾಯಕ ಮಹಿಳಾ ಉದ್ಯಮಿಗಳ ಸಾಧನೆಗಳನ್ನು ಆಚರಿಸುವ ಮೂಲಕ ಮಣಿಪಾಲ್ ಸಖಿಯ ದೃಷ್ಟಿಕೋನವನ್ನು ಈ ಕಾರ್ಯಕ್ರಮ ಪ್ರತಿಬಿಂಬಿಸಿತು. ಕಾರ್ಯಕ್ರಮದಲ್ಲಿ, ಸುಸ್ಥಿರತೆ ಮತ್ತು ಪರಿಸರ ಸ್ನೇಹಿ ಫ್ಯಾಷನ್, ಬೌದ್ಧಿಕವಾಗಿ ಸವಾಲು ಹೊಂದಿರುವವರಿಗೆ ಶಿಕ್ಷಣ, ಕಲೆಯ ಮೂಲಕ ಜ್ಞಾನ, ಆಹಾರದ ಮೂಲಕ ಸಂಸ್ಕೃತಿಗಳ ಸಬಲೀಕರಣ, ಹಾಗೂ ತಮ್ಮ ದೃಷ್ಟಿ, ದಿಟ್ಟ ಆಲೋಚನೆಗಳು ಮತ್ತು ಸಮರ್ಪಣೆಯೊಂದಿಗೆ ಬಲವಾದ ಸಮುದಾಯಗಳನ್ನು ನಿರ್ಮಿಸುತ್ತಿರುವ ಅನನ್ಯ ಸಾಧಕಿಯರು ಉಪಸ್ಥಿತರಿದ್ದರು.

# ಮಧ್ಯ ಪ್ರದೇಶದಲ್ಲಿ ದೇಶದ 58ನೇ ಹುಲಿ ಸಂರಕ್ಷಿತ ಪ್ರದೇಶ ಘೋಷಣೆ




**ಭೋಪಾಲ್:** ಮಧ್ಯ ಪ್ರದೇಶದ ಮಾಧವ್ ರಾಷ್ಟ್ರೀಯ ಉದ್ಯಾನವನವನ್ನು ರಾಜ್ಯದ ಒಂಬತ್ತನೇ ಹುಲಿ ಮೀಸಲು ಪ್ರದೇಶವೆಂದು ಗುರುತಿಸಿರುವ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ವನ್ಯಜೀವಿ ಪ್ರಿಯರಿಗೆ ಇದೊಂದು ಅದ್ಭುತ ಸುದ್ದಿ! ಭಾರತವು ವನ್ಯಜೀವಿ ವೈವಿಧ್ಯತೆ ಮತ್ತು ವನ್ಯಜೀವಿಗಳನ್ನು ಗೌರವಿಸುವ ಸಂಸ್ಕೃತಿಯನ್ನು ಹೊಂದಿದೆ. ಪ್ರಾಣಿಗಳನ್ನು ರಕ್ಷಿಸುವಲ್ಲಿ ಮತ್ತು ಸುಸ್ಥಿರ ಗ್ರಹಕ್ಕೆ ಕೊಡುಗೆ ನೀಡುವಲ್ಲಿ ನಾವು ಯಾವಾಗಲೂ ಮುಂಚೂಣಿಯಲ್ಲಿದ್ದೇವೆ ಎಂದು ಹೇಳಿದ್ದಾರೆ.

ಪ್ರಧಾನಿಯ ಪೋಸ್ಟ್ಗೆ ಪ್ರತಿಕ್ರಿಯೆ ನೀಡಿದ ರಾಜ್ಯದ ಮುಖ್ಯಮಂತ್ರಿ ಡಾ.ಮೋಹನ್ ಯಾದವ್, ಮಾಧವ್ ರಾಷ್ಟ್ರೀಯ ಉದ್ಯಾನವನ್ನು ಭಾರತದ 58ನೇ ಮತ್ತು ಮಧ್ಯ ಪ್ರದೇಶದ 9ನೇ ಹುಲಿ ಮೀಸಲು ಪ್ರದೇಶವೆಂದು ಹೆಸರಿಸುವಲ್ಲಿ ದೂರದೃಷ್ಟಿಯ ನಾಯಕತ್ವಕ್ಕಾಗಿ ಗೌರವಾನ್ವಿತ ಪ್ರಧಾನಿಗೆ ಹೃತ್ಪೂರ್ವಕ ಧನ್ಯವಾದಗಳು! ವನ್ಯಜೀವಿಗಳನ್ನು ಸಂರಕ್ಷಿಸಲು ಮತ್ತು ನಮ್ಮ ಜೀವವೈವಿಧ್ಯತೆಯನ್ನು ರಕ್ಷಿಸಲು ಮಧ್ಯಪ್ರದೇಶ ಹೆಮ್ಮೆಪಡುತ್ತದೆ. ಎಂದು ಹೇಳಿದ್ದಾರೆ.

ಶಿವಪುರಿ ಜಿಲ್ಲೆಯ ಮಾಧವ್ ರಾಷ್ಟ್ರೀಯ ಉದ್ಯಾನವನಕ್ಕೆ ಶೀಘ್ರದಲ್ಲೇ ಹುಲಿ ಮೀಸಲು ಸ್ಥಾನಮಾನ ನೀಡಲಾಗುವುದು ಎಂದು ಮುಖ್ಯಮಂತ್ರಿ ಯಾದವ್ ಕೆಲ ದಿನಗಳ ಹಿಂದೆ ಘೋಷಿಸಿದ್ದರು. ಉದ್ಯಾನವನಕ್ಕೆ ಒಂದು ಜೋಡಿ ಹುಲಿಗಳನ್ನು ಶೀಘ್ರದಲ್ಲೇ ಬಿಡುಗಡೆ ಮಾಡುವ ಬಗ್ಗೆಯೂ ಅವರು ತಿಳಿಸಿದ್ದರು. ಮಧ್ಯಪ್ರದೇಶವು ಈಗಾಗಲೇ ಹುಲಿ ರಾಜ್ಯ ಪಟ್ಟ ಪಡೆದುಕೊಂಡಿದೆ. ರಾಜ್ಯವು ವನ್ಯಜೀವಿ ಪ್ರಿಯರಿಗೆ ಮೆಚ್ಚಿನ ತಾಣವಾಗಿದೆ ಮತ್ತು ಪ್ರಮುಖ ವನ್ಯಜೀವಿ ಪ್ರವಾಸೋದ್ಯಮ ತಾಣವಾಗಿ ಹೊರಹೊಮ್ಮಿದೆ. ಚಂಬಲ್ ಪ್ರದೇಶಕ್ಕೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗುವುದರಿಂದ ಸ್ಥಳೀಯ ಯುವಕರಿಗೆ ಹೆಚ್ಚಿನ ಉದ್ಯೋಗ ಮತ್ತು ಸ್ವಯಂ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ ಎಂದು ಮುಖ್ಯಮಂತ್ರಿ ಹೇಳಿದರು.

# 225 ಜಿಬಿಎಸ್ ಪ್ರಕರಣಗಳು ಪತ್ತೆ,12 ಮೃತ್ಯು



**ಮುಂಬೈ:** ಮಹಾರಾಷ್ಟ್ರದಲ್ಲಿ 197 ದೃಢೀಕೃತ ಮತ್ತು 28 ಶಂಕಿತ ಪ್ರಕರಣಗಳು ಸೇರಿದಂತೆ ಈವರೆಗೆ ಒಟ್ಟು 225 ಗಿಲಾಯಿನ್-ಬಾರಿ ಸಿಂಡ್ರೋಮ್ (ಜಿಬಿಎಸ್) ಪ್ರಕರಣಗಳು ವರದಿಯಾಗಿವೆ.

ಮಹಾರಾಷ್ಟ್ರ ಆರೋಗ್ಯ ಅಧಿಕಾರಿಗಳ ಪ್ರಕಾರ ಈ ರೋಗದಿಂದ 12 ಸಾವುಗಳು ಸಂಭವಿಸಿವೆ, ಈ ಪೈಕಿ ಆರು ಪ್ರಕರಣಗಳು ದೃಢ ಪಟ್ಟಿದ್ದು, ಇತರ ಆರು ಶಂಕಿತ ಪ್ರಕರಣಗಳಾಗಿವೆ.

ವರದಿಯಾದ ಪ್ರಕರಣಗಳಲ್ಲಿ 179 ರೋಗಿಗಳು ಚೇತರಿಸಿಕೊಂಡು ಆಸ್ಪತ್ರೆಗಳಿಂದ ಬಿಡುಗಡೆಯಾಗಿದ್ದಾರೆ. 24 ವ್ಯಕ್ತಿಗಳು ಈಗಲೂ ತೀವ್ರ ನಿಗಾ ಘಟಕ(ಐಸಿಯು)ದಲ್ಲಿ ದಾಖಲಾಗಿದ್ದು, 15 ಜನರಿಗೆ ವೆಂಟಿಲೇಟರ್‌ಗಳನ್ನು ಅಳವಡಿಸಲಾಗಿದೆ.

ಪುಣೆ ಮಹಾನಗರ ಪಾಲಿಕೆಗೆ ಇತ್ತೀಚಿಗೆ ಸೇರ್ಪಡೆಗೊಂಡ ಗ್ರಾಮಗಳು, ಪಿಂಪ್ರಿ ಚಿಂಚವಾಡ ನಗರಸಭೆ, ಪುಣೆ ಗ್ರಾಮೀಣ ಮತ್ತು ಇತರ ಜಿಲ್ಲೆಗಳು ಸೇರಿದಂತೆ ಹಲವಾರು ಪ್ರದೇಶಗಳಲ್ಲಿ ಜಿಬಿಎಸ್ ಪ್ರಕರಣಗಳು ವರದಿಯಾಗಿವೆ.

ಪರಿಸ್ಥಿತಿಯ ಮೇಲೆ ನಿಕಟ ನಿಗಾಯಿರಿಸಿರುವ ಆರೋಗ್ಯ ಅಧಿಕಾರಿಗಳು, ಜಾಗ್ರತೆ ವಹಿಸುವಂತೆ ಆಸ್ಪತ್ರೆಗಳಿಗೆ ಆಗ್ರಹಿಸಿದ್ದಾರೆ.

## ಅಮೆರಿಕಾದಲ್ಲಿ ಮತ್ತೊಂದು ಹಿಂದೂ ದೇವಾಲಯ ಧ್ವಂಸ

**ಅಮೆರಿಕಾ:** ಅಮೆರಿಕಾದಲ್ಲಿ ಮತ್ತೊಂದು ಹಿಂದೂ ದೇವಾಲಯ ಧ್ವಂಸಗೊಳಿಸಲಾಗಿದೆ. ಈ ಕುರಿತು ಅಮೆರಿಕಾದ ಬಿಎಪಿಎಸ್ ಅಧಿಕೃತ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಕಟಿಸಿದೆ. ಈ ಬಾರಿ ಚಿನೋ ಹಿಲ್ಸ್‌ನಲ್ಲಿ ಮತ್ತೊಂದು ಮಂದಿರವನ್ನು ಧ್ವಂಸಗೊಳಿಸಿದ್ದಾರೆ. ಹಿಂದೂ ಸಮುದಾಯವು ದ್ವೇಷದ ವಿರುದ್ಧ ದೃಢವಾಗಿ ನಿಲ್ಲುತ್ತದೆ. ಚಿನೋ ಹಿಲ್ಸ್ ಮತ್ತು ದಕ್ಷಿಣ ಕ್ಯಾಲಿಫೋರ್ನಿಯಾದ ಸಮುದಾಯದೊಂದಿಗೆ ನಾವು ಎಂದಿಗೂ ದ್ವೇಷ ಬೇರೂರಲು ಬಿಡುವುದಿಲ್ಲ. ನಮ್ಮ ಸಾಮಾನ್ಯ ಮಾನವೀಯತೆ ಮತ್ತು ನಂಬಿಕೆಯಿಂದ ಶಾಂತಿ ಮತ್ತು ಕರುಣೆ ಮೇಲುಗೈ ಸಾಧಿಸಲಿದೆ ಎಂದು ಎಕ್ಸ್‌ನಲ್ಲಿ ಬಿಎಪಿಎಸ್ ಬರೆದುಕೊಂಡಿದೆ. ಉತ್ತರ ಅಮೆರಿಕದ ಹಿಂದೂಗಳ ಒಕ್ಕೂಟ ಕೂಡ ಫಿ ನಲ್ಲಿ ಘಟನೆಯ ವಿವರಗಳನ್ನು ಹಂಚಿಕೊಂಡಿದ್ದು, ಲಾಸ್ ಏಂಜಲೀಸ್‌ನಲ್ಲಿ ಖಾಲಿಸ್ತಾನ್ ಜನಾಭಿಪ್ರಾಯ ಸಂಗ್ರಹ ಮುನ್ನ ಕ್ಯಾಲಿಫೋರ್ನಿಯಾದ ಐತಿಹಾಸಿಕ ದೇವಾಲಯ ಅಪವಿತ್ರಗೊಳಿಸಲಾಗಿದೆ ಎಂದು ತಿಳಿಸಿದೆ. ಈ ಬಾರಿ ಕ್ಯಾಲಿಫೋರ್ನಿಯಾದ ಚಿನೋ ಹಿಲ್ಸ್‌ನಲ್ಲಿರುವ ಐತಿಹಾಸಿಕ ಃ ಂಕಖ ದೇವಾಲಯವನ್ನು ಧ್ವಂಸಗೊಳಿಸಲಾಗಿದೆ. ಹಿಂದೂ ವಿರೋಧಿ ದ್ವೇಷವಿಲ್ಲ ಮತ್ತು ಹಿಂದೂಫೋಬಿಯಾ ಕೇವಲ ಕಪೋಲಕಲ್ಪಿತ ಎನ್ನುವ ಮಾಧ್ಯಮಗಳು ಮತ್ತು ಶಿಕ್ಷಣ ತಜ್ಞರು ಏನು ಹೇಳುತ್ತಾರೆ. ಲಾಸ್‌ಏಂಜಲೀಸ್‌ನಲ್ಲಿ ಖಾಲಿಸ್ತಾನ್ ಜನಾಭಿಪ್ರಾಯ ಸಂಗ್ರಹ ದಿನ ಹತ್ತಿರವಾಗುತ್ತಿದ್ದಂತೆ ದೇವಾಲಯ ಧ್ವಂಸ ಸಂಭವಿಸುವುದರಲ್ಲಿ ಆಶ್ಚರ್ಯವೇನಿಲ್ಲ ಎಂದು ಉತ್ತರ ಅಮೆರಿಕದ ಹಿಂದೂಗಳ ಒಕ್ಕೂಟ ಅಸಮಾಧಾನ ಹೊರಹಾಕಿದೆ.

## ಕುಲಭೂಷಣ್ ಜಾಧವ್ ಕಿಡ್ನ್ಯಾಪ್‌ಗೆ ಸಹಕರಿಸಿದ ಪಾಕ್ 'ವಿದ್ವಾಂಸ' ಗುಂಡೇಟಿಗೆ ಬಲಿ

**ಇಸ್ಲಾಮಾಬಾದ್:** ಭಾರತ ನೌಕಾಪಡೆಯ ಮಾಜಿ ಅಧಿಕಾರಿ ಕುಲಭೂಷಣ್ ಜಾಧವ್ ಅಪಹರಣಕ್ಕೆ ಪಾಕಿಸ್ತಾನದ ಐಎಸ್‌ಐ ಪತ್ತೆದಾರಿ ಏಜೆನ್ಸಿಗೆ ಸಹಾಯ ಮಾಡಿದ್ದ ಪಾಕ್ ವಿದ್ವಾಂಸ, ಅಪರಿಚಿತ ವ್ಯಕ್ತಿಯ ಗುಂಡೇಟಿಗೆ ಬಲಿಯಾಗಿದ್ದಾನೆ. ಶುಕ್ರವಾರ ರಾತ್ರಿ ರಿಸ್ಟಿವ್ ಬಲೂಚಿಸ್ತಾನ್ ಪ್ರದೇಶದಲ್ಲಿ ಅಪರಿಚಿತ ಬಂದೂಕುಧಾರಿಗಳು ಗುಂಡಿಕ್ಕಿ ಕೊಂದಿದ್ದಾರೆ. ಕೊಲೆಯಾದ ಮುಫ್ತಿ ಶಾ ಮಿರ್, ಬಲೂಚಿಸ್ತಾನದ ಪ್ರಮುಖ ಧಾರ್ಮಿಕ ವಿದ್ವಾಂಸ. ರಾತ್ರಿ ಪ್ರಾರ್ಥನೆಯ ನಂತರ ಟರ್ಬಾಟ್‌ನಲ್ಲಿ ಸ್ಥಳೀಯ ಮಸೀದಿ ಮಸೀದಿಯಿಂದ ಹೊರಬರುತ್ತಿದ್ದಂತೆ, ಬೈಕ್‌ನಲ್ಲಿ ಬಂದ ಬಂದೂಕುಧಾರಿಗಳು ಹಠಾತ್ ದಾಳಿ ನಡೆಸಿದ್ದಾರೆ. ಗಂಭೀರ ಗಾಯಗೊಂಡಿದ್ದ ಮುಫ್ತಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಿಸದೇ ಕೊನೆಯುಸಿರೆಳೆದಿದ್ದಾನೆ. ಮಿರ್ ಮೂಲಭೂತವಾದಿ ಪಕ್ಷದ ಜಮಿಯಟ್ ಉಲೆಮಾ-ಇ-ಇಸ್ಲಾಂ ಸದಸ್ಯನಾಗಿದ್ದ. ಶಸ್ತ್ರಾಸ್ತ್ರ ಮತ್ತು ಮಾನವ ಕಳ್ಳಸಾಗಣೆದಾರನಾಗಿ ಕೆಲಸ ಮಾಡಿದ್ದ. ಐಎಸ್‌ಐ ಜೊತೆ ನಂಟಿತ್ತು. ಆಗಾಗ್ಗೆ ಪಾಕಿಸ್ತಾನದ ಭಯೋತ್ಪಾದಕ ಶಿಬಿರಗಳಿಗೆ ಭೇಟಿ ನೀಡುತ್ತಿದ್ದ. ಭಯೋತ್ಪಾದಕರು ಭಾರತೀಯ ಪ್ರಾಂತ್ಯಕ್ಕೆ ಒಳನುಸುಳಲು ಸಹಾಯ ಮಾಡುತ್ತಿದ್ದ ಎಂದು ವರದಿಗಳಾಗಿವೆ. ಕಳೆದ ವಾರ ಬಲೂಚಿಸ್ತಾನದ ಮೂರನೇ ಅತಿದೊಡ್ಡ ನಗರವಾದ ಖುಜ್ದಾರ್‌ನಲ್ಲಿ ಮುಫ್ತಿ ಶಾ ಮಿರ್ ಪಕ್ಷದ ಇತರ ಇಬ್ಬರು ಸದಸ್ಯರನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು.

# ಟ್ರಂಪ್‌ಗೆ ಇರಾನ್ ತಿರುಗೇಟು



**ವಾಷಿಂಗ್ಟನ್:** ಅಮೆರಿಕದ ಜೊತೆ ಯಾವುದೇ ಕಾರಣಕ್ಕೂ ಮಾತುಕತೆ ಸಾಧ್ಯವಿಲ್ಲ ಎಂದ ಇರಾನ್ನ ಸರ್ವೋಚ್ಚ ನಾಯಕ ಖಮೇನಿ ತಿರುಗೇಟು ನೀಡಿದ್ದಾರೆ.

ಯಾವುದೇ ಕಾರಣಕ್ಕೂ ಟ್ರಂಪ್ ಜೊತೆ ಮಾತುಕತೆ ಸಾಧ್ಯ ಇಲ್ಲ. ಮಾತುಕತೆಗೆ ಆಹ್ವಾನಿಸುವ ಕೆಲ ಅತಿರೇಕಿ ಸರ್ಕಾರಗಳು ಸಮಸ್ಯೆ ಇತ್ಯರ್ಥ ಪಡಿಸಲು ಬಯಸಲ್ಲ. ಬದಲಿಗೆ ನಮ್ಮನ್ನು ಹಿಡಿತದಲ್ಲಿಡಲು, ಅವರ ನಿರೀಕ್ಷೆಗಳನ್ನು ನಮ್ಮ ಮೇಲೆ ಹೇರಲು ಪ್ರಯತ್ನಿಸುತ್ತಾರೆ ಎಂದು ಕಿಡಿಕಾರಿದ್ದಾರೆ.

ಜಾಗತಿಕ ಶತ್ರುಗಳ ಸಂಖ್ಯೆ ಕಡಿಮೆ ಮಾಡಲು ಮುಂದಾಗಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇದೀಗ ಸಾಂಪ್ರದಾಯಿಕ ಎದುರಾಳಿ ಇರಾನ್ (ಖಡಿಚಿಟಿ) ಜೊತೆಗೂ ಸಾಫ್ಟ್ ಕಾರ್ನರ್ ಸುಳಿವು ನೀಡಿದ್ದರು.

ಟ್ರಂಪ್ ಇರಾನ್ ಜೊತೆಗಿನ ನ್ಯೂಕ್ಲಿಯರ್ ಒಪ್ಪಂದದಲ್ಲಿ ಬದಲಾವಣೆ ತರಲು ಮುಂದಾಗಿದ್ದರು. ಈ ಕುರಿತು ಇರಾನ್ ನಾಯಕರಿಗೆ ಪತ್ರ ಬರೆದಿರುವ ಡೊನಾಲ್ಡ್ ಟ್ರಂಪ್, ಮಾತುಕತೆಗೆ ಒಪ್ಪುವಂತೆ ಇರಾನ್ ನಾಯಕರಲ್ಲಿ ಕೇಳಿಕೊಂಡಿದ್ದರು.

ಸಂದರ್ಶನವೊಂದರಲ್ಲಿ ಮಾತನಾಡಿದ್ದ ಟ್ರಂಪ್, ಇರಾನ್ ಜೊತೆಗಿನ ಪರಮಾಣು ಒಪ್ಪಂದದ ಬಗ್ಗೆ ಮಾತುಕತೆ ನಡೆಯಬೇಕು ಎಂಬುದು ನನ್ನ ನಿಲುವು ಎಂದಿದ್ದರು.

# ರಷ್ಯಾಕ್ಕೆ ಟ್ರಂಪ್ ಬೆದರಿಕೆ



**ವಾಷಿಂಗ್ಟನ್:** ಉಕ್ರೇನ್ ಶಾಂತಿ ಒಪ್ಪಂದಕ್ಕೆ ಸಮ್ಮತಿಸುವವರೆಗೆ ರಶ್ಯದ ವಿರುದ್ಧ ವ್ಯಾಪಕ ನಿರ್ಬಂಧ ಜಾರಿಗೊಳಿಸುವ ಸಾಧ್ಯತೆಯಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಯುದ್ಧರಂಗದಲ್ಲಿ ಈಗ ರಶ್ಯವು ಉಕ್ರೇನ್ ಮೇಲೆ ಕ್ಷಿಪಣಿಗಳ ಮಳೆಗರೆಯುತ್ತಿರುವ ಹಿನ್ನೆಲೆಯಲ್ಲಿ, ರಶ್ಯದ ವಿರುದ್ಧ ವ್ಯಾಪಕ ಬ್ಯಾಂಕಿಂಗ್ ನಿರ್ಬಂಧ, ನಿರ್ಬಂಧಗಳು ಮತ್ತು ಸುಂಕ ವಿಧಿಸುವ ಬಗ್ಗೆ ಗಂಭೀರವಾಗಿ ಚಿಂತಿಸುತ್ತಿದ್ದೇವೆ. ಕದನ ವಿರಾಮ ಹಾಗೂ ಶಾಂತಿ ಸ್ಥಾಪನೆಗೆ ಒಪ್ಪಂದ ಪೂರ್ಣಗೊಳ್ಳುವವರೆಗೆ ರಶ್ಯದ ವಿರುದ್ಧ ವ್ಯಾಪಕ ನಿರ್ಬಂಧ ಜಾರಿಗೊಳ್ಳಬೇಕು. ರಶ್ಯ ಮತ್ತು ಉಕ್ರೇನ್ಗಳ- ಕೈ ಮೀರುವ ಮುನ್ನ ತಕ್ಷಣ ಮಾತುಕತೆಗೆ ಮುಂದಾಗಿ ' ಎಂದವರು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

ಈ ಮಧ್ಯೆ, ಮೂರು ತಿಂಗಳ ಹಿಂದೆ ರಶ್ಯದ ಕಸ್ಕ್ ಪ್ರದೇಶದೊಳಗೆ ನುಗ್ಗಿ ಕೆಲವು ಭಾಗಗಳನ್ನು ನಿಯಂತ್ರಣಕ್ಕೆ ಪಡೆದಿದ್ದ ಉಕ್ರೇನ್ ಪಡೆಗಳ ಎದುರು ಈಗ ರಶ್ಯದ ಪಡೆಗಳ ಕೈ ಮೇಲಾಗಿದ್ದು ಉಕ್ರೇನ್ ನ ಸಾವಿರಾರು ಯೋಧರು ರಶ್ಯದ ಪಡೆಗಳಿಂದ ಸುತ್ತುವರಿದಿದ್ದಾರೆ. ಉಕ್ರೇನ್ ನ ಪಡೆಗಳನ್ನು ಎರಡು ಭಾಗಗಳಾಗಿ ಪ್ರತ್ಯೇಕಿಸುವಲ್ಲಿ ರಶ್ಯದ ಸೇನೆ ಯಶಸ್ವಿಯಾಗಿದ್ದು ಪರಸ್ಪರ ಸಂಪರ್ಕ ಸಾಧ್ಯವಾಗದೆ ಉಕ್ರೇನ್ ಯೋಧರು ಅಡಕತ್ತರಿಯಲ್ಲಿ ಸಿಲುಕಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ರಾಯ್ಟರ್ಸ್ ವರದಿ ಮಾಡಿದೆ.

# ದೇಶಾದ್ಯಂತ 'ತಾಪಮಾನ' ಹೆಚ್ಚಳ



**ದೆಹಲಿ:** ಹೋಳಿ ಹಬ್ಬ ಬರಲು ಇನ್ನೂ ಕೆಲವು ದಿನಗಳು ಉಳಿದಿವೆ ಆದರೆ ದೇಶದ ಹೆಚ್ಚಿನ ಭಾಗಗಳಲ್ಲಿ ಬೇಸಿಗೆ ಈಗಾಗಲೇ ಪ್ರಾರಂಭವಾಗಿದೆ. ಬೇಸಿಗೆ ಆರಂಭವಾಗಿರುವುದು ಮಾತ್ರವಲ್ಲ, ಫೆಬ್ರವರಿ ತಿಂಗಳು ಕೂಡ ತಾಪಮಾನದ ದಾಖಲೆಯನ್ನು ಮುರಿದಿದೆ.

ಯುರೋಪಿಯನ್ ಕೋಪರ್ನಿಕಸ್ ಹವಾಮಾನ ಬದಲಾವಣೆ ಸೇವೆ (ಅ3ಖ) ಪ್ರಕಾರ, ಕಳೆದ ಫೆಬ್ರವರಿ ತಿಂಗಳು ಹವಾಮಾನ ಇತಿಹಾಸದಲ್ಲಿ ದಾಖಲಾದ ಮೂರನೇ ಅತ್ಯಂತ ಬಿಸಿಯಾದ ಫೆಬ್ರವರಿ ತಿಂಗಳು. ಈ ಅವಧಿಯಲ್ಲಿ, ಮೇಲ್ಮೈ ಬಳಿಯ ತಾಪಮಾನವು 1850 ರಿಂದ 1900 ರವರೆಗಿನ ಅವಧಿಗಿಂತ 1.59 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿದೆ. ಹವಾಮಾನ ಬದಲಾವಣೆಯಿಂದಾಗಿ ಜಾಗತಿಕ ತಾಪಮಾನ ನಿರಂತರವಾಗಿ ಹೆಚ್ಚುತ್ತಿದೆ, ಇದು ಗಂಭೀರ ಕಾಯಿಲೆಗಳು ಹೆಚ್ಚಾಗುವ ಅಪಾಯಕ್ಕೂ ಕಾರಣವಾಗಬಹುದು, ಈ ಬಗ್ಗೆ ಎಲ್ಲಾ ಜನರು ಜಾಗರೂಕರಾಗಿರಬೇಕು ಎಂದು ತಜ್ಞರು ಹೇಳುತ್ತಾರೆ. ಕಳೆದ ಒಂದೂವರೆ ವರ್ಷಗಳಲ್ಲಿ ಈ ವರ್ಷದ ಫೆಬ್ರವರಿ ತಿಂಗಳು ಜಾಗತಿಕ ತಾಪಮಾನವು ಸರಾಸರಿಗಿಂತ ಒಂದೂವರೆ ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿದೆ ಎಂದು ದತ್ತಾಂಶಗಳು ತೋರಿಸುತ್ತವೆ. ದೇಶದ ಹಲವು ಭಾಗಗಳಲ್ಲಿ ಈಗಾಗಲೇ ಅನುಭವಿಸುತ್ತಿರುವ ಬಿಸಿಲಿನ ತೀವ್ರತೆಯನ್ನು ನೋಡಿದರೆ, ಮೇ-ಜೂನ್‌ನಲ್ಲಿ ದಾಖಲೆಯ ತಾಪಮಾನ ದಾಖಲಾಗಬಹುದು ಎಂದು ಆರೋಗ್ಯ ತಜ್ಞರು ಎಚ್ಚರಿಸಿದ್ದಾರೆ. ಹೆಚ್ಚುತ್ತಿರುವ ಉಷ್ಣತೆಯು ಅನೇಕ ಗಂಭೀರ ಕಾಯಿಲೆಗಳಿಗೆ ಕಾರಣವಾಗಬಹುದು, ಇವುಗಳ ಬಗ್ಗೆ ಮುಂಚಿತವಾಗಿ ಜಾಗರೂಕರಾಗಿರಬೇಕು. ಭಾರತ ಹವಾಮಾನ ಇಲಾಖೆ ಪ್ರಕಾರ, 2025 ರ ಫೆಬ್ರವರಿಯಲ್ಲಿ ದೇಶವು ಇದುವರೆಗಿನ ಅತ್ಯಂತ ಬಿಸಿಯಾದ ತಾಪಮಾನವನ್ನು ಅನುಭವಿಸಿದೆ. ಫೆಬ್ರವರಿ 26, 2025 ರಂದು, ಮುಂಬೈನಲ್ಲಿ ತಾಪಮಾನವು 38.7 ತಲುಪಿತು, ಇದು ಸಾಮಾನ್ಯಕ್ಕಿಂತ ಸುಮಾರು 5.9 ಲಿಅ ಹೆಚ್ಚಾಗಿದೆ. ಈ ಕಾರಣದಿಂದಾಗಿ, ಶಾಖದ ಅಲೆಯ ಎಚ್ಚರಿಕೆಯನ್ನು ಮುಂಚಿತವಾಗಿ ನೀಡಬೇಕಾಯಿತು.

# ಕಾನ್ಪುರದಲ್ಲಿ 13 ವರ್ಷದ ಬಾಲಕನನ್ನು ಅಪಹರಿಸಿ ಅತ್ಯಾಚಾರ



**ಕಾನ್ಪುರ:** 13 ವರ್ಷದ ಬಾಲಕನ ಮೇಲೆ ಇಬ್ಬರು ಅತ್ಯಾಚಾರ ಎಸಗಿ ಕೊಲೆ ಮಾಡಿರುವ ಘಟನೆ ಕಾನ್ಪುರದಲ್ಲಿ ನಡೆದಿದೆ. ಆರೋಪಿಗಳಲ್ಲಿ ಒಬ್ಬನನ್ನು ಬಂಧಿಸಲಾಗಿದ್ದು, ರಂಜಾನ್ ಸಮಯದಲ್ಲಿ ತಮ್ಮ ಸಂಗಾತಿಗಳು ತಮ್ಮೊಂದಿಗೆ ಲೈಂಗಿಕ ಕ್ರಿಯೆ ನಡೆಸಲು ನಿರಾಕರಿಸಿದ್ದಾರೆ ಎಂದು ಪೊಲೀಸರಿಗೆ ತಿಳಿಸಿದ್ದಾನೆ.

ಮಾರ್ಚ್ 5 ರಂದು ಹದಿಹರೆಯದವರು ಜಿಮ್ ಗೆ ತೆರಳುತ್ತಿದ್ದಾಗ ಈ ಘಟನೆ ನಡೆದಿದೆ. ಆರೋಪಿಗಳಾದ ಅಜರ್ ಮತ್ತು ಹುಸೇನಿ ಆತನನ್ನು ಅಪಹರಿಸಿ, ಕಾಡಿಗೆ ಕರೆದೊಯ್ದು, ಕಟ್ಟಿಹಾಕಿ ಬೆದರಿಕೆ ಹಾಕಿದ್ದಾರೆ ಎಂದು ಡಿಸಿಪಿ ಬ್ರಜೇಂದ್ರ ದ್ವಿವೇದಿ ತಿಳಿಸಿದ್ದಾರೆ.

ನಂತರ ಅವರು ಅವನ ಮೇಲೆ ಅತ್ಯಾಚಾರ ಎಸಗಿ, ಹಗ್ಗದಿಂದ ಕತ್ತು ಹಿಸುಕಿ, ಶವವನ್ನು ಬಾವಿಗೆ ಎಸೆದರು ಎಂದು ಹುಸ್ಸೈನಿ ಬಂಧನದ ನಂತರ ಪೊಲೀಸರಿಗೆ ತಿಳಿಸಿದ್ದಾನೆ. ಅಜರ್ ಇನ್ನೂ ತಲೆಮರೆಸಿಕೊಂಡಿದ್ದು, ಆತನಿಗಾಗಿ ಶೋಧ ನಡೆಯುತ್ತಿದೆ.

ಬಂಧಿತ ಇಬ್ಬರು ಆರೋಪಿಗಳಲ್ಲಿ ಒಬ್ಬನಾದ ಹುಸೇನಿ, ಪೊಲೀಸರಿಗೆ ವಿಚಾರಣೆಯ ಸಮಯದಲ್ಲಿ, ಪವಿತ್ರ ರಂಜಾನ್ ತಿಂಗಳಲ್ಲಿ ತನ್ನ ಮತ್ತು ಅಜರ್ ಅವರ ಸಂಗಾತಿಗಳು ಲೈಂಗಿಕ ಸಂಬಂಧ ಹೊಂದಲು ನಿರಾಕರಿಸಿದ್ದರು ಎಂದು ಬಹಿರಂಗಪಡಿಸಿದ್ದಾರೆ.

ನನ್ನ ಗೆಳತಿ ಮತ್ತು ಅಜ್ಜು (ಅಜರ್) ಅವರ ಪತ್ನಿ ರಂಜಾನ್ ಸಮಯದಲ್ಲಿ ನಮ್ಮೊಂದಿಗೆ ಲೈಂಗಿಕ ಸಂಬಂಧ ಹೊಂದಲು ನಿರಾಕರಿಸಿದರು. ಆದರೆ ನಾವು ಅವರೊಂದಿಗೆ ಲೈಂಗಿಕ ಸಂಬಂಧ ಹೊಂದಲು ತುಂಬಾ ಉತ್ಸುಕರಾಗಿದ್ದೇವೆ. ರಂಜಾನ್ ಮುಗಿಯುವವರೆಗೆ ಈ ಇಬ್ಬರು ನಮ್ಮೊಂದಿಗೆ ಲೈಂಗಿಕ ಸಂಬಂಧ ಹೊಂದದಿದ್ದರೆ ನಾವು ಏನು ಮಾಡಬೇಕೆಂದು ಯೋಚಿಸಿದೆವು. ಇದರ ನಂತರ, ನಾವು 13 ವರ್ಷದ ಹುಡುಗನ ಮೇಲೆ ಕಣ್ಣಿಟ್ಟೆವು. ಅವನು ಸುಂದರವಾಗಿದ್ದನು ಎಂದು ಹುಸೇನಿ ಪೊಲೀಸರಿಗೆ ತಿಳಿಸಿದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ‘ಹುಡುಗರು’ ಚಿತ್ರದಲ್ಲಿ ಅಪ್ಪು ತಂಗಿ ಪಾತ್ರ ಮಾಡಿದ್ದ ಅಭಿನಯಗೆ ಮದುವೆ ಫಿಕ್ಸ್





ಬಹುಭಾಷಾ ನಟಿ ಅಭಿನಯ ಎಂಗೇಜ್ ಆಗಿರೋದಾಗಿ ಸೋಶಿಯಲ್ ಮೀಡಿಯಾದಲ್ಲಿ ಗುಡ್ ನ್ಯೂಸ್ ಕೊಟ್ಟಿದ್ದಾರೆ. ‘ಹುಡುಗರು’ ಚಿತ್ರದಲ್ಲಿ ಪುನೀತ್ ರಾಜ್‌ಕುಮಾರ್‌ಗೆ ತಂಗಿಯಾಗಿ ನಟಿಸಿದ್ದ ಅಭಿನಯಗೆ ಕಂಕಣ ಭಾಗ್ಯ ಕೂಡಿ ಬಂದಿದೆ.

ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ ಫೋಟೋವನ್ನು ಹಂಚಿಕೊಂಡು ತಮ್ಮ ಅಭಿಮಾನಿಗಳಿಗೆ ಗುಡ್ ನ್ಯೂಸ್ ನೀಡಿದ್ದಾರೆ. ಅಭಿನಯ ಹಂಚಿಕೊಂಡಿರುವ ಫೋಟೋದಲ್ಲಿ, ದೇವಸ್ಥಾನದ ಗಂಟೆಯ ಮೇಲೆ ಉಂಗುರ ಬದಾಲಾಯಿಸಿಕೊಂಡಿರುವ ತಮ್ಮ ಭಾವಿ ಪತಿ ಮತ್ತು ತಮ್ಮ ಕೈಯನ್ನು ಇಟ್ಟಿದ್ದಾರೆ. ಆದರೆ ಅಭಿನಯ ಮದುವೆ ಆಗುತ್ತಿರುವ ಹುಡುಗ ಯಾರು ಎಂಬುದನ್ನು ಅವರು ರಿವೀಲ್ ಮಾಡಿಲ್ಲ. ನಟಿಗೆ ಅನೇಕರು ಶುಭಕೋರಿದ್ದಾರೆ.

ಅಂದಹಾಗೆ, ಇತ್ತೀಚಿನ ಸಂದರ್ಶನವೊಂದರಲ್ಲಿ, ನಾನು ನನ್ನ ಬಾಲ್ಯದ ಸ್ನೇಹಿತನೊಂದಿಗೆ ರಿಲೇಷನ್ ಶಿಪ್‌ನಲ್ಲಿ ಇದ್ದೇನೆ. ನಾವು 15 ವರ್ಷಗಳಿಂದ ಸುಂದರವಾದ ಬಾಂಧವ್ಯವನ್ನು ಹಂಚಿಕೊಂಡಿದ್ದೇವೆ. ಅವರ ಜೊತೆ ನಾನು ಮುಕ್ತವಾಗಿ ಹಲವು ವಿಚಾರಗಳನ್ನು ಚರ್ಚಿಸುತ್ತೇನೆ. ಮದುವೆ ಬಗ್ಗೆ ಇನ್ನೂ ಯೋಚಿಸಿಲ್ಲ, ಅದಕ್ಕೆ ಸಾಕಷ್ಟು ಸಮಯವಿದೆ. ಆ ಹೆಜ್ಜೆ ಇಡುವ ಮೊದಲು ನಾನು ನನ್ನದೇ ಆದ ವೃತ್ತಿಪರ ಮತ್ತು ವೈಯಕ್ತಿಕವಾಗಿ ಸಾಧಿಸಬೇಕಾದ ಹಲವು ಗುರಿಗಳನ್ನು ಹೊಂದಿದ್ದೇನೆ ಎಂದು ತಮ್ಮ ಪ್ರೀತಿಯ ವಿಚಾರವನ್ನು ಹಂಚಿಕೊಂಡಿದ್ದರು. ಈ ಬೆನ್ನಲ್ಲೇ ಅವರು ಬಾಲ್ಯದ ಸ್ನೇಹಿತನ ಜೊತೆಗಿನ ನಟಿಯ ಎಂಗೇಜ್‌ಮೆಂಟ್ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ.

ಇನ್ನೂ ಅಭಿನಯಗೆ ಮಾತು ಬಾರದೇ ಇದ್ದರೂ, ಕಿವಿ ಕೇಳದೇ ಇದ್ದರೂ ಇವರ ನಟನೆಗೆ ಮನಸೋಲದ ಅಭಿಮಾನಿಗಳೇ ಇಲ್ಲ. ತೆಲುಗು, ತಮಿಳು, ಕನ್ನಡದಲ್ಲಿ ಅವರು ಸಕ್ರಿಯರಾಗಿದ್ದಾರೆ. ಸದ್ಯ ನಯನತಾರಾ ನಟನೆಯ ‘ಮೂಕುತಿ ಅಮ್ಮನ್ 2’ ಸಿನಿಮಾದಲ್ಲಿ ಅಭಿನಯ ನಟಿಸುತ್ತಿದ್ದಾರೆ.

# ‘ಪುಷ್ಪ 2’ ಬೆಡಗಿ ಶ್ರೀಲೀಲಾಗೆ ಮೆಗಾಸ್ಟಾರ್ ಕಡೆಯಿಂದ ಸ್ಪೆಷಲ್ ಗಿಫ್ಟ್

ಕನ್ನಡತಿ ಶ್ರೀಲೀಲಾ ಸದ್ಯ ಟಾಲಿವುಡ್‌ನಲ್ಲಿ ಬೇಡಿಕೆಯ ನಟಿಯಾಗಿದ್ದಾರೆ. ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಿರುವ ಶ್ರೀಲೀಲಾಗೆ ಮೆಗಾಸ್ಟಾರ್ ಚಿರಂಜೀವಿ ಕಡೆಯಿಂದ ವಿಶೇಷ ಉಡುಗೊರೆ ಸಿಕ್ಕಿದೆ.

ಮಹಿಳಾ ದಿನಾಚರಣೆಯ ಪ್ರಯುಕ್ತ ಚಿರಂಜೀವಿ ಅವರು ‘ವಿಶ್ವಂಭರ’ ಸಿನಿಮಾದ ಸೆಟ್‌ನಲ್ಲಿದ್ದರು. ಈ ವೇಳೆ, ಸೆಟ್‌ನಲ್ಲಿ ಶ್ರೀಲೀಲಾಗೆ ದುಬಾರಿ ಉಡುಗೊರೆಯೊಂದನ್ನು ಕೊಟ್ಟಿದ್ದಾರೆ. ದುರ್ಗಾ ದೇವಿಯ ಮುಖವಿರುವ ಬೆಳ್ಳಿ ಶಂಖವನ್ನು ನಟಿಗೆ ಗಿಫ್ಟ್ ಆಗಿ ನೀಡಿದ್ದಾರೆ. ಅದಕ್ಕೆ ಶ್ರೀಲೀಲಾ ಕೂಡ ಸೋಶಿಯಲ್ ಮೀಡಿಯಾದಲ್ಲಿ ಚಿರಂಜೀವಿ ಜೊತೆಗಿನ ಫೋಟೋ ಶೇರ್ ಮಾಡಿ ಥ್ಯಾಂಕ್ಯೂ ಎಂದಿದ್ದಾರೆ.

ಇನ್ನೂ ‘ವಿಶ್ವಂಭರ’ ಸಿನಿಮಾ ಸೆಟ್‌ನಲ್ಲಿ ಪಿಂಕ್ ಕಲರ್ ಡ್ರೆಸ್‌ನಲ್ಲಿ ಶ್ರೀಲೀಲಾ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡಿರೋದು ಚರ್ಚೆಗೆ ಗ್ರಾಸವಾಗಿದೆ. ಅವರು ಕೂಡ ಈ ಸಿನಿಮಾದಲ್ಲಿ ನಟಿಸುತ್ತಿದ್ದಾರಾ? ಎಂಬ ಅನುಮಾನ ಅಭಿಮಾನಿಗಳಲ್ಲಿ ಮೂಡಿದೆ. ಈ ಚಿತ್ರವು ಮೇ 9ರಂದು ರಿಲೀಸ್ ಆಗಲಿದ್ದು, ಅಂದು ಶ್ರೀಲೀಲಾ ಇರುವಿಕೆಯ ಬಗ್ಗೆ ಉತ್ತರ ಸಿಗಲಿದೆ.

ಇನ್ನೂ ನಿತಿನ್ ಜೊತೆ ‘ರಾಬಿನ್‌ಹುಡ್’, ಪವನ್ ಕಲ್ಯಾಣ್ ಜೊತೆ ‘ಉಸ್ತಾದ್ ಭಗತ್ ಸಿಂಗ್’, ರವಿತೇಜ ಜೊತೆ ‘ಮಾಸ್ ಜಾತ್ರಾ’, ಬಾಲಿವುಡ್‌ನಲ್ಲಿ ಸೈಫ್ ಅಲಿ ಖಾನ್‌ಗೆ ನಾಯಕಿಯಾಗಿ ಹೊಸ ಸಿನಿಮಾ ಸೇರಿದಂತೆ ಹಲವು ಚಿತ್ರಗಳು ಶ್ರೀಲೀಲಾ ಕೈಯಲ್ಲಿವೆ.



# ಅಪ್ಪುಗಾಗಿ ‘ನೀನೇ ರಾಜಕುಮಾರ’ ಹಾಡನ್ನು ಸ್ಟೈಲಿಶ್ ಆಗಿ ಹಾಡಿದ ವಿದೇಶಿ ಮಹಿಳೆ

ದಿವಂಗತ ಪುನೀತ್ ರಾಜ್‌ಕುಮಾರ್ ಮೇಲಿನ ಅಭಿಮಾನಕ್ಕಾಗಿ ಬೆಂಗಳೂರಿನ ಪಬ್‌ವೊಂದರಲ್ಲಿ ವಿದೇಶಿ ಮಹಿಳೆ ಹಾಡು ಹಾಡಿದ್ದಾರೆ. ಅಪ್ಪುಗಾಗಿ ‘ನೀನೇ ರಾಜಕುಮಾರ’ ಹಾಡನ್ನು ಹಾಡಿ ಸೈ ಎನಿಸಿಕೊಂಡಿದ್ದಾರೆ. ಪುನೀತ್ ಮೇಲಿನ ವಿದೇಶಿ ಮಹಿಳೆಯ ಪ್ರೀತಿ ಕಂಡು ಫ್ಯಾನ್ಸ್ ಕೊಂಡಾಡಿದ್ದಾರೆ.



‘ನೀನೇ ರಾಜಕುಮಾರ’ ಹಾಡನ್ನ ಸ್ಟೈಲೀಶ್ ಆಗಿ ವಿದೇಶಿ ಮಹಿಳೆ ಹಾಡಿರುವ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ. ವಿದೇಶಿ ಮಹಿಳೆ ಹಾಡುವಾಗ ಪಬ್‌ನಲ್ಲಿ ಸೇರಿದ್ದ ಜನರು ಕೂಡ ಹಾಡು ಕೇಳಿ ಎಂಜಾಯ್ ಮಾಡಿದ್ದಾರೆ. ಇನ್ನೂ ಮಾರ್ಚ್ 17ಕ್ಕೆ ಪುನೀತ್ ರಾಜ್‌ಕುಮಾರ್ 50ನೇ ವರ್ಷದ ಹುಟ್ಟುಹಬ್ಬ ಈ ಹಿನ್ನೆಲೆ ಈ ತಿಂಗಳು ಪೂರ್ತಿ ಅಪ್ಪು ಹಾಡುಗಳನ್ನು ಹಾಡುವ ಮೂಲಕ ಗೌರವ ಸಲ್ಲಿಸಲಿದ್ದಾರೆ.

ಅಂದಹಾಗೆ, ಇದೇ ಮಾರ್ಚ್ 14ರಂದು ಪುನೀತ್ ರಾಜ್‌ಕುಮಾರ್ ನಟಿಸಿದ್ದ ಅಪ್ಪು ಸಿನಿಮಾ ಮರುಬಿಡುಗಡೆ ಆಗುತ್ತಿದೆ. ನಟನ 50ನೇ ಹುಟ್ಟುಹಬ್ಬದ ಹಿನ್ನೆಲೆ ‘ಅಪ್ಪು’ ಸಿನಿಮಾ ರೀ ರಿಲೀಸ್ ಆಗಲಿದೆ.



# ‘ನಾನು ನಿನ್ನ ಪ್ರೀತಿಸುವೆ’ ಎಂದ ನಟಿ

‘ಬಿಗ್ ಬಾಸ್ ಕನ್ನಡ 10’ರ ಸ್ಪರ್ಧಿ, ತನಿಷಾ ಕುಪ್ಪಂಡ ಅವರು ಸಿನಿಮಾ ಮತ್ತು ಉದ್ಯಮ ಕ್ಷೇತ್ರಗಳಲ್ಲಿ ಸಕ್ರಿಯರಾಗಿದ್ದಾರೆ. ಇದರ ನಡುವೆ ‘ನಾನು ನಿನ್ನ ಪ್ರೀತಿಸುವೆ’ ಎಂದು ನಟಿ ರೀಲ್ಸ್ ಮಾಡಿ ಗಮನ ಸೆಳೆದಿದ್ದಾರೆ. ವಿಡಿಯೋ ನೋಡಿದ ಅಭಿಮಾನಿಗಳು ನಟಿ ಪ್ರೀತಿಯಲ್ಲಿ ಬಿದ್ದಿದ್ದಾರೆ ಪಕ್ಕಾ ಎಂದೇ ಸೋಶಿಯಲ್ ಮೀಡಿಯಾದಲ್ಲಿ ಕಾಮೆಂಟ್ ಮಾಡುತ್ತಿದ್ದಾರೆ.



ತನಿಷಾ ಪ್ರೀತಿಯಲ್ಲಿ ಬಿದ್ದಿರೋದು ಪಕ್ಕಾ ಎಂದ ಫ್ಯಾನ್ಸ್

ತನಿಷಾ ಕುಪ್ಪಂಡ ಹೊಸ ರೀಲ್ಸ್‌ವೊಂದನ್ನು ಹಂಚಿಕೊಂಡಿದ್ದಾರೆ. ನನ್ನಂತ ಹುಡುಗಿ ಸಿಗೋಕೆ ಪುಣ್ಯ ಮಾಡಿರಬೇಕು. ನಾನು ನಿನ್ನ ಪ್ರೀತಿಸುವೆ ಹಾಡಿಗೆ ಮಸ್ತ್ ಸ್ಟೆಪ್ಸ್ ಹಾಕಿ ನಾಚಿ ನೀರಾಗಿದ್ದಾರೆ. ರೀಲ್ಸ್ ನೋಡಿದ ಫ್ಯಾನ್ಸ್ ತನಿಷಾ ಮೆಚ್ಚಿರೋ ಆ ಹುಡುಗ ಯಾರು ಎಂದೆಲ್ಲಾ ಚರ್ಚಿಸುತ್ತಿದ್ದಾರೆ.

ಇನ್ನೂ ‘ಬಿಗ್ ಬಾಸ್’ ಶೋ ಬಳಿಕ ತನಿಷಾಗೆ ಬೇಡಿಕೆ ಹೆಚ್ಚಾಗಿದೆ. ಹೊಸ ಪ್ರಾಜೆಕ್ಟ್‌ಗಳಿಗೆ ಸಿನಿಮಾ ಆಫರ್ಸ್ ಅರಸಿ ಬರುತ್ತಿವೆ. ಸದ್ಯ ಅವರು ಕೋಮಲ್‌ಗೆ ಜೋಡಿಯಾಗಿ ‘ಕೋಣ’ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಈ ಚಿತ್ರವನ್ನು ತನಿಷಾ ಕುಪ್ಪಂಡ ಅವರೇ ನಿರ್ಮಾಣ ಮಾಡುತ್ತಿದ್ದಾರೆ.

ತನಿಷಾ ನಿರ್ಮಾಣದ ಸಿನಿಮಾದಲ್ಲಿ ಬಿಗ್ ಬಾಸ್ ಖ್ಯಾತಿಯ ಗೋಲ್ಡ್ ಸುರೇಶ್, ನಮ್ರತಾ ಗೌಡ, ಶಿಶಿರ್ ಶಾಸ್ತ್ರಿ ಸೇರಿದಂತೆ ಅನೇಕರು ನಟಿಸಿದ್ದಾರೆ. ಅವರ ಪಾತ್ರ ಹೇಗಿರಲಿದೆ ಎಂಬುದರ ಬಗ್ಗೆ ಫ್ಯಾನ್ಸ್‌ಗೆ ಕುತೂಹಲ ಕೆರಳಿಸಿದೆ.



# ಟೀಂ ಇಂಡಿಯಾ ಚಾಂಪಿಯನ್

## ಭಾರತದ ಪರ ವಿಶಿಷ್ಟ ದಾಖಲೆ ಬರೆದ ಕೊಹ್ಲಿ

**ದುಬೈ:** ಭಾರತದ ಪರ ವಿರಾಟ್ ಕೊಹ್ಲಿ ವಿಶಿಷ್ಟ ಸಾಧನೆ ಮಾಡಿದ್ದಾರೆ. 1 ಏಕದಿನದ ವಿಶ್ವಕಪ್, 1 ಟಿ 20 ವಿಶ್ವಕಪ್, 2 ಚಾಂಪಿಯನ್ಸ್ ಟ್ರೋಫಿ ಗೆದ್ದ ಭಾರತ ತಂಡದ ಏಕೈಕ ಸದಸ್ಯ ಎಂಬ ಹೆಗ್ಗಳಿಕೆಗೆ ಕೊಹ್ಲಿ ಪಾತ್ರವಾಗಿದ್ದಾರೆ.

2011 ವಿಶ್ವಕಪ್ ಕ್ರಿಕೆಟ್ ಫೈನಲ್‌ನಲ್ಲಿ ಭಾರತ ಶ್ರೀಲಂಕಾವನ್ನು ಸೋಲಿಸಿ ಎರಡನೇ ಚಾಂಪಿಯನ್ ಪಟ್ಟವನ್ನು ಅಲಂಕರಿಸಿತ್ತು. ಈ ಪಂದ್ಯದಲ್ಲಿ ಕೊಹ್ಲಿ49 ಎಸೆತಗಳಲ್ಲಿ 35 ರನ್ ಹೊಡೆದಿದ್ದರು.

2013 ರಲ್ಲಿ ನಡೆದ ಚಾಂಪಿಯನ್ಸ್ ಟ್ರೋಫಿ ಫೈನಲ್‌ನಲ್ಲಿ ಇಂಗ್ಲೆಂಡ್ ವಿರುದ್ಧ ಭಾರತ 5 ರನ್ ಗಳಿಂದ ಗೆದ್ದಿತ್ತು. ಈ ಪಂದ್ಯದಲ್ಲಿ ಕೊಹ್ಲಿ43 ರನ್ ಬಾರಿಸಿದ್ದರು.

2024 ಟಿ20 ವಿಶ್ವಕಪ್ ಫೈನಲ್‌ನಲ್ಲಿ ಭಾರತ ಆಫ್ರಿಕಾ ವಿರುದ್ಧ 7 ರನ್‌ಗಳ ರೋಚಕ ಜಯ ಸಾಧಿಸಿತ್ತು. ಈ ಪಂದ್ಯದಲ್ಲಿ ಕೊಹ್ಲಿ 76 ರನ್(59 ಎಸೆತ, 6 ಬೌಂಡರಿ, 2 ಸಿಕ್ಸರ್) ಸಿಡಿಸಿದ್ದರು. ಈ ಅತ್ಯುತ್ತ ಮ ಆಟಕ್ಕೆ ಕೊಹ್ಲಿಗೆ ಪಂದ್ಯಶ್ರೇಷ್ಠ ಪ್ರಶಸ್ತಿ ಲಭಿಸಿತ್ತು.




ನಿನ್ನೆ ನಡೆದ ಚಾಂಪಿಯನ್ಸ್ ಟ್ರೋಫಿ ಫೈನಲ್ ಪಂದ್ಯದಲ್ಲಿ ಕೊಹ್ಲಿ 1 ರನ್ ಗಳಿಸಿ ಔಟಾದರು. ಹೀಗಿದ್ದರೂ ಸೆಮಿಫೈನಲ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ ಕೊಹ್ಲಿ 84 ರನ್ ಹೊಡೆದರೆ, ಪಾಕಿಸ್ತಾನದ ವಿರುದ್ಧ ಅಜೇಯ 100 ರನ್ ಹೊಡೆದಿದ್ದರು. ಈ ಎರಡೂ ಪಂದ್ಯದಗಳಲ್ಲಿ ಪಂದ್ಯಶ್ರೇಷ್ಠ ಗೌರವಕ್ಕೆ ಪಾತ್ರವಾಗಿದ್ದರು.

ಧೋನಿ ನಾಯಕತ್ವದಲ್ಲಿ ಏಕದಿನ ವಿಶ್ವಕಪ್, ಚಾಂಪಿಯನ್ಸ್ ಟ್ರೋಫಿಯನ್ನು ಕೊಹ್ಲಿ ಗೆದ್ದರೆ ರೋಹಿತ್ ನಾಯಕತ್ವದಲ್ಲಿ ಟಿ20 ವಿಶ್ವಕಪ್, ಚಾಂಪಿಯನ್ಸ್ ಟ್ರೋಫಿಯನ್ನು ಗೆದ್ದಿದ್ದಾರೆ.

# ತವರಿನಲ್ಲೇ ಕ್ಷೀಣಿಸುತ್ತಿದೆ ಕಾವೇರಿ ಒಡಲು: ಜನರಲ್ಲಿ ಹೆಚ್ಚಿದ ಆತಂಕ

**ಮಡಿಕೇರಿ:** ಮಳೆಗಾಲದಲ್ಲಿ ತುಂಬಿ ಹರಿಯುತ್ತಿದ್ದ ಜೀವನದಿ ಕಾವೇರಿಯಲ್ಲಿ ಮಾರ್ಚ್ ಆರಂಭದಲ್ಲೇ ನೀರಿನ ಹರಿವಿನ ಪ್ರಮಾಣ ಬಹುತೇಕ ಕ್ಷೀಣಿಸುತ್ತಿದೆ. ಹೀಗೆ ಮುಂದುವರಿದರೆ ಮುಂದಿನ ಒಂದು ವಾರದಲ್ಲಿ ಕುಶಾಲನಗರ ಸೇರಿದಂತೆ ಸುತ್ತಮುತ್ತ ವ್ಯಾಪ್ತಿಯ ನಾಗರಿಕರಿಗೆ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

ಕೊಡಗಿನಲ್ಲಿ ಹುಟ್ಟಿ ನಾಡಿನ ಉದ್ದಗಲಕ್ಕೂ ಹರಿದು ರೈತರ ಪಾಲಿಗೆ ವರದಾನವಾಗಿರುವ ಕಾವೇರಿ ನದಿಯ ಒಡಲು ಇದೀಗ ಕೊಡಗಿನಲ್ಲಿಯೇ ಬರಿದಾಗುತ್ತಿದೆ. ವರ್ಷದ 4 ತಿಂಗಳು ತುಂಬಿ ಹರಿಯುವ ಕಾವೇರಿಯಲ್ಲಿ ಇದೀಗ ನೀರಿನ ಹರಿವಿನ ಕೊರತೆ ಎದ್ದು ಕಾಣುತ್ತಿದೆ. ಈ ಬಾರಿ ನಿರಂತರವಾಗಿ ಮಳೆ ಸುರಿದರೂ ಕಾವೇರಿ ನದಿ ಜಲಮೂಲಗಳು ಅಲ್ಲಲ್ಲಿ ಬತ್ತಿಹೋಗಿರುವ ದೃಶ್ಯ ಗೋಚರಿಸುತ್ತಿವೆ. ಕಳೆದ ಕೆಲ ದಿನಗಳಿಂದ ಮೂಲ ಕಾವೇರಿಯಿಂದ ಕುಶಾಲನಗರದವರೆಗೆ ಕೃಷಿಕರು ಮತ್ತು ವಾಣಿಜ್ಯ ಚಟುವಟಿಕೆಗಳಿಗೆ ಅವಶ್ಯವಿರುವ ನೀರಿಗಾಗಿ ಸಾವಿರಾರು ಸಂಖ್ಯೆಯಲ್ಲಿ ಮೋಟಾರ್ ಪಂಪ್ ಗಳನ್ನು ಅಳವಡಿಸಿದ್ದಾರೆ. ಇದರಿಂದ ನದಿಯಲ್ಲಿ



ನೀರಿನ ಹರಿವು ಅಲ್ಲಲ್ಲಿ ಬತ್ತಿ ಹೋಗುತ್ತಿದೆ. ನದಿ ತಟದಲ್ಲಿರುವ ಕೃಷಿಕರು ವಾಣಿಜ್ಯ ಬೆಳೆ ಸೇರಿದಂತೆ ವಾಣಿಜ್ಯ ಕಟ್ಟಡಗಳಿಗೆ ನೀರು ಪಂಪ್ ಮಾಡುತ್ತಿರುವುದರಿಂದ ನೀರಿನ ಕೊರತೆ ಉಂಟಾಗಿದೆ ಎನ್ನುವುದು ಸ್ಥಳೀಯರ ಅಭಿಪ್ರಾಯ.

ಇನ್ನೂ ಕುಶಾಲನಗರ ಮತ್ತು ಮುಳ್ಳುಸೋಗೆ ವ್ಯಾಪ್ತಿಯ ಪಟ್ಟಣಕ್ಕೆ ನಿತ್ಯ 35 ಲಕ್ಷ ಲೀಟರ್ ನೀರಿನ ಅಗತ್ಯವಿದ್ದು, ಜಲಮಂಡಳಿ ಮೂಲಕ ಕೇವಲ 28 ಲಕ್ಷ ಲೀಟರ್ ನೀರನ್ನು ಪೂರೈಸಲಾಗುತ್ತಿದೆ. ಒಂದೆಡೆ ಪಟ್ಟಣ ಪಂಚಾಯಿತಿಯಿಂದ ನೀರು ಸರಬರಾಜು ಮಾಡುತ್ತಿದ್ದು, ಮತ್ತೊಂದೆಡೆ ನೀರು ಪೋಲಾಗದಂತೆ ಪ್ರತಿಯೊಬ್ಬರೂ ಎಚ್ಚರವಹಿಸಬೇಕೆಂದು ಎಂದು ಅಧಿಕಾರಿಗಳು ಸೂಚನೆ ನೀಡುತ್ತಿರುವುದು ಸಾಮಾನ್ಯವಾಗಿದೆ. ಅಲ್ಲದೇ ಕಳೆದ 5-6 ವರ್ಷಗಳಲ್ಲಿ ಪ್ರವಾಹ ಬಂದು ಭೂಕುಸಿತವಾದ ಪರಿಣಾಮದಿಂದ ಸಾಕಷ್ಟು ಹೂಳು ಕಾವೇರಿ ನದಿಯ ಒಡಲು ಸೇರಿದೆ. ಹೀಗಾಗಿ, ನೀರಿನ ಶೇಖರಣೆ ಸಾಕಷ್ಟು ಕುಂಠಿತವಾಗಿದೆ ಎನ್ನುವುದು ಈ ಭಾಗದ ಜನರ ಅಭಿಪ್ರಾಯ.

# ರೋಹಿತ್ ಪಂದ್ಯಶ್ರೇಷ್ಠ : ಧೋನಿ ಬಳಿಕ ಈ ಸಾಧನೆ ಮಾಡಿದ 2ನೇ ಭಾರತೀಯ ಕ್ಯಾಪ್ಟನ್

**ದುಬೈ:** ಚಾಂಪಿಯನ್ಸ್ ಟ್ರೋಫಿ ಫೈನಲ್ ಪಂದ್ಯದಲ್ಲಿ ಗರಿಷ್ಠ ರನ್ ಬಾರಿಸುವ ಮೂಲಕ ಪಂದ್ಯಶ್ರೇಷ್ಠ ಪ್ರಶಸ್ತಿ ಗಿಟ್ಟಿಸಿಕೊಂಡ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಚಾಂಪಿಯನ್ಸ್ ಟ್ರೋಫಿಯಲ್ಲಿ ವಿಶೇಷ ಸಾಧನೆಗೆ ಪಾತ್ರರಾದರು.

ಹೌದು.. ದುಬೈನ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ 83 ಎಸೆತಗಳಲ್ಲಿ 76 ರನ್ (3 ಸಿಕ್ಸರ್, 7 ಬೌಂಡರಿ) ಬಾರಿಸಿದ ಹಿಟ್‌ಮ್ಯಾನ್ ಪಂದ್ಯಶ್ರೇಷ್ಠ ಪ್ರಶಸ್ತಿ ತಮ್ಮದಾಗಿಸಿಕೊಂಡರು. ಈ ಮೂಲಕ ಐಸಿಸಿ ಟೂರ್ನಿಯ ಫೈನಲ್ ಪಂದ್ಯದಲ್ಲಿ ಪಂದ್ಯಶ್ರೇಷ್ಠಕ್ಕೆ ಪಾತ್ರರಾದ ಟೀಂ ಇಂಡಿಯಾದ 2ನೇ ನಾಯಕ ಹಾಗೂ ವಿಶ್ವದ ನಾಲ್ಕನೇ ಕ್ಯಾಪ್ಟನ್ ಎಂಬ ಸಾಧನೆಗೆ ಪಾತ್ರರಾದರು. 2011ರ ಏಕದಿನ ವಿಶ್ವಕಪ್ ಟೂರ್ನಿಯನ್ನಿ ಎಂ.ಎಸ್ ಧೋನಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾಗಿದ್ದರು.




### ಐಸಿಸಿ ಫೈನಲ್‌ನಲ್ಲಿ ಪಂದ್ಯಶ್ರೇಷ್ಠ ಪ್ರಶಸ್ತಿ ಗೆದ್ದ ಕ್ಯಾಪ್ಟನ್ಸ್

- **ಕ್ಲೈವ್ ಲಾಯ್ಡ್ (ವೆಸ್ಟ್ ಇಂಡೀಸ್) 1975 ಏಕದಿನ ವಿಶ್ವಕಪ್**
- **ರಿಕಿ ಪಾಂಟಿಂಗ್ (ಆಸ್ಟ್ರೇಲಿಯಾ) 2003 ಏಕದಿನ ವಿಶ್ವಕಪ್**
- **ಎಂ.ಎಸ್. ಧೋನಿ (ಭಾರತ) 2011 ಏಕದಿನ ವಿಶ್ವಕಪ್**
- **ರೋಹಿತ್ ಶರ್ಮಾ (ಭಾರತ) 2025 ಚಾಂಪಿಯನ್ಸ್ ಟ್ರೋಫಿ**

**ಯಾವ ವರ್ಷ? ಯಾರು ಚಾಂಪಿಯನ್ಸ್?:** 1998-99ರ ಚೊಚ್ಚಲ ಆವೃತ್ತಿಯಲ್ಲೇ ಚೋಕರ್ಸ್ ದಕ್ಷಿಣ ಆಫ್ರಿಕಾ ಟ್ರೋಫಿ ಮುಡಿಗೇರಿಸಿಕೊಂಡಿತ್ತು. 2000-01ರ ಆವೃತ್ತಿಯಲ್ಲಿ ನ್ಯೂಜಿಲೆಂಡ್ ಟ್ರೋಫಿ ಗೆದ್ದುಕೊಂಡಿತ್ತು. ಆದ್ರೆ 2002-03ರ ಆವೃತ್ತಿಯಲ್ಲಿ 2 ದಿನ ಫೈನಲ್ ನಡೆದರೂ ಮಳೆಗೆ ಪಂದ್ಯ ಬಲಿಯಾಯ್ತು. ಆದ್ದರಿಂದ ಭಾರತ ಮತ್ತು ಶ್ರೀಲಂಕಾವನ್ನ ಜಂಟಿಯಾಗಿ ಚಾಂಪಿಯನ್ಸ್ ಎಂದು ಘೋಷಿಸಲಾಯಿತು. ಇನ್ನೂ 2004ರಲ್ಲಿ ವೆಸ್ಟ್ ಇಂಡೀಸ್, 2006-07, 2009-10ರಲ್ಲಿ ಆಸ್ಟ್ರೇಲಿಯಾ, 2013ರಲ್ಲಿ ಭಾರತ, 2017ರಲ್ಲಿ ಪಾಕಿಸ್ತಾನ ಚಾಂಪಿಯನ್ ಆಗಿತ್ತು. 2000, 2017ರಲ್ಲಿ ಭಾರತ ಫೈನಲ್ ತಲುಪಿದ್ರೂ ಟ್ರೋಫಿ ಗೆಲ್ಲುವ ಅವಕಾಶ ಕಳೆದುಕೊಂಡಿತ್ತು. 2000 ಇಸವಿಯಲ್ಲಿ ಕಿವೀಸ್ ವಿರುದ್ಧ, 2017ರಲ್ಲಿ ಪಾಕಿಸ್ತಾನದ ವಿರುದ್ಧ ಫೈನಲ್‌ನಲ್ಲಿ ಸೋತು ನಿರಾಸೆ ಅನುಭವಿಸಿತ್ತು. ಸದ್ಯ 25 ವರ್ಷಗಳ ಬಳಿಕ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಿವೀಸ್ ವಿರುದ್ಧ ಗೆದ್ದು ಭಾರತ ಸೇಡು ತೀರಿಸಿಕೊಂಡಿದೆ.

# ನಾಡಿನ ಪ್ರತಿ ಗ್ರಾಮದಲ್ಲಿ ಭೈರಪ್ಪರಂಥವರು ಹುಟ್ಟಿದ್ರೆ ನಾಡು ಶ್ರೀಮಂತವಾಗುತ್ತೆ: ಬೊಮ್ಮಾಯಿ

**ಹಾಸನ:** ಜನರು ಪ್ರಜಾಪ್ರಭುತ್ವದಲ್ಲಿ ನಂಬಿಕೆ ಕಳೆದುಕೊಳ್ಳುವ ಮುಂಚೆ, ಜನರಿಗೆ ಕುಡಿಯುವ ನೀರು, ಭೂಮಿಗೆ ನೀರು, ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಸೂರು. ಒಳ್ಳೆಯ ಗಾಳಿ, ದುಡಿಮೆಗೆ ಒಳ್ಳೆಯ ಬೆಲೆ. ಬದುಕಿನಲ್ಲಿ ಸಾಧನೆ ಮಾಡಲು ಅವಕಾಶ ಮಾಡಿಕೊಳ್ಳದಿದ್ದರೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಕಳೆದುಕೊಳ್ಳುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ಭಾನುವಾರ ಹಾಸನ ಜಿಲ್ಲೆಯ ಚನ್ನರಾಯಪಟ್ಟಣದ ಸಂತೆಶಿವರ ಗ್ರಾಮದಲ್ಲಿ ಹಿರಿಯ ಸಾಹಿತಿ ಎಸ್.ಎಲ್.ಭೈರಪ್ಪ ಅವರಿಗೆ ಹುಟ್ಟೂರಿನಲ್ಲಿ ಏರ್ಪಡಿಸಿದ್ದ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬದುಕಿನ ಸಾಕ್ಷಾತ್ಕಾರಕ್ಕೆ ಎರಡು ವಿಷಯ ಬಹಳ ಮುಖ್ಯ, ಒಂದು ಜ್ಞಾನ ಇನ್ನೊಂದು ಧ್ಯಾನ. ಇವೆರಡರ ಸಾಧನೆಯನ್ನು ನಮ್ಮೆಲ್ಲರ ಅಭಿಮಾನದ ಹಲವಾರು ಪ್ರಶಸ್ತಿಗೆ ಪಾತರಾಗಿರುವ ಎಸ್.ಎಲ್. ಭೈರಪ್ಪ ಒಲಿಸಿಕೊಂಡಿದ್ದಾರೆ. ಬದುಕಿನಲ್ಲಿ ನಮ್ಮ ಮುಗ್ಧತೆ ಕಾಪಾಡಿಕೊಂಡು ಹೋಗುವುದು ಬಹಳ ಕಷ್ಟ. ಮಕ್ಕಳಿದ್ದಾಗ ನಮ್ಮ ಮುಖ ಮುಗ್ಧತೆಯಿಂದ ಕೂಡಿರುತ್ತದೆ. ಯಾಕೆಂದರೆ ಹೃದಯ ಮುಗ್ಧತೆಯಿಂದ ಕೂಡಿರುತ್ತದೆ. ದೊಡ್ಡವರಾದ ಮೇಲೆ ಆಕಾರ ವಿಕಾರ ಆಗಿರುತ್ತದೆ. ಭೈರಪ್ಪರ ಮುಗ್ಧತೆ ಈಗಲೂ ಇದೆ. ಅವರಲ್ಲಿ ಮಗುವಿನ ಮುಗ್ಧತೆ ಇದೆ. ಆತ್ಮಸಾಕ್ಷಿಯಾಗಿ ನಡೆದುಕೊಳ್ಳುವುದು ಬಹಳ ದೊಡ್ಡ ಸವಾಲು. ರಾಜಕಾರಣಿಗಳಿಗೆ ಆತ್ಮಸಾಕ್ಷಿ ಇರುವುದಿಲ್ಲ, ಭೈರಪ್ಪನವರು ಬದುಕನ್ನು ಅನುಭವಿಸಿ ಬರಹ ಬರೆದಿದ್ದಾರೆ.





ಬರಹದಿಂದ ಬದುಕನ್ನು ಶ್ರೀಮಂತಗೊಳಿಸಿದ್ದಾರೆ. ಕನ್ನಡ ನಾಡು ಬಹಳ ಶ್ರೀಮಂತ ಅಂತ ನಾವು ಕರೆಯುತ್ತೇವೆ. ಆರ್ಥಿಕವಾಗಿ ಶ್ರೀಮಂತರಿದ್ದರೆ ಅವರು ಶ್ರೀಮಂತರಲ್ಲ. ಶ್ರೀಮಂತಿಕೆ ವ್ಯಕ್ತಿಯ ಆರ್ಥಿಕ ಶ್ರೀಮಂತಿಕೆಯಿಂದ ಬರುವುದಿಲ್ಲ. ನಮ್ಮ ಸಂಸ್ಕೃತಿ, ಪರಂಪರೆ, ಕನ್ನಡ ನಾಡಿನ ಸಾತ್ವಿಕತೆ, ಕನ್ನಡ ನಾಡಿನಂತಹ ಹೃದಯವಂತ ಜನರು ಜಗತ್ತಿನ ಎಲ್ಲಿಯೂ ಸಿಗುವುದಿಲ್ಲ. ಕನ್ನಡ ನಾಡು ಶ್ರೀಮಂತ ಆಗಿರುವುದು ನಮ್ಮನ್ನಾಳಿದ ಮೈಸೂರು ಮಹಾರಾಜರು, ಹೊಯ್ಸಳರು, ಕದಂಬರು ಈ ನಾಡನ್ನು ಶ್ರೀಮಂತಗೊಳಿಸಿದ್ದಾರೆ. ಅದನ್ನು ಉಳಿಸಿದವರು ಸಾಹಿತಿಗಳು, ಕಲಾವಿದರು, ಶಿಲ್ಪಿಗಳು ಇದನ್ನು ಶ್ರೀಮಂತವಾಗಿಟ್ಟಿದ್ದಾರೆ. ಫಲವತ್ತಾದ ಮಣ್ಣು, ಅಮೃತದಂತಹ ನೀರು, ಶುದ್ಧವಾದ ಗಾಳಿ, ನಮ್ಮ ಜೀವಂತಿಕೆಯ ಆಧಾರ ಶ್ರೀಮಂತವಾಗಿದೆ. ಅದಕ್ಕೆ ಕನ್ನಡ ನಾಡು ಶ್ರೀಮಂತವಾಗಿದೆ. ಅಂತಹ ಶ್ರೀಮಂತಿಕೆ ಪುತ್ರ, ನಮ್ಮೂರಿನಲ್ಲಿ ಹುಟ್ಟಿದ್ದಾರೆ ಎಂದರೆ ಎಲ್ಲರೂ ಪುಣ್ಯವಂತರು ಎಂದು ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com